ಸಂಪುಟ: 14 Volume | ಸಂಚಿಕೆ: 60 Issue | ಪುಟಗಳು 08 Pages | ಭಾನುವಾರ 07 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಸತ್ಯವನ್ನು ಹೇಳುವವನು, ಸ್ವಾರ್ಥವನ್ನು ಗೆದ್ದವನು ನಿಜವಾದ ಸುಖಿ.


–ಬುದ್ಧ

# ಮಲ್ಲಮ್ಮ ನುಡಿ

MN
ಕನ್ನಡ ಕಿರಣ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ



ಸಿಂದಗಿಯ ಶ್ರೀ ಡಾ. ಪ್ರಭುಸಾರಂಗದೇವ ಶಿವಾಚಾರ್ಯರು, ಸೊಲ್ಲಾಪುರದ ಶ್ರೀ ಶ್ರೀಕಂಠ ಶಿವಾಚಾರ್ಯರು, ಹುಕ್ಕೇರಿಯ ಶ್ರೀ ಚಂದ್ರಶೇಖರ ಶಿವಾಚಾರ್ಯರು, ಶಿವಗಂಗೆಯ ಶ್ರೀ ಡಾ ಮಲಯ ಶಾಂತಮುನಿ ಶಿವಾಚಾರ್ಯರು, ಬೆಂಗಳೂರಿನ ಶ್ರೀ ಡಾ ಮಹಾಂತಲಿಂಗ ಶಿವಾಚಾರ್ಯರು, ಶಹಾಪುರದ ಶ್ರೀ ಸೂಗೂರೇಶ್ವರ ಶಿವಾಚಾರ್ಯರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಶನಿವಾರ ಭೇಟಿ ಮಾಡಿ ಆಶೀರ್ವದಿಸಿದರು. ಸಚಿವ ಈಶ್ವರ್ ಖಂಡ್ರೆ, ಶಾಸಕ ವಿಜಯಾನಂದ ಕಾಶಪ್ಪನವರ ಉಪಸ್ಥಿತರಿದ್ದರು.



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಅವರನ್ನು ಅಭಿನಂದಿಸಲು ಆಗಮಿಸಿದ್ದ ಗೃಹ ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಲೋಕ ನಾಯಕ ಭೀಮಣ್ಣ ಖಂಡ್ರೆ ಅಭಿನಂದನಾ ಗ್ರಂಥ ನೀಡಿ ಸ್ವಾಗತಿಸಿದರು.

## ಲಯನ್ಸ್ ಕ್ಲಬ್ ಕಾರ್ಯದರ್ಶಿಗೆ ಸನ್ಮಾನ



**ಯಾದಗಿರಿ:** ಲಯನ್ಸ್ ಕ್ಲಬ್ ಕಾರ್ಯದರ್ಶಿಯಾಗಿ ನೇಮಕಗೊಂಡ ಶಶಿ ಸೂಪರ್ ಬಜಾರ್ ಮಾಲೀಕ ಹಾಗೂ ಶಶಿ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ಮಲ್ಲಿಕಾರ್ಜುನ ಶಿರಗೋಳ ರವರಿಗೆ ಸಮನ್ವಯ ಸೇವಾ ಸಂಸ್ಥೆಯ ಅಧ್ಯಕ್ಷ ಡಿ.ಕೆ.ದೇವಿಂದ್ರ ರವರು ನಗರದ ಶಶಿ ಸೂಪರ್ ಬಜಾರ್ ಕಾರ್ಯಾಲಯ ದಲ್ಲಿ ಗೌರವಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಅಂಬೇಡ್ಕರ್ ಸೇನೆಯ ಜಿಲ್ಲಾಧ್ಯಕ್ಷ ಭೀಮಶಂಕರ್ ಎಂ ಯರಗೋಳ, ವಿಠ್ಠಲ್ ಸೇವಾ ಸಂಸ್ಥೆಯ ಅಧ್ಯಕ್ಷ ವಿಠ್ಠಲ್, ಬಸವರಾಜ ಸಜ್ಜನ್ ಮುಂತಾದವರಿದ್ದರು.



**ಬೆಂಗಳೂರು:** ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರಾದ ಈಶ್ವರ ಬಿ ಖಂಡ್ರೆರವರಿಗೆ ಬೀದರ್ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲರವರು ಬೆಂಗಳೂರನಲ್ಲಿ ಸನ್ಮಾನಿಸಿದರು.

## ಸಸಿ ನೆಡುವ ಮೂಲಕ ಪರಿಸರ ದಿನ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಗ್ರಾಮೀಣ ಬಿಜೆಪಿ ಯುವಮೋರ್ಚಾ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಭಾರತೀಯ ಜನತಾ ಪಾರ್ಟಿಯ ಗಂಗಾವತಿ ಗ್ರಾಮೀಣ ಯುವಮೋರ್ಚಾ ವತಿಯಿಂದ ಕೆಸರಟ್ಟಿ ಗ್ರಾಮದ ಗದ್ದಡಕಿ ಲಿಂಗಣ್ಣ ಪ್ರೌಢಶಾಲೆಯ ಸಹಯೋಗದೊಂದಿಗೆ ಶಾಲೆಯ ಆವರಣದಲ್ಲಿ 26 ನೆರಳು ಕೊಡುವ ಮರಗಳ ಸಸಿಗಳನ್ನು ನೆಡುವ ಮೂಲಕ ಆಚರಿಸಲಾಯಿತು.

ಈ ಬಾರಿಯ ವಿಶೇಷವೆಂದರೆ, ಈ 2026ನೇ ಇಸ್ವಿಯಲ್ಲಿ 26 ಸಸಿ ನೆಡುವ ಮೂಲಕ ಚಾಲನೆ ನೀಡಲಾಯಿತು. ಈ ಸಸಿ ನೆಡುವ ಕಾರ್ಯಕ್ರಮಕ್ಕೆ ಶಾಲೆಯ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಸದಸ್ಯರಾದ ಜಿ. ಮಂಜುನಾಥ ಹಾಗೂ ಟಿ.ಎ.ಪಿ.ಸಿ.ಎಂ.ಎಸ್ ಅಧ್ಯಕ್ಷರಾದ ಚನ್ನಪ್ಪ ಮಳಗಿ ವಕೀಲರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗಂಗಾವತಿ ಗ್ರಾಮೀಣ ಯುವಮೋರ್ಚಾ



ಅಧ್ಯಕ್ಷರಾದ ವಿಶ್ವನಾಥ ಮಾಲಿಪಾಟೀಲ್ ಮಾತನಾಡಿ, ಪರಿಸರದಲ್ಲಿನ ಸಮತೋಲನ ಕಾಪಾಡಿಕೊಳ್ಳಲು ಗಿಡಮರಗಳು ಹೆಚ್ಚಿನ ಸಂಖ್ಯೆಯಲ್ಲಿರುವುದು ಅನಿವಾರ್ಯ, ಆ ನಿಟ್ಟಿನಲ್ಲಿ ಯುವಕರು, ಶಾಲಾ ಮಕ್ಕಳು ಸಸಿಗಳನ್ನು ನೆಡುವ ಮೂಲಕ ಸಸಿಗಳ ಬೆಳವಣಿಗೆಗೆ ಮಹತ್ವ ಕೊಡಬೇಕೆಂದು ಕರೆಕೊಟ್ಟರು.

ಈ ಸಂದರ್ಭದಲ್ಲಿ ಶಾಲಾ ಆಡಳಿತ ಮಂಡಳಿಯವರು, ಊರಿನ ಪ್ರಮುಖರಾದ ಸಿದ್ದಯ್ಯಸ್ವಾಮಿ ಹಿರೇಮಠ, ಯಮನೇಗೌಡ ವಕೀಲರು, ನಾಗರಾಜ ಹಂಚಿನಾಳ, ಬಾಲನಗೌಡ, ಶಿವಕುಮಾರ ಸ್ವಾಮಿ, ಬಸವರಾಜ್. ಹನುಮಂತಪ್ಪ ಉಪ್ಪಾರ್, ಹುಲುಗಪ್ಪ ನಾಯಕ್, ದೇವರಾಜ್ ನಾಯಕ್, ಮತ್ತಿತರರು ಇದ್ದರು.

## ಕೋರ್ಟ್ ವಿಚಾರಣೆಗೆ ಗೈರು: ಬಂಧನ ಭೀತಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕೋರ್ಟ್ ವಿಚಾರಣೆಗೆ ಗೈರಾದ ಹಿನ್ನೆಲೆ ಬಸವಕಲ್ಯಾಣ ಬಿಜೆಪಿ ಶಾಸಕ ಶರಣು ಸಲಗರ್‌ಗೆ ಜಾಮೀನು ರಹಿತ ವಾರಂಟ್ ಜಾರಿಯಾಗಿದೆ. ಹೌದು ಕೋರ್ಟ್ ವಿಚಾರಣೆಗೆ ಗೈರು ಹಿನ್ನೆಲೆಯಲ್ಲಿ ಬಸವಕಲ್ಯಾಣ ಬಿಜೆಪಿ ಶಾಸಕ ಶರಣು ಸಲಗಾರಗೆ ಬಂಧನದ ಭೀತಿ ಎದುರಾಗಿದೆ. ಯಾವುದೇ ಕ್ಷಣದಲ್ಲಿ ಶರಣು ಸಲಗಾರ್ ಅರೆಸ್ಟ್ ಆಗುವ ಸಾಧ್ಯತೆ ಇದೆ.

ಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಪೊಲೀಸರು ಶರಣು ಸಲಗಾರ ಬಂಧನಕ್ಕೆ ಮುಂದಾಗಿದ್ದಾರೆ. ಹಾಗಾಗಿ ಶಾಸಕ ಶರಣು ಸಲಗರ ಮನೆಗೆ ಪೋಲಿಸರು ಆಗಮಿಸಿದ್ದು ಸಿ.ಪಿ.ಐ ಅಲಿಸಾಬ್ ಹಾಗೂ ಪಿ ಎಸ್ ಐ ಚಂದ್ರಶೇಖರ್ ಬೀದರ್ ಜಿಲ್ಲೆಯ ಬಸವಕಲ್ಯಾಣದ ಬಿಜೆಪಿ ಶಾಸಕ ಶರಣು ಸಲಗಾರ್ ಮನೆಗೆ ಭೇಟಿ ನೀಡಿದ್ದಾರೆ.

ಅಕ್ರಮವಾಗಿ ಗೋಹತ್ಯೆ ಆರೋಪ ಪ್ರಕರಣವನ್ನು



ತನಿಖೆ ನಡೆಸಿದ ಪೊಲೀಸರು ಈಗಾಗಲೇ ಕೋರ್ಟ್‌ಗೆ ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ. ಈ ಸಂಬಂಧ ನಡೆಯಬೇಕಿದ್ದ ಸಾಕ್ಷ್ಯವಿಚಾರಣೆಗೆ ಶಾಸಕ ಸಲಗಾರ್ ಗೈರಾಗಿದ್ದು, ಈ ಹಿನ್ನೆಲೆ ಬೆಂಗಳೂರಿನ 42ನೇ ಎಸಿಜೆಎಂ ಕೋರ್ಟ್‌ನಿಂದ ವಾರಂಟ್ ಜಾರಿಯಾಗಿದೆ. 2023ರ ಜು.1ರಂದು ಬಕ್ರೀದ್ ಹಬ್ಬದ ವೇಳೆ ಅಕ್ರಮವಾಗಿ ಗೋಹತ್ಯೆ ಮಾಡಿದ್ದಾರೆಂದು ಆರೋಪಿಸಿ, ಗಲಾಟೆ ಮಾಡಿದ್ದರು. ಮುಸ್ಲಿಂ ಸಮುದಾಯದ ಮನೆಯೊಂದಕ್ಕೆ ಹೋಗಿ ಗೋಹತ್ಯೆ ತಡೆದಾಗ ಗಲಾಟೆ ಶುರುವಾಗಿತ್ತು.

# ಕೈಸುಡುತ್ತಿರುವ ಖಾತೆ ಕಿಡಿ

## ಕಾಂಗ್ರೆಸ್ ಸರ್ಕಾರದಲ್ಲಿ ಭಿನ್ನಮತ ನಿಚ್ಚಳ | ದಿಲ್ಲಿಯ ಹೈಕಮಾಂಡ್ ಒಳಗೊಳಗೇ ತಳಮಳ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಭಿನ್ನಮತ ನಿಚ್ಚಳವಾಗಿದೆ. ಸರ್ಕಾರ ರಚನೆಯಾದ ಕೆಲವೇ ದಿನಗಳಲ್ಲಿ ಸಚಿವ ಸಂಪುಟದ ಖಾತೆ ಹಂಚಿಕೆ ವಿಚಾರ ಪಕ್ಷದೊಳಗೆ ಅಸಮಾಧಾನಕ್ಕೆ ಕಾರಣವಾಗಿದೆ.


ಹಿರಿಯ ನಾಯಕ ರಾಮಲಿಂಗಾರೆಡ್ಡಿ ಅವರಿಗೆ ನಿರೀಕ್ಷಿತ ಖಾತೆ ಸಿಗದ ಹಿನ್ನೆಲೆಯಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ಸರ್ಕಾರದೊಳಗಿನ ಶೀತಲ ಸಮರಕ್ಕೆ ಸಾಕ್ಷಿಯಾಗಿದೆ.

**ಖಾತೆ ಹಂಚಿಕೆ ಅಸಂತೃಪ್ತಿ:** ಈ ಬೆಳವಣಿಗೆಯ ನಡುವೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಕೂಡ ಹಲವು ಸಚಿವರು ತಮ್ಮ ಖಾತೆಗಳ ಬಗ್ಗೆ ಸಂತೃಪ್ತರಾಗಿಲ್ಲ ಎಂದು ಬಹಿರಂಗವಾಗಿ ಹೇಳಿರುವುದು ಕಾಂಗ್ರೆಸ್ ನಾಯಕತ್ವಕ್ಕೆ ಹೊಸ ತಲೆನೋವಾಗಿ ಪರಿಣಮಿಸಿದೆ.

**21 ಸ್ಥಾನ ಬಾಕಿ ಇದೆ:** ಸಚಿವ ಸಂಪುಟದ ಕೇವಲ 13 ಖಾತೆಗಳು ಮಾತ್ರ ಹಂಚಿಕೆಯಾಗಿದ್ದು, ಇನ್ನೂ 21 ಸಚಿವರ ನೇಮಕಾತಿ ಬಾಕಿಯಿದೆ. ಜೂನ್ 18ರಂದು ನಡೆಯಲಿರುವ ರಾಜ್ಯಸಭೆ ಮತ್ತು ವಿಧಾನ ಪರಿಷತ್ ಚುನಾವಣೆಗಳ ಬಳಿಕ ಸಂಪುಟ ವಿಸ್ತರಣೆ ನಡೆಯುವ ಸಾಧ್ಯತೆ ಇದೆ.

### ಸಿಎಂ ಡಿಕೆಶಿ ಹೇಳಿದ್ದೇನು?

ಸಚಿವ ಸಂಪುಟದಲ್ಲಿ ಖಾತೆ ಹಂಚಿಕೆ ವಿಚಾರವಾಗಿ ಅಸಮಾಧಾನಗೊಂಡು ರಾಜೀನಾಮೆ ನೀಡಿದ್ದ ಕಾಂಗ್ರೆಸ್ ಹಿರಿಯ ನಾಯಕ ರಾಮಲಿಂಗಾ ರೆಡ್ಡಿ ಅವರ ಮನವೊಲಿಸಲು ಡಿಕೆಶಿ ನಡೆಸಿದ ಯತ್ನ ಯಶಸ್ವಿಯಾಗಿದೆ. ಖಾತೆ ಬಗ್ಗೆ ಉಂಟಾಗಿದ್ದ ರಾಮಲಿಂಗಾ ರೆಡ್ಡಿ ಅವರ ರಾಜೀನಾಮೆ ವಿವಾದ ಇದೀಗ ಬಗೆಹರಿದಿದೆ ಎಂದು ಸಿಎಂ ಡಿಕೆ.ಶಿವಕುಮಾರ್ ತಿಳಿಸಿದ್ದಾರೆ.



### ಆರದ ಜಮೀರ್ ಅಹ್ಮದ್‌ಖಾನ್ ಕಿಚ್ಚು..!

ಬೆಂಗಲೂರು, ಚಿಕ್ಕಬಳ್ಳಾಪುರ, ವಿಜಯನಗರ ಸೇರಿ ರಾಜ್ಯದ ಅನೇಕ ಕಡೆ ಜಮೀರ್ ಅಹ್ಮದ್ ಖಾನ್ ಅವರ ಅಭಿಮಾನಿಗಳಿ ಸಚಿವ ಸಂಪುಟದಲ್ಲಿ ಜಮೀರ್‌ಗೆ ಸ್ಥಾನ ಕಲ್ಪಿಸಬೇಕೆಂದು ಆಗ್ರಹಿಸಿದ್ದಾರೆ. ಮುಸ್ಲಿಂ ಸಮುದಾಯಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡುವಂತೆ ಅಂಜುಮನ್–ಇ–ಇಸ್ಲಾಂ ಸಂಘಟನೆಯ ಮುಖಂಡರು ಕಾಂಗ್ರೆಸ್ ಹೈಕಮಾಂಡ್‌ಗೆ ಒತ್ತಾಯಿಸಿದ್ದಾರೆ.

### ಹೈಕಮಾಂಡ್ ಎಂಟ್ರಿ..?


ಪಕ್ಷದೊಳಗೆ ಎಸ್ಸಿ ಸಮುದಾಯದ ವಿವಿಧ ಉಪವರ್ಗಗಳ ನಡುವೆ ಖಾತೆ ಹಂಚಿಕೆ ಕುರಿತು ಅಸಮಾಧಾನ ವ್ಯಕ್ತವಾಗಿದೆ. ಪ್ರಿಯಾಂಕ್ ಖರ್ಗೆ ಅವರಿಗೆ ಪ್ರಮುಖ ಗೃಹ ಖಾತೆ ನೀಡಿರುವುದರ ಬಗ್ಗೆ ಕೆಲ ನಾಯಕರು ಪ್ರಶ್ನೆ ಎತ್ತಿದ್ದಾರೆ. ಈ ನಡುವೆ ಮಾಜಿ ಸಚಿವ ಹೆಚ್.ಕೆ.ಪಾಟೀಲ್, ರಾಮಲಿಂಗಾ ರೆಡ್ಡಿ ರಾಜೀನಾಮೆಯನ್ನು ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿ ಸಮಸ್ಯೆ ಬಗೆಹರಿಸಬೇಕು ಎಂದಿದ್ದಾರೆ.

### ಜಿಬಿಎ ಮೇಲೆ ರೆಡ್ಡಿ ಎಫೆಕ್ಟ್?

ರಾಮಲಿಂಗಾರೆಡ್ಡಿ ಅವರು ಬೇಡಿದ ಖಾತೆ ನೀಡಿ ಸಮಸ್ಯೆ ಬಗೆಹರಿಸದಿದ್ದರೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ಪಾಲಿಕೆಗಳ ಚುನಾವಣೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಬಹುದೆಂಬ ಆತಂಕ ಇದೆ. ಎಂಟು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ರಾಮಲಿಂಗಾ ರೆಡ್ಡಿ, ಬೆಂಗಳೂರು ಅಭಿವೃದ್ಧಿ ಖಾತೆಯ ಮೇಲೆ ಕಣ್ಣಿಟ್ಟಿದ್ದು ಸಿಗದಿದ್ದಕ್ಕೆ ರಾಜಿನಾಮೆ ನೀಡಿದ್ದಾರೆ.

## ಸುರ್ಜೆವಾಲ, ಡಿಕೆಶಿ ಸಂಧಾನ, ರೆಡ್ಡಿ ನಡೆ..?

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ರಾಜ್ಯ ಉಸ್ತುವಾರಿ ಸುರ್ಜೆವಾಲ ಹಾಗೂ ರಾಮಲಿಂಗಾರೆಡ್ಡಿ ನಡುವಿನ ಸಂಧಾನ ವಿಫಲವಾಗಿದೆ. ಆದರೆ ಸುರ್ಜೆವಾಲ ಮಾತ್ರ ಎಲ್ಲವೂ ಸರಿಹೋಗಿದೆ ಎಂದು ತುಪ್ಪ ಸವರಿದ್ದಾರೆ. ಏತನ್ಮಧ್ಯೆ ಪ್ರತಿಕ್ರಿಯಿಸಿರುವ ರಾಮಲಿಂಗಾರೆಡ್ಡಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕಾಂಗ್ರೆಸ್ ಹೈಕಮಾಂಡ್ ನಡುವೆ ನಡೆಯಲಿರುವ ಚರ್ಚೆಯ ಫಲಿತಾಂಶಕ್ಕಾಗಿ ಕಾಯುತ್ತಿರುವೆ ಎಂದು ಸ್ಪಷ್ಟಪಡಿಸಿದ್ದಾರೆ.

ಖಾತೆ ಹಂಚಿಕೆ ವಿಚಾರವಾಗಿ ಬಹಿರಂಗವಾಗಿಯೇ ಬಂಡಾಯವೆದ್ದಿದ್ದ ರಾಮಲಿಂಗಾ ರೆಡ್ಡಿ ತಮ್ಮ ಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಿದ್ದರು. ಆದರೆ ಈ ರಾಜಿನಾಮೆಯನ್ನು ಸಿಎಂ ಡಿಕೆ ಶಿವಕುಮಾರ್ ಇನ್ನೂ ಅಂಗೀಕರಿಸಿಲ್ಲ. ಈ ನಡುವೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಾಂಗ್ರೆಸ್ ಹೈಕಮಾಂಡ್ ಕೈಗೊಳ್ಳುವ ನಿರ್ಧಾರಕ್ಕಾಗಿ ಕಾಯುತ್ತೇನೆ ಎಂದು ಪುನರುಚ್ಚರಿಸಿದ್ದಾರೆ. ಬೆಂಗಳೂರಿನ ಅಭಿವೃದ್ಧಿ ಖಾತೆ (ಬೆಂಗಳೂರು ಡೆವಲಪ್ಮೆಂಟ್) ಬದಲಿಗೆ ಬೃಹತ್ ಮತ್ತು ಮಧ್ಯಮ ನೀರಾವರಿ ಖಾತೆ ನೀಡಿದ್ದನ್ನು ವಿರೋಧಿಸಿ ಸಚಿವ ಸ್ಥಾನಕ್ಕೆ ರಾಜೀನಾಮೆ ಘೋಷಿಸಿದ್ದ ಹಿರಿಯ ಕಾಂಗ್ರೆಸ್ ನಾಯಕ, ಸಮಸ್ಯೆ ಬಗೆಹರಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಹಿರಿಯ ನಾಯಕರು ಪ್ರಯತ್ನಿಸುತ್ತಿದ್ದಾರೆ ಎಂದು ಮೂಲಗಳು ಖಚಿತ ಪಡಿಸಿವೆ.

# ತಾಳ ತಪ್ಪಿದ ತಾಳಮಡಗಿ, ಡೆಂಗೆ ಟೈಫಾಯಿಡ್..!

• ರಾಜ್‌ಕುಮಾರ್ ಹಡಪದ, ಚಿಟಗುಪ್ಪ

ತಾಲೂಕಿನ ತಾಳಮಡಗಿ ಗ್ರಾಮ ಪಂಚಾಯಿತಿಯಲ್ಲಿ ಸೊಳ್ಳೆ, ಕಾಲರಾ, ಟೈಫಾಯಿಡ್, ಡೆಂಗೆ ಜ್ವರದ ಹಾವಳಿಗೆ ಜನತೆ ತತ್ತರಿಸಿದ್ದಾರೆ. ಜೊತೆಗೆ ಶುದ್ಧ ಕುಡಿಯುವ ನೀರಿನ ಸಮಸ್ಯೆಗಳಿಂದಾಗಿ ನಾಗರಿಕರು ಹೈರಾಣಾಗಿದ್ದಾರೆ.

ಇಲ್ಲಿ ಮೂಲಭೂತ ಸೌಲಭ್ಯಗಳೇ ಕಣ್ಮರೆಯಾಗಿವೆ. ಗ್ರಾ.ಪಂ.ವ್ಯಾಪ್ತಿಯಲ್ಲಿ 4 ಗ್ರಾಮಗಳಿದ್ದು, ತಾಳಮಡಗಿ 3000, ಕಂದಗುಳ 1700, ವಡನಕೇರಾ 1454, ಹಿಪರ್ಗಿ 789 ಒಟ್ಟು ಒಟ್ಟು 6943 ಜನ ಸಂಖ್ಯೆ ಇದೆ. ಸ್ವಚ್ಛತೆ ಮಾತ್ರ ಕೇಳಬೇಡಿ..!

**ಎಲ್ಲಾ ಸೌಲಭ್ಯ ಮಂಗಮಾಯ:** ಬೆಂಗಳೂರಿನಿಂದ ಬೀದರ್ ಜಿಲ್ಲೆಯವರೆಗೆ ಸರ್ಕಾರಿ ಸೌಲಭ್ಯಗಳು ತಲುಪುವುದರೊಳಗೆ ಎಲ್ಲಾ ಮಂಗಮಾಯವಾಗಿವೆ. ಸ್ವಚ್ಛತೆಯೇ ಮರೀಚಿಕೆ ಆಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

**ಪಂಚಾಯಿತಿ ಫಜೀತಿ**



**ಅನುದಾನ ಎಲ್ಲಿಗೆ ಹೋಗುತ್ತಿದೆ?**



### ಗಬ್ಬು ನಾರುವ ಪ್ರತಿಯೊಂದು ಬೀದಿ..!

ಗ್ರಾಮದ ಪ್ರತಿಯೊಂದು ಓಣಿಯಲ್ಲೂ ಸ್ವಚ್ಛತೆ ಇಲ್ಲದೆ ಗಬ್ಬು ನಾರುತ್ತಿದೆ. ಹಲವಾರು ಬಾರಿ ಗ್ರಾ.ಪಂ.ಗೆ ಹೋಗಿ ಅಧಿಕಾರಿಗಳಿಗೆ ದೂರು ನೀಡಿದರೂ ಪ್ರಯೋಜನೆ ಆಗುತ್ತಿಲ್ಲ, ಮಳೆಗಾಲ ಪ್ರಾರಂಭವಾಗಿದೆ ಹಲವಾರು ಸಾಂಕ್ರಾಮಿಕ ರೋಗಗಳು ಬರುವ ಸಾಧ್ಯತೆ ಇದೆ, ಆದರೂ ಅಧಿಕಾರಿಗಳು ಸ್ವಚ್ಛತೆಗೆ ಆದ್ಯತೆ ನೀಡುತ್ತಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ನಮ್ಮ ಗ್ರಾಮದ ಬೀದಿಗಳಲ್ಲಿಹಾಗೂ ಶಾಲೆಯ ಸುತ್ತ ಮುತ್ತಲು ಸ್ವಚ್ಛತೆ ಇಲ್ಲ. ವಿದ್ಯುತ್ ಕಂಬಗಳು ಹೆಸರಿಗೆ ಮಾತ್ರ ಇವೆ. ಅವುಗಳಿಗೆ ದೀಪಗಳೇ ಇಲ. ರಾತ್ರಿ ವೇಳೆ ಕತ್ತಲಲ್ಲೇ ಭಯದಿಂದ ಬದುಕುತ್ತಿದ್ದೇವೆ. ಮೂಲಭೂತ ಸೌಕರ್ಯಗಳನ್ನು ಒದಗಿಸಿ ಎಂದು ಗ್ರಾಮ ಪಂಚಾಯತ್ ಗೆ ಹೋಗಿ ಕೇಳಿದರೆ ಅಧಿಕಾರಿಗಳು ಆಯ್ತು ಮಾಡೋಣ ಎಂದು ಹೇಳುತ್ತಾರೆ ಆದರೆ ಮಾಡುವುದಿಲ್ಲ, ಮತ್ತೆ ನಾವು ಕಚೇರಿಗೆ ಹೋಗಿ ಕೇಳಿದ್ದಾಗ ಸ್ವಚ್ಛತೆಗೊಳಿಸುವರಿಗೆ ಕೂಡಲ ಹಣ ಇಲ್ಲ ಎಂದು ಹೇಳುತ್ತಾರೆ.

–ಧೂಳಪ್ಪ ಹಡಪದ, ಸ್ಥಳೀಯ ನಿವಾಸಿ

ಸಮಸ್ಯೆ ಬಗ್ಗೆ ಹರಿಸಲು ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ಸ್ಥಳಕ್ಕೆ ಭೇಟಿ ನೀಡಲು ಸೂಚಿಸುತ್ತೇನೆ ಹಾಗೂ ನಾನು ವೈಯಕ್ತಿಕ, ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಬಗ್ಗೆ ಹರಿಸುತ್ತೇನೆ.

–ಲಿಂಗರಾಜ ಪಾಟೀಲ್
ಇಒ, ಚಿಟಗುಪ್ಪ.

## ರಾಮಲಿಂಗಾ ರೆಡ್ಡಿ ರಾಜೀನಾಮೆ ವಿವಾದಕ್ಕೆ ತೆರೆ: ಎಲ್ಲವೂ ಬಗೆಹರಿದಿದೆ– ಡಿ.ಕೆ ಶಿವಕುಮಾರ್, ಸಿಎಂ

# ಸರಕಾರಿ ನೌಕರರಿಗೆ ಸಹಾನುಭೂತಿ ಅಗತ್ಯ

ಸರಕಾರಿ ನೌಕರರು ಜನಸೇವಕರಾಗಿ ಕಾರ್ಯನಿರ್ವಹಿಸುವವರು. ಅವರು ಕೇವಲ ಕಚೇರಿ ಕೆಲಸಕ್ಕೆ ಸೀಮಿತವಾಗದೆ, ಸಮಾಜದ ಬಡವರ, ಅಸಹಾಯಕರ ಸಮಸ್ಯೆಗಳನ್ನು ತಮ್ಮ ಕುಟುಂಬದವರ ಸಮಸ್ಯೆಯಂತೆ ಭಾವಿಸಿ ಸಹಾನುಭೂತಿಯೊಂದಿಗೆ ನಡೆದುಕೊಳ್ಳುವುದು ಅತ್ಯಂತ ಅಗತ್ಯ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಬಡವರು ಅನೇಕ ಬಾರಿ ದಾಖಲೆಗಳ ಕೊರತೆ, ಮಾಹಿತಿ ಅಜ್ಞಾನ, ಆರ್ಥಿಕ ಸಂಕಷ್ಟಗಳಿಂದಾಗಿ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ತೊಂದರೆ ಅನುಭವಿಸುತ್ತಾರೆ. ಇಂತಹ ಸಂದರ್ಭದಲ್ಲಿ ಅಧಿಕಾರಿಗಳು ಕಠಿಣ ನಿಯಮಗಳ ಹಿಂದೆ ಅಡಗದೆ, ಮಾನವೀಯ ದೃಷ್ಟಿಕೋನದಿಂದ ಮಾರ್ಗದರ್ಶನ ನೀಡಿದರೆ ಸರ್ಕಾರದ ಯೋಜನೆಗಳ ನಿಜವಾದ ಉದ್ದೇಶ ಸಾಧನೆಯಾಗುತ್ತದೆ.

"ಸೇವೆ" ಎಂಬ ಪದದ ಅರ್ಥವೇ ಜನರ ಹಿತಕ್ಕಾಗಿ ಕೆಲಸ ಮಾಡುವುದು. ಆದ್ದರಿಂದ ಪ್ರತಿಯೊಬ್ಬ ಸರ್ಕಾರಿ ನೌಕರರೂ ಜನರನ್ನು ತಮ್ಮ ಕುಟುಂಬದವರಂತೆ ಪರಿಗಣಿಸಿ, ಗೌರವದಿಂದ ಮಾತನಾಡಿ, ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸುವ ಮನೋಭಾವ ಹೊಂದಬೇಕು. ಇದರಿಂದ ಸರ್ಕಾರದ ಮೇಲಿನ ನಂಬಿಕೆ ಹೆಚ್ಚಿ, ಸಮಾಜದಲ್ಲಿ ನ್ಯಾಯ ಮತ್ತು ಸಮಾನತೆ ಸ್ಥಾಪನೆಯಾಗುತ್ತದೆ.



# ವೈಚಾರಿಕತೆ ಈ ನೆಲದ ಸಂಸ್ಕೃತಿ: ಬಳವಂತರಾವ ಪಾಟೀಲ್

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಜೂನ್ 5 ರಂದು ಬೆಳಗ್ಗೆ 11-45 ರಿಂದ ಸಂಜೆ 5-30 ಗಂಟೆ ವರೆಗೆ ವಿಶ್ವ ಕನ್ನಡಿಗರ ಸಂಸ್ಥೆ ನೌಬಾದ ಬೀದರ, ಕರ್ನಾಟಕ ಸರ್ಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು, ಇವರ ಸಂಯುಕ್ತಾಶ್ರಯದಲ್ಲಿ 2025-26 ನೇ ಸಾಲಿನ ಸಂಘ ಸಂಸ್ಥೆಗಳ ಧನಸಹಾಯ ಸಾಮಾನ್ಯ ಯೋಜನೆಯಡಿಯಲ್ಲಿ ಹೆಸರಾಯಿತು.

ಕರ್ನಾಟಕ ಉಸಿರಾಗಲಿ ಕನ್ನಡ ರಾಜ್ಯಮಟ್ಟದ ಸಾಹಿತ್ಯಗೋಷ್ಠಿ ಸಾಂಸ್ಕೃತಿಕ ಕಲಾಸಿರಿ ಜಾನಪದ ಜಾದು, ಕಾಮಿಡಿ ಬಿಂಬಿಕ್ರಿಯೆ ಸಂಗೀತ ಕನ್ನಡ ಹಾಡುಗಳ ಗಾಯನ ಕವಿಗೋಷ್ಠಿ ಪ್ರತಿಭಾ ಸತ್ಕಾರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಮಾತನಾಡಿ 12 ಶತಮಾನದ ಕನ್ನಡ ವಚನ ಸಾಹಿತ್ಯ ಸಮಾನತೆಗಾಗಿ ಸಂಘರ್ಷ ಮಾಡಿರುವ ಸಾಹಿತ್ಯ, ಸಂಸ್ಕೃತಿಯಾಗಿದೆ. ಇವತ್ತಿನ ನಮ್ಮ ಕೆಲಸ ಸಂಬಂಧ ಸಮಾಜ ಎಲ್ಲದಕ್ಕೂ ಪ್ರಾಕ್ಟಕಲ ಗೈಡಲೈನ್ ತರಹ ಕೆಲಸ ಮಾಡುತ್ತಿದೆ. ನೀನು ಮಾಡುವ ಕೆಲಸವೇ ದೇವರು. ದಾಸೋಹ ವೈಚಾರಿಕತೆ ವೈಜ್ಞಾನಿಕತೆ ಅನುಭವ ಮಂಟಪದ ಮೂಲಕ ಜೀವ ಜಗತ್ತಿಗೆ ಸಮಾನತೆಗಾಗಿ ಸಂಘರ್ಷ ಮಾಡಿರುವ ಕನ್ನಡ ವಚನಸಾಹಿತ್ಯ ನಮ್ಮೊಂದೆ ಇದೆ.

ಬೀದರ ಹಿಂದುಳಿದ ಜಿಲ್ಲೆಯಲ್ಲ ಸಾಂಸ್ಕೃತಿಕವಾಗಿ ಶ್ರೀಮಂತವಾಗಿರುವ ಜಿಲ್ಲೆಯಾಗಿದೆ ಸಾಹಿತ್ಯ ಕೃಷಿ



ಅವಶಕವಾಗಿದೆ. ಉದ್ಘಾಟನೆ ರಾಜ್ಯಕ್ಕೆ ಈ ವರ್ಷ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ 624 ಅಂಕ ಪಡೆದ ರಾಜ್ಯಕ್ಕೆ ಎರಡನೆ ಎರಡನೆ ರ್‍ಯಾಂಕ ಪಡೆದ ಚನ್ನಬಸವೇಶ್ವ ಪ್ರೌಢಶಾಲೆ ವಿದ್ಯಾರ್ಥಿ ಆನಂದ ಮಾಡಿದರು. ಅಧ್ಯಯನ ಪರಿಶ್ರಮ ಪ್ರಯತ್ನ ವಿದ್ಯಾರ್ಥಿಗಳಿಗೆ ದಾರಿದೀಪವಾಗಿದೆ.

ರಾಷ್ಟ್ರೀಯ ಶಿಕ್ಷಣ ನೀತಿ ಪರಿಷ್ಕೃತ ಡಾ. ಸರೋಜನಿ ಮಹಿಷಿ ವರದಿ ಪ್ರೊ. ಶಿವಶರಣಪ್ಪ ಹುಗ್ಗೆ ಪಾಟೀಲ್, ಕನ್ನಡ ಭಾಷೆ ನಿನ್ನೆ ಇಂದು ನಾಳೆ ಡಿಜಿಟಲಕರಣದಲ್ಲಿ ಕನ್ನಡ ಭಾಷೆ ಕುರಿತು ಡಾ. ರಾಮಚಂದ್ರಗಣಾಪೂರ, ಯೋಗಾ ಶಿಕ್ಷಣ ಕುರಿತು ಸಂದೀಪ ಸಾಧುರೆ, ಜಾನಪದಜಾದು ತುಕರಾಮ ಭೋಲಾ ಪ್ರಕಾಶ ಕುಲಕರ್ಣಿ, ಬಿಂಬಿಕ್ರಿಯೆ ರವಿಕುಮಾರ ಎಸ್ ಸಿಂಗೆ ಅಫಜಲಪೂರ, ಸಾಂಸ್ಕೃತಿಕ ಕಲಾಸಿರಿ ವಿಶಾಲಾ ಫಿಲ್ಮ ಡಾನ್ಸ ಆಕಾಡೆಮಿ ಚಿಕ್ಕಪೇಟ, ನೃತ್ಯ ಪ್ರದರ್ಶನ, ಭರತ ನಾಟ್ಯ ಬಸವ ಗೀತೆ ಮೂಲಕ ನಡೆಸಿರುವ ಕಾರ್ಯಕ್ರಮ ಗಮನಸೆಳೆದಿರುತ್ತದೆ. ಕನ್ನಡ ಹಾಡುಗಳು ರಾಜಕುಮಾರ ಹಿರೇಮಠ, ರಮೇಶಬಾಬು ಜೈಧ್ವನಿ, ಪ್ರಭು ಪಿ ಕಾಂಬಳೆ, ಡಾ. ಅಜ್ಜಯ್ಯ ವಿಜಯನಗರ, ಆಕಾಶ ಜ್ಯೋತಿ ಹಾಡಿದರು, ಕವಿತೆಗಳು ಪ್ರೀಯಾಂಕ, ಐಶ್ವರ್ಯ ಭರತ ಮೇತ್ರೆ, ಶಿವರಾಜ ಮಿತ್ರ ಅವಿನಾಶ ಸೋನಿ, ರಾಜು ಪವಾರ, ಅರ್ಜೀತ ನೇಳಗೆ, ಅಶ್ವಜೀತ ದಂಡಿನ ವಾಚನ ಮಾಡಿದರು. ಭೀರಗೊಂಡೇಶ್ವರ ಭಜನ ಮಂಡಳ ರಕ್ಷಾಳ, ಮಾತೋಶ್ರೀ ರಮಾಬಾಯಿ ಅಂಬೇಡ್ಕರ ಸಂಸ್ಕೃತಿಕ ಸಂಘ ಸಿ ಎಂ ಸಿ ಕಾಲೋನಿ ಮೈಲೂರು. ಜೈಭೀಮ ನಗರ ಮಹಿಳಾ ಸಂಘ, ಕುಂಬರವಾಡ ಮಹಿಳಾ ಸಂಘ ಭಜನೆ ಪದಗಳು ಹಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ, ಯುವ ಕಾಂಗ್ರೇಸ ಮುಖಂಡರು ಅಂತರಾಷ್ಟ್ರೀಯ ಕನ್ನಡ ಭಾಷೆ ಸೇವಕರು ಡಾ. ಡಿ ಪೂಜಾರಿ ಹುಂಡೇಕಲ್ ಯಾದಗಿರಿ, ಮುಖ್ಯ ಅತಿಥಿಗಳಾಗಿ ಕರ್ನಾಟಕ ಜಾನಪದ ಆಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಶಂಭುಲಿಂಗ ವಾಲದೊಡ್ಡಿ ಪ್ರೇಮಕುಮಾರ ಕಾಂಬಳೆ ಶ್ರೀಕಾಂತ ಭವಾನಿ ಅವಿನಾಶ ಬುದೇರಾ-ಕರ್ ಅಂಬಾದಾಸ ಸೈನೆ, ಬಾಬುರಾವ ಕೆ ಬಿಟ್ಟೆ, ಗೌಸುದ್ದಿನ ಚಂದ್ರಕಾಂತ ದೇವಕೆ ಹಿರಿಯ ಗಾಯಕರಾದ ಜಿ ಚಂದ್ರಕಾಂತ, ಪರಿಸರವಾದಿ ಡಾ. ಕಾಶಿನಾಥ ಪಾಟೀಲ್, ಸ್ವಾಗತ ಪ್ರಾಸ್ತಾವಿಕ ನುಡಿ ವಿಶ್ವ ಕನ್ನಡಿಗರ ಸಂಸ್ಥೆ ಅಧ್ಯಕ್ಷ ಡಾ. ಸುಬ್ಬಣ್ಣ ಕರಕನಳ್ಳಿ, ಸಂವಿಧಾನ ಪೀಠಿಕೆ ನಾಲ್ಕನೇ ತರಗತಿ ವಿದ್ಯಾರ್ಥಿ ಅಂಬಾದಾಸ, ಗಮನ ಸೇಳೆದರು, ಕನ್ನಡ ನಾಡಿನ ಜೀವನದಿ ಹಾಡಿನ ನೃತ್ಯ ಕು; ನೇತ್ರ, ನಿರೂಪಣೆ ಸಮೂಹ ಸಂಪನ್ಮೂಲ ವ್ಯಕ್ತಿ ದಿಲೀಪಕುಮಾರ ಮೋಘಾ, ನಡೆಸಿಕೊಟ್ಟರು, ಸಂಸ್ಥೆ ಉಪಾಧ್ಯಕ್ಷ ಪ್ರಕಾಶ ಕರಕನಳ್ಳಿ, ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಸದಸ್ಯರಾದ ತೇಜಮ್ಮಾ, ಸಂಗೀತಾ, ರವಿಕುಮಾರ ಭಾಗವಹಿಸಿದರು, ಸಂಸ್ಥೆ 8 ನೇ ವಾರ್ಷಿಕೋತ್ಸವ ನಿಮಿತ್ತವಾಗಿ ಡಾ. ಸುನೀತಾ ಮಹೇಶ್ವರಿ, ರವಿಕುಮಾರ ಸಿಂಗೆ ತುಕರಾಮ ಭೋಲಾ ಪೂಣ್ಯಾವತಿ ಅನೀಲಕುಮಾರ ಮೇಲದೊಡ್ಡಿ ಗೀತಾ, ರವರಿಗೆ ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿ ನೀಡಲಾಯಿತು. 150 ಎಸ್ ಎಸ್ ಎಲ್ ಸಿ ಮತ್ತು ಪಿ ಯು ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಸತ್ಕಾರ ಮಾಡಲಾಯಿತು.

# ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶದ ಸುವರ್ಣ ಅವಕಾಶ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಪಟ್ಟಣದ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯ (ಬಿಕೆಐಟಿ)ದ ನಾಗರಿಕ ಇಂಜಿನಿಯರಿಂಗ್ ವಿಭಾಗದ ವತಿಯಿಂದ ಬೆಂಗಳೂರಿನ ಪ್ರತಿಷ್ಠಿತ ವಿವೇಚನಾ ಕನ್ಸ್ಟ್ರಕ್ಷನ್ಸ್ ಸಂಸ್ಥೆಯ ಸಹಯೋಗದಲ್ಲಿ ಕ್ಯಾಂಪಸ್ ನೇಮಕಾತಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಅಂತಿಮ ವರ್ಷದ ನಾಗರಿಕ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಉದ್ಯಮ ಕ್ಷೇತ್ರದ ಅಗತ್ಯತೆಗಳು, ಉದ್ಯೋಗಾವಕಾಶಗಳು ಹಾಗೂ ವೃತ್ತಿಪರ ಕೌಶಲ್ಯಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದರು.

ನೇಮಕಾತಿ ಪ್ರಕ್ರಿಯೆಯ ಅಂಗವಾಗಿ ವಿವೇಚನಾ ಕನ್ಸ್ಟ್ರಕ್ಷನ್ಸ್ ಸಂಸ್ಥೆಯ ಪ್ರತಿನಿಧಿಗಳು




ಸಂಸ್ಥೆಯ ಕಾರ್ಯವೈಖರಿ, ನಿರ್ಮಾಣ ಕ್ಷೇತ್ರದಲ್ಲಿನ ಅವಕಾಶಗಳು ಹಾಗೂ ವೃತ್ತಿ ಬೆಳವಣಿಗೆಯ ಕುರಿತು ಮಾಹಿತಿ ನೀಡಿದರು. ನಂತರ ಸಾಮರ್ಥ್ಯ ಪರೀ-ಕ್ಷೆ ಮತ್ತು ವೈಯಕ್ತಿಕ ಸಂದರ್ಶನಗಳನ್ನು ನಡೆಸಿ ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನ, ಸಮಸ್ಯೆ ಪರಿಹಾರ ಸಾಮರ್ಥ್ಯ ಹಾಗೂ ವೃತ್ತಿಪರ ಕೌಶಲ್ಯಗಳನ್ನು ಮೌಲ್ಯಮಾಪನ ಮಾಡಿದರು. ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಉದ್ಯೋಗ ಕ್ಷೇತ್ರದೊಂದಿಗೆ ನೇರ ಸಂಪರ್ಕ ಕಲ್ಪಿಸುವ ಜೊತೆಗೆ, ಕೈಗಾರಿಕೆ ಮತ್ತು ಶಿಕ್ಷಣ ಸಂಸ್ಥೆಗಳ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸಿತು. ಇಂತಹ ಕ್ಯಾಂಪಸ್ ಡ್ರೈವ್‌ಗಳು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಹಾಗೂ ಉದ್ಯೋಗ ಪಡೆಯುವ ಅವಕಾಶಗಳನ್ನು ಹೆಚ್ಚಿಸುವಲ್ಲಿ ಸಹಕಾರಿಯಾಗಿವೆ ಎಂದು ಅಭಿಪ್ರಾಯ ವ್ಯಕ್ತವಾಯಿತು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರು, ನಾಗರಿಕ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರು ಹಾಗೂ ಅಧ್ಯಾಪಕರು ಮಾತನಾಡಿ, ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಮುಂದಾದ ವಿವೇಚನಾ ಕನ್ಸ್ಟ್ರಕ್ಷನ್ಸ್ ಸಂಸ್ಥೆಯ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು. ವಿದ್ಯಾರ್ಥಿಗಳ ವೃತ್ತಿಜೀವನದ ಬೆಳವಣಿಗೆಗೆ ಸಂಸ್ಥೆ ನೀಡಿದ ಬೆಂಬಲವನ್ನು ಶ್ಲಾಘಿಸಿ ಕೃತಜ್ಞತೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ವಿಭಾಗದ ಅಧ್ಯಾಪಕರು, ವಿದ್ಯಾರ್ಥಿಗಳು ಹಾಗೂ ವಿವೇಚನಾ ಕನ್ಸ್ಟ್ರಕ್ಷನ್ಸ್ ಸಂಸ್ಥೆಯ ಪ್ರತಿನಿಧಿಗಳು ಉಪಸ್ಥಿತರಿದ್ದರು. ಕ್ಯಾಂಪಸ್ ಡ್ರೈವ್ ವಿದ್ಯಾರ್ಥಿಗಳಲ್ಲಿ ಹೊಸ ಉತ್ಸಾಹ ಮತ್ತು ಆತ್ಮವಿಶ್ವಾಸವನ್ನು ಮೂಡಿಸಿತು. ಈ ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ಡಾ. ಉದಯ ಕುಮಾರ್ ಕಲ್ಯಾಣೆ, ಡಾ. ಸಂಗಮೇಶ್ ಕಲ್ಯಾಣೆ, ಡಾ. ವಿಜಯ್ ಕುಮಾರ್, ಡಾ. ಅನಿಲ್ ಕೋ, ಡಾ. ಅಶೋಕ ಕೋಟೆ, ಪ್ರೊ. ಬಿ ಎಂ ಪಾಟೀಲ್ ಇದ್ದರು. ಸ್ವಾಗತವನ್ನು ಡಾ. ಬಿ ಸೂರ್ಯಕಾಂತ್, ನಿರೂಪಣೆ ಮತ್ತು ವಂದನಾರ್ಪಣೆಯನ್ನು ಡಾ. ಪ್ರಶಾಂತ್ ನೆರವೇರಿಸಿದರು.

# ತಾಯಿ ಹೆಸರಲ್ಲಿ ಸಸಿ ನೆಡುವಿಕೆ



**ಬೀದರ್:** ವಿಶ್ವಪರಿಸರ ದಿನಾಚರಣೆ ನಿಮಿತ್ತ ಇಲ್ಲಿಯ ಕೈಲಾಶನಗರದಲ್ಲಿ ಮಹಿಳೆಯರು ತಾಯಿಯ ಹೆಸರಲ್ಲಿ ಸಸಿಗಳನ್ನು ನೆಟ್ಟರು.

ಪ್ರಧಾನಿ ನರೇಂದ್ರ ಮೋದಿ ಅವರ ಕರೆಗೆ ಓಗೊಟ್ಟು ತಾಯಿ ಹೆಸರಲ್ಲಿ ಸಸಿಗಳನ್ನು ನೆಡಲಾಗಿದೆ ಎಂದು ಸಸಿ ನೆಡುವಿಕೆಗೆ ಚಾಲನೆ ನೀಡಿದ ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ವಿಜಯಲಕ್ಷ್ಮಿ ಕೌಟಗೆ ಹೇಳಿದರು.

ತಾಯಿ ಮೇಲಿನ ಪ್ರೀತಿ ಹಾಗೂ ಗೌರವದ ಸಂಕೇತವಾಗಿ ಎಲ್ಲರೂ ಸಸಿ ನೆಟ್ಟು, ಬೆಳೆಸಬೇಕು. ಪರಿಸರ ಸಂರಕ್ಷಿಸಬೇಕು ಎಂದು ಮನವಿ ಮಾಡಿದರು. ಕಾಲೊನಿಯ ಕೃಷ್ಣವೇಣಿ ಕುಲಕರ್ಣಿ, ಚಿತ್ರಾ ಅಂಬುಲಗೆಕರ್, ಸಂಗೀತಾ ಟೇಲರ್, ಜಗದೇವಿ ಮತ್ತಿತರರು ಇದ್ದರು.

# ಕೇಂದ್ರ ಕಾರಾಗೃಹದಲ್ಲಿ ಸಸಿ ನೆಟ್ಟು ಪರಿಸರ ದಿನ ಆಚರಣೆ





• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಪ್ರತಿಯೊಂದು ಜೀವಕುಲಕ್ಕೂ ಪರಿಸರ ಅತ್ಯಗತ್ಯ. ಆದ್ದರಿಂದ ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡವನ್ನು ಬೆಳೆಸಿ, ಊರಿಗೊಂದು ವನ ಸೃಷ್ಟಿ ಮಾಡಬೇಕು ಎಂದು ಕಲಬುರಗಿ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರಾದ ರಾಕೇಶ್ ಕಾಂಬಳೆ ಅವರು ಹೇಳಿದರು.

ಶುಕ್ರವಾರ ನಗರದ ಕೇಂದ್ರ ಕಾರಾಗೃಹದ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಿ ಕಾರಾಗೃಹದ ಹೊರ ಹಾಗೂ ಒಳ ಆವರಣದಲ್ಲಿ ಅಧಿಕಾರಿಗಳು, ಸಿಬ್ಬಂದಿ ವರ್ಗ ಮತ್ತು ಕಾರಾಗೃಹದ ಬಂದಿಗಳು ಒಟ್ಟಾಗಿ ಸಸಿಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂಕಲ್ಪ ಮಾಡಿದರು.

ಅವರು ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿ, ವಿಶ್ವ ಸಂಸ್ಥೆಯು 1972 ರಲ್ಲಿ ವಿಶ್ವ ಪರಿಸರ ದಿನವನ್ನು ಆಚರಿಸಲು ನಿರ್ಧರಿಸಿತು. ಅದರಂತೆ 1974 ರಲ್ಲಿ ಮೊದಲ ಬಾರಿಗೆ 100 ಕ್ಕೂ ಹೆಚ್ಚು ದೇಶಗಳಲ್ಲಿ ಪರಿಸರ ದಿನವನ್ನು ಆಚರಿಸಲಾಯಿತು. ಅಂದಿನಿಂದ ಇಂದಿನವರೆಗೆ ಪ್ರತಿ ವರ್ಷ ಹೊಸ ಥೀಮ್‌ನೊಂದಿಗೆ ಪರಿಸರ ಸಂರಕ್ಷಣೆಗಾಗಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಲಬುರಗಿ ಕೇಂದ್ರ ಕಾರಾಗೃಹದ ಒಳ ಮತ್ತು ಹೊರ ಆವರಣದಲ್ಲಿ ವಿವಿಧ ತಳಿಯ 100 ಕ್ಕೂ ಹೆಚ್ಚು ಸಸಿಗಳನ್ನು ನೆಡಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಸಹಾಯ ಅಧೀಕ್ಷಕರುಗಳಾದ ಬಿ. ಸುರೇಶ್, ಚನ್ನಪ್ಪ, ಸಹಾಯಕ ಆಡಳಿತಾಧಿಕಾರಿ ಭೀಮಾಶಂಕರ್ ಡಾಂಗೆ, ಜೈಲರ್‌ಗಳಾದ ಶ್ಯಾಮ ಬಿದ್ರಿ, ಸಂಸ್ಥೆಯ ಶಿಕ್ಷಕರಾದ ಶ್ರೀ ನಾಗರಾಜ ಮೂಲಗೆ ಹಾಗೂ ಕಾರಾಗೃಹದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಮಕ್ಕಳ ದಾಖಲಾತಿ ಹೆಚ್ಚಳಕ್ಕೆ ಕಲಿಕಾ ಕಿಟ್ ಕೊಡುಗೆ

**ಗಂಗಾವತಿ:** ಖಾಸಗಿ ಶಾಲೆಗಳ ಪ್ರತಿಷ್ಠೆ, ವಾತಾವರಣಕ್ಕೆ ಮರುಳಾಗಿ ಮಕ್ಕಳನ್ನು ದಾಖಲಿಸುವ ಪೋಷಕರಿಗೊಂದು ಪಾಠವೆಂಬಂತೆ, ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಹಣವಾಳ ಶಾಲೆಯ ಶಿಕ್ಷಕರಾದ ಮೈಲಾರಪ್ಪ ಬೂದಿಹಾಳ



ಸರಕಾರಿ ಶಾಲೆಗೆ ದಾಖಲಾಗುವ ಮಕ್ಕಳಿಗೆ ವಿಶಿಷ್ಟ ಪ್ರೋತ್ಸಾಹ ನೀಡುವ ಮೂಲಕ ಮೆಚ್ಚುಗೆ ಗಳಿಸಿದ್ದಾರೆ.

ಶಿಕ್ಷಣ, ಸಾಹಿತ್ಯ, ಪರಿಸರ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲೂ ಸೇವೆ ಸಲ್ಲಿಸುತ್ತಿರುವ ಶಿಕ್ಷಕ ಮೈಲಾರಪ್ಪ ಬೂದಿಹಾಳ ಅವರು ತಾವು ಕಾರ್ಯನಿರ್ವಹಿಸುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಹಣವಾಳ ಮತ್ತು ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಹಳೇ ಜೀರಾಳ ಕಲ್ಗುಡಿಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸಲು ಅನನ್ಯ ಕ್ರಮ ಕೈಗೊಂಡಿದ್ದಾರೆ.

ಸರಕಾರಿ ಶಾಲೆಗಳತ್ತ ಪೋಷಕರು ಮುಖ ತಿರುಗಿಸುತ್ತಿರುವ ಈ ಹೊತ್ತಿನಲ್ಲಿ ದಾಖಲಾತಿ ಇಳಿಕೆ ತಡೆಯಲು ಹಾಗೂ ಗುಣಾತ್ಮಕ ಶಿಕ್ಷಣದ ಭರವಸೆಯೊಂದಿಗೆ ವಿದ್ಯಾರ್ಥಿಗಳ ಗಮನ ಸೆಳೆಯಲು ಮೈಲಾರಪ್ಪ ಅವರು ಈ ಕೆಳಕಂಡ ಪ್ರೋತ್ಸಾಹ ನೀಡಲು ಮುಂದಾಗಿದ್ದಾರೆ:

**₹1,000 ಠೇವಣಿ:** 1ನೇ ತರಗತಿಗೆ ದಾಖಲಾಗುವ ಅಥವಾ ಇತರೆ ಶಾಲೆಗಳಿಂದ ಟಿ.ಸಿ. ತೆಗೆದುಕೊಂಡು ಬರುವ ಪ್ರತಿ ಮಗುವಿನ ಹೆಸರಿನಲ್ಲಿ ವಿದ್ಯಾರ್ಥಿ-ಪೋಷಕರ ಜಂಟಿ ಖಾತೆ ತೆರೆದು ₹1,000 ಠೇವಣಿ ಇಡಲಾಗುವುದು.

**ಕಲಿಕಾ ಕಿಟ್:** ಒಂದು ವರ್ಷಕ್ಕೆ ಅಗತ್ಯವಿರುವ ಲೇಖನಿ, ನೋಟ್‌ಬುಕ್, ಪೆನ್, ಪೆನ್ಸಿಲ್, ರಬ್ಬರ್ ಸೇರಿದಂತೆ ಎಲ್ಲ ಕಲಿಕಾ ಸಾಮಗ್ರಿಗಳ ಕಿಟ್ ವಿತರಣೆ.

ಈ ಯತ್ನದ ಬಗ್ಗೆ ಶಾಲೆಯ ಮುಖ್ಯ ಶಿಕ್ಷಕರಾದ ಚಂದ್ರಶೇಖರ ಕೆ.ಎಂ., ಸಿಬ್ಬಂದಿಗಳಾದ ರತ್ನಾ ಕೊಟ್ರಶೆಟ್ಟಿ, ಮೇನಕಾ, ಶರಣಪ್ಪ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

# ಸಾವಿರಕ್ಕೂ ಹೆಚ್ಚು ಮಕ್ಕಳಿಂದ ಅಮ್ಮನಿಗಾಗಿ ಒಂದು ಗಿಡ

• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)**

ಕೂಡ್ಲಿಗಿ ತಾಲ್ಲೂಕಿನ ಚಿಕ್ಕ ಜೋಗಿಹಳ್ಳಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅರಣ್ಯ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ. ಅಮ್ಮನಿಗಾಗಿ ಒಂದು ಗಿಡ ಸಸಿ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಸಸಿ ನೆಡುವುದು ಕೇವಲ ಒಂದು ದಿನದ ಆಚರಣೆಯಾಗ

ಬಾರದು ಅದು ನಮ್ಮ ದೈನಂದಿನ ಬದುಕಿನ ಭಾಗವಾಗಬೇಕು. ನಮ್ಮ ಸುತ್ತಮುತ್ತಲಿನ ವಾತಾವರಣ, ಪಶು-ಪಕ್ಷಿಗಳು ಮತ್ತು ಗಿಡಮರಗಳು ಸಮೃದ್ಧವಾಗಿದ್ದರೆ ಮಾತ್ರ ಮನುಕುಲದ ಪ್ರಗತಿ ಸಾಧ್ಯ. ಇಲ್ಲದಿದ್ದರೆ ಇಡೀ ಜೀವಸಂಕುಲವೇ ನಾಶವಾಗಿ ಇಡೀ ಭೂಮಿ ಮರು ಭೂಮಿಯಾಗಲಿದೆ ಎಂದು ಕೇಂದ್ರ ಹಣಕಾಸು ಹಾಗೂ ಸಾಂಸ್ಥಿಕ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

ಕೇಂದ್ರ ಕೃಷಿ ಸಚಿವರಾದ ಶಿವ ರಾಜ್‌ಸಿಂಗ್ ಚೌವ್ಹಾಣ್ ಅವರು ದೇಶದ ಯಾವುದೇ ಮೂಲೆಯಲ್ಲಿದ್ದರೂ ಪ್ರತಿದಿನ ನಿಯಮಿತವಾಗಿ ಒಂದು ಸಸಿ ನೆಡುವ ಅವರ ಪರಿಸರ ಪ್ರಜ್ಞೆಯನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು. ಪ್ರಸ್ತುತ ದಿನಗಳಲ್ಲಿ ಕೃಷಿಯಿಂದ ವಿಮುಖರಾಗುತ್ತಿರುವ ಯುವ ಪೀಳಿಗೆಯನ್ನು ಮರಳಿ ಕೃಷಿಯತ್ತ ಸೆಳೆಯಲು ಮತ್ತು ಗ್ರಾಮೀಣ ಭಾಗದ ಆರ್ಥಿಕತೆ ಬಲಪಡಿಸಲು ಮಲ್ಟಿ ಕ್ರಾಪಿಂಗ್ ಹಾಗೂ ಆಧುನಿಕ ತಂತ್ರಜ್ಞಾನ ಆಧಾರಿತ ಕೃಷಿ ಪದ್ಧತಿಗಳು ಅತ್ಯಂತ ಅವಶ್ಯಕವಾಗಿವೆ ಎಂದರು.

ಹಿಂದೆ ಗುಜರಾತ್‌ನ ಕಚ್ ಜಿಲ್ಲೆಯಲ್ಲಿ ಸಂಭವಿಸಿದ ಭೀಕರ ಭೂಕಂಪದ ದುರಂತದಲ್ಲಿ ಮಡಿದ ಅಮಾಯಕ ಮಕ್ಕಳ ನೆನಪಿಗಾಗಿ



ಡಾ.ನಾಯರ್ ಅವರು ಭಾರತದ ಕಚ್ ಪ್ರದೇಶದಲ್ಲಿ ಅತ್ಯಂತ ದೊಡ್ಡದಾದ ಮಿಯಾವಾಕಿ ಮಾದರಿಯ ದಟ್ಟ ಅರಣ್ಯ ನಿರ್ಮಿಸಿರುವುದು ಶ್ಲಾಘನೀಯ. ಅದೇ ಮಾದರಿಯಲ್ಲಿ ಚಿಕ್ಕಜೋಗಿಹಳ್ಳಿಯಲ್ಲೂ ಸ್ಥಳೀಯ ಹವಾಮಾನಕ್ಕೆ ಹೊಂದುವ ವೈವಿಧ್ಯಮಯ ಸಸಿಗಳನ್ನು ವೈಜ್ಞಾನಿಕ ಪದ್ಧತಿಯಲ್ಲಿ ನೆಡಲಾಗುತ್ತಿದೆ. ಇದು ಅತ್ಯಂತ ಕಡಿಮೆ ಅವಧಿಯಲ್ಲಿ ದಟ್ಟವಾದ ಕಾಡಾಗಿ ಪರಿವರ್ತನೆಗೊಳ್ಳಲಿದ್ದು, ಮುಂದಿನ 50 ವರ್ಷಗಳ ಕಾಲ ಈ ಭಾಗದ ತಾಯಂದಿರ ನೆನಪನ್ನು ಜೀವಂತವಾಗಿರಿಸಲಿದೆ. ಆದ್ದರಿಂದ ಗಿಡ ನೆಟ್ಟ ಪ್ರತಿಯೊಂದು ಮಗುವಿನ ಹೆಸರನ್ನು ಕಲ್ಲಿನ ಫಲಕದ ಮೇಲೆ ಕೆತ್ತಿ ಆಯಾ ಗಿಡದ ಪಕ್ಕದಲ್ಲಿ ಅಳವಡಿಸಲು ಜಿಲ್ಲಾಡಳಿತಕ್ಕೆ ಸೂಚಿಸಿದರು.

ಕೂಡ್ಲಿಗಿ ತಾಲ್ಲೂಕಿನಲ್ಲಿ ಜಲಮೂಲ ವೃದ್ಧಿಸಲು ಮತ್ತು ಅಂತರ್ಜಲ ಮಟ್ಟ ಹೆಚ್ಚಿಸಲು ಕೆರೆಗಳನ್ನು ಅಭಿವೃದ್ಧಿಪಡಿಸುವ ಜಲಸಂರಕ್ಷಣಾ ಕಾರ್ಯ ಕೈಗೊಳ್ಳಲಾಗಿದೆ. ಇದರಿಂದ ಪ್ರೇರಿತರಾದ ಸ್ಥಳೀಯ ರೈತರೊಬ್ಬರು ತಮ್ಮ ಸ್ವಂತ ಜಮೀನನ್ನು ಈ ಹಸಿರು ಯೋಜನೆಯೊಂದಿಗೆ ಜೋಡಿಸಲು ಮುಂದೆ ಬಂದಿರುವುದು ಶ್ಲಾಘನೀಯ. ಈ ಹಿಂದೆ ಜಿಲ್ಲಾಧಿಕಾರಿಗಳಾಗಿದ್ದ ಅನಿರುದ್ಧ್ ಶ್ರವಣ್ ಅವರ ಅಭಿವೃದ್ಧಿ ಬದ್ಧತೆ ಹಾಗೂ ಈಗಿನ ಜಿಲ್ಲಾಧಿಕಾರಿ ಕವಿತಾ ಅವರ ಸಕ್ರಿಯ ಸಹಕಾರಕ್ಕೆ ಸಚಿವೆ ನಿರ್ಮಲ ಸೀತಾರಾಮನ್ ಮುಕ್ತ ಕಂಠದಿಂದ ಪ್ರಶಂಸಿದ ಅವರು, ಚಿಕ್ಕ ಜೋಗಿಹಳ್ಳಿಯ ರೈತ ಬಾಂಧವರು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಒಟ್ಟಾಗಿ ಶ್ರಮಿಸಿದರೆ ಈ ಭಾಗದಲ್ಲಿ ವಿಜಯನಗರ ಸಾಮ್ರಾಜ್ಯದ ಕಾಲದ ಹಸಿರು ಮತ್ತು ಸಮೃದ್ಧಿಯ ವೈಭವ ಮತ್ತೆ ಮರುಕಳಿಸಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಮಾತನಾಡಿ, ಕೇಂದ್ರ ವಿತ್ತ ಸಚಿವರ ಮಾರ್ಗದರ್ಶನದಲ್ಲಿ ಈಗಾಗಲೇ ತಾಲ್ಲೂಕಿನ ಚಿಕ್ಕ ಜೋಗಿಹಳ್ಳಿಯಲ್ಲಿ 300 ಎಕರೆ ಪ್ರದೇಶದಲ್ಲಿ ಮಿಯಾವಾಕಿ ಮಾದರಿಯ ದಟ್ಟ ಕಾಡು ಬೆಳೆಸುವ ಕಾರ್ಯಕ್ಕೆ ಚಾಲನೆ ದೊರೆತಿದ್ದು, ಇದನ್ನು 1,000 ಎಕರೆಗೆ ವಿಸ್ತರಿಸುವ ಗುರಿ ಇದೆ. ಗಿಡ ನೆಟ್ಟ ಪ್ರತಿಯೊಂದು ಮಗುವಿನ ಹೆಸರನ್ನು ಕಲ್ಲಿನ ಫಲಕದ ಮೇಲೆ ಕೆತ್ತಿ ಆಯಾ ಗಿಡದ ಪಕ್ಕದಲ್ಲಿ ಇಡಲು ಸಚಿವರು ಸೂಚಿಸಿದ್ದು, ಇದು ಪರಿಸರ ಕಾಳಜಿಗೆ ಹೊಸ ಇತಿಹಾಸ ಬರೆಯಲಿದೆ ಎಂದರು. ಇದರೊಂದಿಗೆ ತಾಲೂಕಿಗೆ ಕೃಷಿ ವಿಜ್ಞಾನ ಕೇಂದ್ರ ಮಂಜೂರಾಗಿದ್ದು, ಅದಕ್ಕಾಗಿ ಕೂಡ್ಲಿಗಿ ಬಳಿ 50 ಎಕರೆ ಜಮೀನು ಕಾಯ್ದಿರಿಸಲಾಗಿದೆ. ರೈತರಿಗಾಗಿ ಹುಣಸೆಹಣ್ಣು ಸಂಸ್ಕರಣಾ ಘಟಕವೂ ಬರಲಿದೆ. ಗ್ರಾಮದಲ್ಲಿ ಎಲ್‌ಕೆಜಿಯಿಂದ ಪಿಯುಸಿವರೆಗಿನ ಸಮಗ್ರ ಕರ್ನಾಟಕ ಪಬ್ಲಿಕ್ ಸ್ಕೂಲ್ (ಏಕಖ) ಹಾಗೂ ಎಸ್‌ಟಿ ಹೆಣ್ಣು ಮಕ್ಕಳ ಮೆಟ್ರಿಕ್ ನಂತರದ ವಸತಿ ನಿಲಯ ಮಂಜೂರಾಗಿದೆ. ಜೊತೆಗೆ ಏಕಲವ್ಯ ಮಾದರಿ ವಸತಿ ಶಾಲೆ ಸ್ಥಾಪನೆಗೆ ಕೇಂದ್ರದ ಅಂತಿಮ ಅನುಮೋದನೆ ಬಾಕಿ ಇದೆ ಎಂದರು. ಈ ಮೂಲಕ ತಾಲ್ಲೂಕು ಶೈಕ್ಷಣಿಕವಾಗಿ ಪ್ರಗತಿ ಕಾಣಲಿದೆ ಎಂದರು.

ಪರಸರ ಪ್ರೇಮಿ ಆರ್.ಕೆ.ನಾಯರ್ ಮಾತನಾಡಿ, ವಿಶ್ವ ಪರಿಸರ ದಿನದ ಅಂಗವಾಗಿ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಚಿಕ್ಕ ಜೋಗಿಹಳ್ಳಿ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿತ್ತು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಶಯದ ಅಮ್ಮನಿಗಾಗಿ ಒಂದು ಗಿಡ ಯೋಜನೆ ಅಡಿಯಲ್ಲಿ ಭಾರತ ವನದ ವರ್ಟಿಕಲ್ ಆರ್ಗಾನಿಕ್ ಹಾರ್ಟಿಕಲ್ಚರ್ (ಸಾವಯವ ತೋಟಗಾರಿಕೆ) ಯೋಜನೆಯ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ.

**40 ಎಕರೆಯಲ್ಲಿ 1 ಲಕ್ಷ ಗಿಡಗಳ ಸಂಕಲ್ಪ:** ಈ ಮಹತ್ವಾಕಾಂಕ್ಷಿ ಯೋಜನೆಯಡಿ ತಾಲೂಕಿನಲ್ಲಿ ಒಟ್ಟು 1 ಲಕ್ಷ ಹಣ್ಣಿನ ಗಿಡ ನೆಡುವ ಗುರಿ ಹೊಂದಲಾಗಿದೆ. ಪ್ರಸ್ತುತ ಮೊದಲ ಹಂತದಲ್ಲಿ 40 ಎಕರೆ ಜಾಗದಲ್ಲಿ 15,000 ಸಸಿ ನೆಡುವ ಕಾರ್ಯ ಆರಂಭವಾಗಿದ್ದು, ಈ ವರ್ಷದ ಅಂತ್ಯಕ್ಕೆ 50 ಸಾವಿರ ಹಾಗೂ ಮುಂದಿನ ವರ್ಷದಲ್ಲಿ 50 ಸಾವಿರ ಸಸಿ ನೆಡುವ ಮೂಲಕ ಒಟ್ಟು 1 ಲಕ್ಷ ಸಸಿ ನೆಡಲಾಗುವುದು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸುಮಾರು 1,000 ಶಾಲಾ ಮಕ್ಕಳು ಅತ್ಯಂತ ಉತ್ಸಾಹದಿಂದ ಸಸಿ ನೆಟ್ಟು ಪರಿಸರ ಜಾಗೃತಿ ಮೂಡಿಸಿದರು.

## ಉತ್ತಮ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಪ್ರಭುರೆಡ್ಡಿ ನಲ್ ಬಲ್

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಪ್ರಭುರೆಡ್ಡಿ ಅವರು ತಮ್ಮ ಶಿಕ್ಷಣ ಸೇವಾ ಅವಧಿಯಲ್ಲಿ ಕಲ್ಲೂರ ಗ್ರಾಮದಲ್ಲಿ ಉತ್ತಮ ಶಿಕ್ಷಕರಾಗಿ ವಿಶಿಷ್ಟ ಸೇವೆ ಸಲ್ಲಿಸಿದ್ದಾರೆ. ಅನೇಕ ವರ್ಷಗಳ ಕಾಲ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಮಾರ್ಗದರ್ಶನ ನೀಡಿದ ಅವರು, ಶಿಸ್ತುಬದ್ಧ ಬೋಧನೆ ಹಾಗೂ ವಿದ್ಯಾರ್ಥಿ ಸ್ನೇಹಿ ಮನೋಭಾವದಿಂದ ಶಾಲಾ ಸಮುದಾಯದಲ್ಲಿ ವಿಶೇಷ ಗುರುತನ್ನು ಪಡೆದಿದ್ದಾರೆ.

ತಮ್ಮ ಸೇವಾ ಅವಧಿಯಲ್ಲಿ ಪ್ರಭುರೆಡ್ಡಿ ಅವರು ಅನೇಕ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರವಹಿಸಿದ್ದು, ಸಹೋದ್ಯೋಗಿಗಳು ಹಾಗೂ ಪೋಷಕರಿಂದ ಮೆಚ್ಚುಗೆ ಪಡೆದಿದ್ದಾರೆ. ಪಾಠದ ಜೊತೆಗೆ ವಿದ್ಯಾರ್ಥಿಗಳ ನೈತಿಕ ಮೌಲ್ಯಗಳ ಬೆಳವಣಿಗೆಗೂ ಅವರು ಹೆಚ್ಚಿನ ಒತ್ತು ನೀಡಿದ್ದರು.

ಸೇವಾ ನಿವೃತ್ತಿ ಅಥವಾ ಗೌರವ ವಿದಾಯ ಸಂದರ್ಭದಲ್ಲಿ ಶಾಲಾ ಆಡಳಿತ ಮಂಡಳಿ ಹಾಗೂ ಸಹೋದ್ಯೋಗಿಗಳು ಅವರನ್ನು ಸನ್ಮಾನಿಸಿ, ಅವರ ಸೇವೆಯನ್ನು ಸ್ಮರಿಸಿದರು. ಕಾರ್ಯಕ್ರಮದಲ್ಲಿ ಅವರ ಶ್ರಮ ಹಾಗೂ ಕೊಡುಗೆಯನ್ನು ಪ್ರಶಂಸಿಸಿ ಶುಭಾಶಯಗಳನ್ನು ಸಲ್ಲಿಸಲಾಯಿತು.

ಪ್ರಭುರೆಡ್ಡಿ ಅವರ ಮುಂದಿನ ಜೀವನ ಸುಖ, ಶಾಂತಿ ಹಾಗೂ ಆರೋಗ್ಯದಿಂದ ಕೂಡಿರಲಿ ಎಂದು ಎಲ್ಲರೂ ಹಾರೈಸಿದರು. ಪ್ರಚಾರ್ಯರಾದ ಗೌರಮ್ಮ, ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರವಿಂದ್ರರೆಡ್ಡಿ, ಡಾ.ಎಮ.ಎಸ್. ಬಾಸಗೂಡಿ. ಶಿವರಾಜ ಕಣಜಿ, ಶ್ರೀಮತಿ ಲಕ್ಷ್ಮೀ ಶಿಲಾ, ಮಂಜುನಾಥ್ ರಾಜಕುಮಾರ ಹುಡಗೀಕರ, ನಾಗರಾಜ ರಘೋಜಿ ಶ್ರೀನಿವಾಸರೆಡ್ಡಿಆನಂತ ಶಿವನಾಯಕ ಉಪಸ್ಥಿತರಿದ್ದರು.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿ: ಡಾ. ರಜನೀಶ್ ವಾಲಿ

• ಮಲ್ಲಮ್ಮ ನುಡಿ ವಾರ್ತೆ ಬೀದರ



ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯದ ಮೇರಾ ಯುವ ಭಾರತ ಹಾಗೂ ಬಸವೇಶ್ವರ ಬಿ.ಎಡ್. ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಕಾಲೇಜು ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮ ನಡೆಯಿತು.ಕಾರ್ಯಕ್ರಮವನ್ನು ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯ ಡಾ. ರಜನೀಶ್ ವಾಲಿ ಗಿಡ ನೆಡುವುದರ ಮೂಲಕ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, "ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡ ನೆಟ್ಟು ಅದರ ಪೋಷಣೆ ಮಾಡಿದರೆ ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡಬಹುದು" ಎಂದು ಹೇಳಿದರು. ಮೇರಾ ಯುವ ಭಾರತ ಜಿಲ್ಲಾ ಯುವ ಅಧಿಕಾರಿ ನಿಖಿಲ್ ಕೊಕ್ಕುಲಾರ ಮಾತನಾಡಿ, "ವಿಶ್ವ ಪರಿಸರ ದಿನಾಚರಣೆ ಕೇವಲ ಒಂದು ದಿನಕ್ಕೆ ಸೀಮಿತವಾಗದೆ ಪ್ರತಿದಿನ ಪರಿಸರ ಸಂರಕ್ಷಣೆಯ ಸಂಕಲ್ಪ ಕೈಗೊಳ್ಳಬೇಕು.

ಯುವಜನರು ಪರಿಸರ ಜಾಗೃತಿ ಮೂಡಿಸುವಲ್ಲಿ ಮುಂಚೂಣಿಯ ಪಾತ್ರ ವಹಿಸಬೇಕು" ಎಂದು ತಿಳಿಸಿದರು.ರೋಟರಿ ಕ್ಲಬ್ ಅಧ್ಯಕ್ಷಆದಿಶ್ ವಾಲಿ ಮಾತನಾಡಿ, "ಪರಿಸರ ಉಳಿದರೆ ಮಾತ್ರ ಮಾನವ ಜೀವನ ಸುರಕ್ಷಿತವಾಗಿರುತ್ತದೆ. ಯುವಕರು ಪರಿಸರ ಜಾಗೃತಿಗೆ ಮುಂದಾಗಿ ಸಮಾಜದಲ್ಲಿ ಹಸಿರು ಕ್ರಾಂತಿಗೆ ಕೈಜೋಡಿಸಬೇಕು" ಎಂದು ಕರೆ ನೀಡಿದರು.ರಾಜ್ಯ ಯುವ ಪ್ರಶಸ್ತಿ ಪುರಸ್ಕೃತ ಮಹೇಶ್ ಗೋರನಾಳಕರ ಮುಖ್ಯ ಅತಿಥಿಯಾಗಿ ಭಾಗವಹಿಸಿದರು. ಸುಭಾಸ್ ಚಂದ್ರಬೋಸ್‌ಯುವಕ ಸಂಘದ ಅಧ್ಯಕ್ಷ ರತ್ನದೀಪ್ ಕಸ್ತೂರೆ, ಕಾಲೇಜು ಪ್ರಾಂಶುಪಾಲ ಮಲ್ಲಿಕಾರ್ಜುನ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಆದಿಶ್ ವಾಲಿ ಅವರನ್ನು ಸನ್ಮಾನಿಸಲಾಯಿತು. ವಿಚಾರ ಸಂಕಿರಣದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು.

## ನರೇಗಾ ಕಾಮಗಾರಿ ಸ್ಥಳಕ್ಕೆ ಇಒ ಹಣಮಂತರಾಯ ಕೌಟಗೆ ಭೇಟಿ, ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ತಾಲೂಕಿನ ಬೆಳಕುಣಿ (ಬಿಎಚ್) ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (ನರೇಗಾ) ಯೋಜನೆಯಡಿ ನಡೆಯುತ್ತಿರುವ ಕಾಲುವೆ ಹಾಗೂ ಚೆಕ್ ಡ್ಯಾಮ್ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ (EN) ಹಣಮಂತರಾಯ ಕೌಟಗೆ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಾಮಗಾರಿ ವೀಕ್ಷಿಸಿದ EN ಅವರು, ಸ್ಥಳದಲ್ಲಿದ್ದ ಕೂಲಿಕಾರರೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿದರು. ಇದೇ ಸಂದರ್ಭದಲ್ಲಿ ತಂಪಾದ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಕೂಲಿಕಾರರಿಗೆ ಮಾವಿನ ಹಣ್ಣುಗಳನ್ನು ವಿತರಿಸಿ ಪ್ರೋತ್ಸಾಹಿಸಿದರು.

ಊರಿನಲ್ಲೇ ನೆಮ್ಮದಿಯ ಜೀವನ ಸಾಗಿಸಿ:ಬಳಿಕ ಮಾತನಾಡಿದ ಇಓ ಹಣಮಂತರಾಯ ಕೌಟಗೆ ಅವರು, "ನರೇಗಾ ಯೋಜನೆಯಡಿ ಗಂಡು ಮತ್ತು ಹೆಣ್ಣು ಇಬ್ಬರಿಗೂ ಸಮಾನವಾಗಿ ದಿನಕ್ಕೆ 370/– ರೂಪಾಯಿ ಕೂಲಿ ವೇತನ ನೀಡಲಾಗುತ್ತಿದೆ. ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬಕ್ಕೂ ಒಂದು ಆರ್ಥಿಕ ವರ್ಷದಲ್ಲಿ ಕಡ್ಡಾಯವಾಗಿ 100 ದಿನಗಳ ಉದ್ಯೋಗ ನೀಡಲಾಗುತ್ತದೆ. ಆದ್ದರಿಂದ ಗ್ರಾಮೀಣ ಭಾಗದ ಜನರು ಉದ್ಯೋಗ ಅರಸಿ ಬೇರೆ ನಗರ ಪ್ರದೇಶಗಳಿಗೆ ಗುಳೆ ಹೋಗಬಾರದು. ತಮ್ಮ ಸ್ವಂತ ಊರಿನಲ್ಲಿಯೇ ಸಿಗುವ ಕೆಲಸವನ್ನು ಸದುಪಯೋಗ ಪಡಿಸಿಕೊಂಡು ನೆಮ್ಮದಿಯ ಜೀವನ ಸಾಗಿಸಬೇಕು," ಎಂದು ಕರೆ ನೀಡಿದರು.

ಡಿಜಿಟಲ್ ಹಾಜರಾತಿ ಹಾಗೂ ವಿಮೆ ಜಾಗೃತಿ:ಮುಂದುವರಿದು, ಎನ್‌ಎಂಎಂಎಸ್ (NMMS) ಆಪ್ ಮೂಲಕ ಹಾಜರಾತಿ ದಾಖಲಿಸುವ ವಿಧಾನ, ಇ–ಕೆವೈಸಿ (e-KYC) ಪ್ರಕ್ರಿಯೆಯ ಮಹತ್ವ ಹಾಗೂ ಮುಖದ ದೃಢೀಕರಣ (Face Authentication) ಮೂಲಕ ಹಾಜರಾತಿ ಪಡೆಯುವ ನೂತನ ತಂತ್ರಜ್ಞಾನದ ಕುರಿತು ಕೂಲಿಕಾರರಿಗೆ ಮನವರಿಕೆ ಮಾಡಿಕೊಟ್ಟರು. ನಂತರ ಕೂಲಿಕಾರರ ಹಾಜರಾತಿ ಪುಸ್ತಕವನ್ನು ಪರಿಶೀಲಿಸಿದ ಅವರು, ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ 'ಪ್ರಧಾನ ಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ' (PMJJBY) ಮತ್ತು 'ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ' (PMSBY) ಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿ, ಇದುವರೆಗೆ ಇದರ ಲಾಭ ಪಡೆಯದ ಕಾರ್ಮಿಕರು ತಕ್ಷಣವೇ ಯೋಜನೆಗೆ ನೋಂದಾಯಿಸಿಕೊಳ್ಳುವಂತೆ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಪ್ರದೀಪಕುಮಾರ, ಡಿಇಓ ವಿವೇಕ ಮಠಪತಿ, ಕಾಮಗಾರಿ ಮೇಲ್ವಿಚಾರಕರು (ಮೇಟ್) ಹಾಗೂ ಗ್ರಾಮದ ನೂರಾರು ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

## ಪರಿಸರ ಕಾಳಜಿ ಅಗತ್ಯ ರವಿಗೌಡ ಚಿಕ್ಕೊಂಡ



• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ತಾಲೂಕಿನ ಹಂಗರಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪಟ್ಟಣದ ವಿವೇಕ್ ಬ್ರಿಗೇಡ್ ಸಂಸ್ಥೆ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು. ಶಾಲೆಯ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಮತ್ತು ಎಸ್ಡಿಎಂಸಿ ಸದಸ್ಯರೊಂದಿಗೆ ಜಾಗೃತ ಜಾಥಾವನ್ನು ಪ್ರಮುಖ ಬೀದಿಗಳಲ್ಲಿ ಸಂಚರಿಸಲಾಯಿತು. ವಿವೇಕ್ ಬ್ರಿಗೇಡ್ ಸದಸ್ಯ ವಿನೂತ ಕಲ್ಲೂರ ಪ್ರಸ್ತಾವಿಕವಾಗಿ ಮಾತನಾಡಿ, ಪರಿಸರ ದಿನಾಚರಣೆ ಕುರಿತು ಮಕ್ಕಳಿಗೆ ತಿಳುವಳಿಕೆ ಹಾಗೂ ತಮ್ಮ ಸಂಸ್ಥೆಯ ಕಾರ್ಯ ಕಲಾಪಗಳ ಕುರಿತು ಮಾತನಾಡಿದರು. ದಿವ್ಯ ಸಾನಿಧ್ಯವನ್ನು ವಹಿಸಿದ್ದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಪರಿಸರವನ್ನು ನೈರ್ಮಲ್ಯವಾಗಿ ಇಟ್ಟುಕೊಳ್ಳಬೇಕು. ಆರೋಗ್ಯ ಸುಧಾರಿಸಿಕೊಳ್ಳುವ ಬಗ್ಗೆ ಮಕ್ಕಳಿಗೆ ಮೊಬೈಲ್ ಬಿಡಿ ಪುಸ್ತಕ ಹಿಡಿ ಎಂಬ ಸಂದೇಶವನ್ನು ತಿಳಿಸಿದರು. ಸಮಾಜ ಸೇವಕ ರವಿಗೌಡ ಚಿಕ್ಕೊಂಡ ಮಾತನಾಡಿ, ನಮ್ಮಲ್ಲಿ ಪರಿಸರ ಕಾಳಜಿ ಬಗ್ಗೆ ಹಾಗೂ ಪರಿಸರ ಸಂರಕ್ಷಣೆ ಮನೆಗೊಂದು ಮರ ಊರಿಗೊಂದು ವನದ ಸಂದೇಶ ಸಾರಿದರು. ಎಸ್.ಎಸ್ ಬಶೆಟ್ಟಿ ಮಾತನಾಡಿದರು.ಪಿ.ಎಸ್ ಬಾಗೇವಾಡಿ ನಿರೂಪಿಸಿದರು.ಈ ಸಂದರ್ಭದಲ್ಲಿ ಬಸವರಾಜ್ ಕೋಟಿ, ಶಿವಾನಂದ ತೋಳನೂರ ಹಾಗೂ ಎಸ್ ಡಿ ಎಂ ಸಿ ಪದಾಧಿಕಾರಿಗಳು ಇದ್ದರು.

## ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಕಾಂಬ್ಳೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಪರಿಸರದ ಬಗ್ಗೆ ಜಾಗೃತಿ, ರಕ್ಷಣೆ ಮತ್ತು ಜೀವಿಗಳ ಪೋಷಣೆಯಲ್ಲಿ ಪರಿಸರ ಪ್ರಮುಖ ಪಾತ್ರವನ್ನುವಹಿಸುತ್ತದೆ. ಆದ್ದರಿಂದ ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆಂದು ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಎಸ್. ಎಂ ಕಾಂಬ್ಳೆ ಕರೆ ನೀಡಿದರು.

ಇಂದು ನೆಡೆದ ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಕೊಪ್ಪಳ ತಾಲೂಕಿನ ಗಿಣಿಗೇರಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಗ್ರಾಮ ಪಂಚಾಯತಿ ಹಾಗು ಅಲ್ಟಾಟೆಕ್ ಸಿಮೆಂಟ್ ಕಂಪನಿ ಸಹಯೋಗದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಸಸಿ ನೆಡುವ ಹಾಗು ಪೈಪ್ ಕಾಂಪೋಸ್ಟ್ ಗೊಬ್ಬರ ತಯಾರಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪರಿಸರ ಸಮೃದ್ಧ, ಆರೋಗ್ಯಕರ ಜೀವನ ಮತ್ತು ಭೂಮಿಯ ಮೇಲಿನ ಪ್ರತಿಯೊಂದು ಜೀವಿಯ ಜೀವನದ ಅಸ್ತಿತ್ವಕ್ಕೆ ಕಾರಣವಾಗಿರುತ್ತದೆ. ಇದನ್ನು ಹೇಗಾದರೂ ಮಾಡಿ ತಡೆಗಟ್ಟುವ ನಿಟ್ಟಿನಲ್ಲಿ ಪ್ರತಿಯೊಬ್ಬರಲ್ಲೂ ಪರಿಸರದ ಬಗ್ಗೆ ಕಾಳಜಿ ಮೂಡಿಸುವ ಸಲುವಾಗಿ ಪ್ರತಿ ವರ್ಷ ಜೂನ್–5 ರಂದು ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತದೆ.

ಪರಿಸರದ ಬಗ್ಗೆ ಪ್ರತಿ ಮನುಷ್ಯನಲ್ಲೂ ಜಾಗೃತಿ ಮೂಡಿಸುವುದು ಮತ್ತು ಪರಿಸರವನ್ನು ಹಾಳು ಮಾಡುವುದನ್ನು ತಡೆಯುವುದು ಇದರ ಉದ್ದೇಶವಾಗಿದೆ. ನಮ್ಮ ಪರಿಸರದ ಸಂರಕ್ಷಣೆಗಾಗಿ ನಾವೆಲ್ಲರೂ ಜಾಗೃತಿ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸುವುದು ಅವಶ್ಯವಿದೆ. ನಮ್ಮ ದೈನಂದಿನ ಜೀವನದಲ್ಲಿ ಕೆಲವೊಂದು ಪರಿಸರಕ್ಕೆ ಸಂಬಂಧಿಸಿದಂತೆ ಬದಲಾವಣೆ ಅನುಸರಿಸಿದಲ್ಲಿ ಭೂಮಿಯ ಉಳಿವಿಗೆ ಸಹಾಯಕವಾಗುತ್ತದೆ.ಬೇವು, ಅರಳೆ, ನೆರಳೆ ಸಸಿಗಳನ್ನು ನೆಡಲಾಯಿತು.

ಮಾಜಿ ಜಿಲ್ಲಾ ಪಂಚಾಯತ ಸದಸ್ಯ ಗೂಳಪ್ಪ ಹಲಗೇರಿ ಮಾತನಾಡಿ ಮರಗಳನ್ನು ಕಡಿಯುತ್ತಿರುವದರಿಂದ ಬಿಸಿಲಿನ ತಾಪ ಏರಿಕೆಗೆ ಕಾರಣವಾಗಿದ್ದು ಸ್ವಚ್ಛ ಸುಂದರ ಜೀವನ ನಡೆಸಬೇಕಾದರೆ ಪ್ರತಿ ಮನೆಗೆ ಒಂದು ಗಿಡ ನೆಡುವದಲ್ಲದೇ ಅಷ್ಟೇ ಅವುಗಳನ್ನು ಪೋಷಿಸಬೇಕೆಂದು ಕರೆ ನೀಡಿದರು. ಹೆಚ್ಚು ಹೆಚ್ಚು ಗಿಡಗಳನ್ನು ನೆಡುವದರಿಂದ ಗ್ರಾಮದಲ್ಲಿ ಉತ್ತಮ ಪರಿಸರ ನಾವು ಪಡೆಯಬಹುದಾಗಿದೆ ಎಂದರು.

ಪೈಪ್ ಕಾಂಪೋಸ್ಟ್ ಪ್ರಾತ್ಯಕ್ಷಿಕೆ:–ಮನೆಯಲ್ಲಿರುವ ಹಸಿ ಕಸವನ್ನು ಗೊಬ್ಬರವನ್ನಾಗಿ ಪರಿವರ್ತಿಸಲು ಪ್ರತಿ ಮನೆಯ ಮುಂದಿನ ಜಾಗೆಯಲ್ಲಿ ಪೈಪ್ ಅಳವಡಿಕೆ, ಸಗಣಿ, ಬೆಲ್ಲ ಮಿಶ್ರಣ ಮಾಡಿ ಪ್ರತಿ ದಿನ ಹಸಿ ಕಸವನ್ನು ಇದರಲ್ಲಿ ಹಾಕಿ ಇದು ಭರ್ತಿಯಾದ ಮೇಲೆ 04 ತಿಂಗಳು ಹಾಗೆ ಬಿಟ್ಟು ನಂತರ ಅದನ್ನು ಕೈ ತೋಟಕ್ಕೆ ಗೊಬ್ಬರವಾಗಿ ಬಳಸಲು ಯೋಗ್ಯವಾಗುವ ಕುರಿತು ಪ್ರಾತ್ಯಕ್ಷಿಕೆ ಮೂಲಕ ಜಿಲ್ಲಾ ಪಂಚಾಯತಿಯ ಸ್ವಚ್ಛ ಭಾರತ ಮಿಷನ್ ಸಮಾಲೋಚಕಿ ಬಸಮ್ಮ ಹುಡೇದ ವಿವರಿಸಿದರು.

ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಮಾಜಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಕರಿಯಪ್ಪ ಮೇಟಿ, ತಾಲೂಕ ಪಂಚಾಯತಿ ನಾಮನಿರ್ದೇಶಿತ ಕೆಡಿಪಿ ಸದಸ್ಯ ನಾಗರಾಜ ಚಳ್ಳೊಳ್ಳಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುಳಾದೇವಿ ಹೂಗಾರ, ಎಸ್ ಡಿಎಂಸಿ ಅಧ್ಯಕ್ಷರಾದ ಸುಭಾಸ ಹಲಗೇರಿ, ಅಲ್ಟಾಟೆಕ್ ಸಿಮೆಂಟ್ ಕಂಪನಿಯ ಎಚ್ ಎಫ್ ಜೋಶಿ, ದಾನಪ್ಪ ಹಲಗೇರಿ, ಮಲ್ಲಿಕಾರ್ಜುನ ಹಲಗೇರಿ, ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಮುಖಂಡರಾದ ಗೂಡ್ನೆಪ್ಪ ಹೋಸೂರು, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು, ಪ್ರೌಢಶಾಲೆ ಮುಖ್ಯೋಪಾಧ್ಯಾಯರು, ಸಂಜೀವಿನಿ ಯೋಜನೆಯ ಸಿಬ್ಬಂದಿ ವಿದ್ಯಾವತಿ, & ಸದಸ್ಯರು, ಗ್ರಾ.ಪಂ ಕಾರ್ಯದರ್ಶಿ ಮಂಜುನಾಥ, ಸಿಬ್ಬಂದಿಗಳು ಹಾಜರಿದ್ದರು.

## ಹಳೆಯ ವಿದ್ಯಾರ್ಥಿಗಳಿಂದ ಶಿಕ್ಷಕರಿಗೆ ಗೌರವ ಸಮರ್ಪಣೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

> ಗಮನ ಸೆಳೆದ ಗುರು–ಶಿಷ್ಯರ ಬಾಂಧವ್ಯ
> ತಮ್ಮನ್ನು ಶಿಕ್ಷಣದ ಹಾದಿಯಲ್ಲಿ ಮುನ್ನಡೆಸಿದ ಗುರುಗಳನ್ನು ಗೌರವಿಸುವ ಮೂಲಕ ಹಳೆಯ ವಿದ್ಯಾರ್ಥಿಗಳು ಕೃತಜ್ಞತೆ ಸಲ್ಲಿಸಿದ್ದು, ಗುರು–ಶಿಷ್ಯರ ನಡುವಿನ ಅವಿನಾಭಾವ ಸಂಬಂಧವನ್ನು ಮತ್ತೊಮ್ಮೆ ಅನಾವರಣಗೊಳಿಸಿದ ಕಾರ್ಯಕ್ರಮವಾಗಿ ಇದು ಗಮನ ಸೆಳೆಯಿತು.

ತಾಲ್ಲೂಕಿನ ಲಾಧಾ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘದ ವತಿಯಿಂದ ಆಯೋಜಿಸಲಾದ ಗುರು ವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಅರ್ಥಪೂರ್ಣವಾಗಿ ನಡೆಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಬಲವಂತರಾವ ಪಾಟೀಲ, ಶಿಕ್ಷಕರು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಶಿಲ್ಪಿಗಳಾಗಿದ್ದು, ಅವರ ಮಾರ್ಗದರ್ಶನ ಮತ್ತು ಸಂಸ್ಕಾರಯುತ ಶಿಕ್ಷಣವೇ ವಿದ್ಯಾರ್ಥಿಗಳನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುತ್ತದೆ ಎಂದು ಹೇಳಿದರು.ಸುಮಾರು 30 ವರ್ಷಗಳ ಹಿಂದೆ ಇದೇ ಶಾಲೆಯಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಇಂದು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ತಮ್ಮ ಗುರುಗಳನ್ನು ಸ್ಮರಿಸಿ ಗೌರವಿಸುವುದು ಶಿಕ್ಷಕ ವೃತ್ತಿಯ ಮಹತ್ವವನ್ನು ಸಾರುತ್ತದೆ. ವಿದ್ಯಾರ್ಥಿಗಳ ಜೀವನದಲ್ಲಿ ಶಿಕ್ಷಕರ ಕೊಡುಗೆ ಎಂದಿಗೂ ಮರೆಯಲಾಗದು ಎಂದು ಅವರು ಅಭಿಪ್ರಾಯಪಟ್ಟರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯಶಿಕ್ಷಕ ಬಸವರಾಜ ನೆಳಗೆ ವಹಿಸಿದ್ದರು. ಪ್ರೌಢಶಾಲೆಯ ಮುಖ್ಯಶಿಕ್ಷಕ ಬಾಲಾಜಿ ರಾಜೂರೆ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.ಈ ಸಂದರ್ಭದಲ್ಲಿ 1997–98ನೇ ಸಾಲಿನ 7ನೇ ತರಗತಿ ಹಾಗೂ 2000–01ನೇ ಸಾಲಿನ 10ನೇ ತರಗತಿಯ ಹಳೆಯ ವಿದ್ಯಾರ್ಥಿಗಳು ತಮ್ಮ ಹಾಲಿ ಹಾಗೂ ನಿವೃತ್ತ ಶಿಕ್ಷಕರನ್ನು ಗ್ರಾಮದ ಲದ್ದಿ ಸೋಮಣ್ಣ ದೇವಸ್ಥಾನದಿಂದ ಶಾಲೆಯವರೆಗೆ ಮೆರವಣಿಗೆಯ ಮೂಲಕ ಕರೆತಂದು ಆತ್ಮೀಯವಾಗಿ ಸನ್ಮಾನಿಸಿದರು. ಶಿಕ್ಷಕರಿಗೆ ಶಾಲು ಹೊದಿಸಿ, ಫಲಪುಷ್ಪ ನೀಡಿ ಗೌರವ ಸಲ್ಲಿಸಿದರು.ನಿವೃತ್ತ ಶಿಕ್ಷಕ ಶಂಭುಲಿಂಗ ವಾಲದೊಡ್ಡಿ ಬಸವ ವಚನ ಗೀತೆ ಹಾಡುವ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಕಳೆ ತಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಾದ ತಾತೇರಾವ ಭಾಟಸಾಂಗೆ, ಸಂಪತರಾವ, ಸಂಗಣ್ಣ ರೆಡ್ಡಿ, ಎಸ್.ಕೆ. ನಾಲವಾರ, ಅಶೋಕ ದಂಡೆ, ಶಾಂತಲಿಂಗ, ಶಿವಶಂಕರ, ವೆಂಕಟರಾವ, ರಾಧಾಕಿಶನ್, ಬಿ.ಎಸ್. ನೆಳಗೆ, ಮಹೇಂದ್ರ, ಮುದಕಪ್ಪ, ಮಲ್ಲಿಕಾರ್ಜುನ, ರಮೇಶ್ ಬರ್ಮಾ, ರಮೇಶ್ ಕಾನೇಕರ್, ನಾಗಶೆಟ್ಟಿ ಸೇರಿದಂತೆ ಅನೇಕ ಗಣ್ಯರು ಹಾಗೂ ಹಳೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ನಾಗಪ್ಪ ಕನಕಾಪೂರಗೆ ಭಾವಪೂರ್ಣ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಪೊಲೀಸ್ ಇಲಾಖೆಯಲ್ಲಿ ಪ್ರಾಮಾಣಿಕತೆ, ಕರ್ತವ್ಯನಿಷ್ಠೆ ಹಾಗೂ ಜನಸ್ನೇಹಿ ಸೇವೆಯ ಮೂಲಕ ವಿಶಿಷ್ಟ ಗುರುತಿಸಿಕೊಂಡ ನಿವೃತ್ತ ಪಿ.ಎಸ್.ಐ ನಾಗಪ್ಪ ಕನಕಾಪೂರ ಅವರ ಅಭಿನಂದನಾ ಮತ್ತು ಕೃತಜ್ಞತಾ ಸಮರ್ಪಣಾ ಸಮಾರಂಭವು ನಗರದ ಬಾಲಾಜಿ ಫಂಕ್ಷನ್ ಹಾಲ್‌ನಲ್ಲಿ ಅದ್ದೂರಿಯಾಗಿ ನೆರವೇರಿತು.ಕಾರ್ಯಕ್ರಮವನ್ನು ಅತಿಥಿಗಳು ಹಾಗೂ ಗಣ್ಯರು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿದರು. ಬಳಿಕ ನಾಗಪ್ಪ ಕನಕಾಪೂರ ದಂಪತಿಗಳನ್ನು ಕುಟುಂಬಸ್ಥರು, ಸ್ನೇಹಿತರು ಹಾಗೂ ಹಿತೈಷಿಗಳು ಹೂವಿನ ಮಳೆಯೊಂದಿಗೆ ಭವ್ಯವಾಗಿ ಸ್ವಾಗತಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಬಿ.ಎಸ್. ಸುರೇಶ ಅವರು, "ನಾಗಪ್ಪ ಕನಕಾಪೂರ ಅವರು ಪೊಲೀಸ್ ಇಲಾಖೆಯಲ್ಲಿ ಕಳಂಕ ರಹಿತ ಸೇವೆ ಸಲ್ಲಿಸಿ ಸಮಾಜಕ್ಕೆ ಮಾದರಿಯಾಗಿದ್ದಾರೆ. ಜನರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡಿ ನ್ಯಾಯ ಒದಗಿಸಿದ ಅವರ ಸೇವೆ ಎಲ್ಲರಿಗೂ ಪ್ರೇರಣಾದಾಯಕ," ಎಂದು ಅಭಿಪ್ರಾಯಪಟ್ಟರು.

ಹಿರಿಯ ಸಾಹಿತಿ ಮಹಾಂತೇಶ ಮಲ್ಲನಗೌಡರ ಮಾತನಾಡಿ, "ನಾಗಪ್ಪ ಅವರು ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ಅವಧಿಯಲ್ಲಿ ಸಾರ್ವಜನಿಕರ ಅಪಾರ ಮೆಚ್ಚುಗೆಗೆ ಪಾತ್ರರಾಗಿದ್ದರು. ಅಪರಾಧ ತಡೆಗಟ್ಟುವ ನಿಟ್ಟಿನಲ್ಲಿ ಜಾಗೃತಿ ಕಾರ್ಯಕ್ರಮಗಳು, ಶಾಂತಿ ಸಭೆಗಳು ಹಾಗೂ ಕಾನೂನು ಅರಿವು ಮೂಡಿಸುವ ಕಾರ್ಯಗಳ ಮೂಲಕ ಗ್ರಾಮೀಣ ಜನರ ಮನಸ್ಸಿನಲ್ಲಿ ಅಚ್ಚಳಿಯದ ಸ್ಥಾನ ಪಡೆದಿದ್ದಾರೆ," ಎಂದು ಶ್ಲಾಘಿಸಿದರು.

ಹಿರಿಯರಾದ ಕೊಟ್ರಬಸಯ್ಯ ಹಾಗೂ ಪ್ರಾಚಾರ್ಯ ಡಾ. ಮಲ್ಲಪ್ಪ ಅವರು ನಾಗಪ್ಪ ಅವರ ಪೊಲೀಸ್ ಸೇವೆ ಹಾಗೂ ಸಾಮಾಜಿಕ ಕಾರ್ಯಗಳನ್ನು ಸ್ಮರಿಸಿ ಅಭಿನಂದಿಸಿದರು.

ನಿವೃತ್ತ ಅಧಿಕಾರಿ ನಾಗಪ್ಪ ಕನಕಾಪೂರ ಮಾತನಾಡಿ, "ನನ್ನ ಸೇವಾ ಅವಧಿಯಲ್ಲಿ ಮಾರ್ಗದರ್ಶನ ಹಾಗೂ ಸಹಕಾರ ನೀಡಿದ ಇಲಾಖೆಯ ಮೇಲಾಧಿಕಾರಿಗಳು, ಸಹೋದ್ಯೋಗಿಗಳು ಮತ್ತು ಸಾರ್ವಜನಿಕರಿಗೆ ಹೃತ್ಪೂರ್ವಕ ಧನ್ಯವಾದಗಳು," ಎಂದು ತಿಳಿಸಿದರು.

ಇದೇ ವೇಳೆ ನಾಗಪ್ಪ ಕನಕಾಪೂರ ಅವರ ಜೀವನ ಸಾಧನೆ ಕುರಿತ ಸಾಕ್ಷ್ಯಚಿತ್ರ ಪ್ರದರ್ಶನಗೊಂಡು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಇಲಾಖೆಯ ಅಧಿಕಾರಿಗಳು, ಸ್ನೇಹಿತರು, ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಅವರನ್ನು ಸನ್ಮಾನಿಸಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ರಾಘವೇಂದ್ರ ಆಚಾರ್ಯ, ಆನಂದ ಸ್ವಾಮೀಜಿ, ಮಹಾಂತೇಶಗೌಡ ಪಾಟೀಲ್, ವೆಂಕಟೇಶ ಬಾರಕೇರ, ಹೊನ್ನೂರಸಾಬ್ ನದಾಫ್, ಮಲ್ಲಿಕಾರ್ಜುನ ಶಿಕ್ಷಕರು, ಕರಿಯಪ್ಪ, ಬಾಲಚಂದ್ರ, ಬಸವರಾಜ ಕೊಪ್ಪಳ, ಬಿ.ಎನ್. ಹೊರಪೇಟಿ, ನರೇಂದ್ರಪಾಟೀಲ್, ಪ್ರಿಯದರ್ಶಿನಿ ಮುಂಡರಗಿಮಠ, ದಯಾನಂದ, ಮಾರುತಿ ಪೂಜಾರ, ಹನುಮಂತಪ್ಪ ಕನಕಾಪೂರ ಸೇರಿದಂತೆ ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಹೋದ್ಯೋಗಿಗಳು, ಸ್ನೇಹಿತರು, ಗ್ರಾಮಸ್ಥರು ಹಾಗೂ ಯುವಕರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಮಲ್ಲಿಕಾರ್ಜುನ ಹಾಗೂ ಬಸವರಾಜ ಹೂಗಾರ ಅವರಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಸಮಾರಂಭಕ್ಕೆ ಮತ್ತಷ್ಟು ಮೆರುಗು ತಂದವು.

## ಪರಿಸರ ಉಳಿಸಲು ಗಿಡಗಳನ್ನು ದತ್ತು ಪಡೆಯಿರಿ: ಡಾ. ಸುಜಾತಾ ಜಂಗಮಶೆಟ್ಟಿ




• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ,06–ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಕೇವಲ ಗಿಡಗಳನ್ನು ನೆಡುವುದಷ್ಟೇ ನಮ್ಮ ಜವಾಬ್ದಾರಿಯಲ್ಲ, ಪದ್ಮಶ್ರೀ ಸಾಲುಮರದ ತಿಮ್ಮಕ್ಕನವರ ಪರಿಸರ ಪ್ರೇಮವನ್ನು ನಾವೆಲ್ಲರೂ ಮಾದರಿಯಾಗಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಸುವರ್ಣ ಸಾಂಸ್ಕೃತಿಕ ಸಮುಚ್ಚಯದ ಆವರಣದಲ್ಲಿ ನೆಡಲಾದ ಗಿಡಗಳು ಹಾನಿಯಾಗದಂತೆ ರಕ್ಷಿಸಲು ಇಲ್ಲಿನ ಸಿಬ್ಬಂದಿಗಳು ಗಿಡಗಳನ್ನು ದತ್ತು ಪಡೆದು ಪೋಷಿಸಬೇಕು ಎಂದು ಕಲಬುರಗಿ ರಂಗಾಯಣದ ನಿರ್ದೇಶಕರಾದ ಡಾ. ಸುಜಾತಾ ಜಂಗಮಶೆಟ್ಟಿ ಅವರು ಹೇಳಿದರು.ಜಿಲ್ಲಾಡಳಿತ, ಪ್ರಾದೇಶಿಕ ಅರಣ್ಯ ವಿಭಾಗ, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ ಹಾಗೂ ಕರ್ನಾಟಕ ರಂಗಾಯಣ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ಡಾ. ಸಿದ್ದಯ್ಯ ಪುರಾಣಿಕ ಸುವರ್ಣ ಸಾಂಸ್ಕೃತಿಕ ಸಮುಚ್ಚಯದ ಆವರಣದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಗಿಡ ನೆಟ್ಟು, ಪೂಜೆ ಸಲ್ಲಿಸಿ ಅವರು ಮಾತನಾಡಿ, ಪರಿಸರ ದಿನದ ಅಂಗವಾಗಿ ಸಮುಚ್ಚಯದ ಆವರಣಕ್ಕೆ ಒಟ್ಟು 200 ಗಿಡಗಳನ್ನು ನೀಡಿ, ಅದರಲ್ಲಿ 50 ಗಿಡಗಳನ್ನು ಕಾರ್ಯಕ್ರಮದ ಅಂಗವಾಗಿ ನೆಡಲಾಯಿತು.

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಬಸವರಾಜ ಡಾಂಗೆ ಅವರು ಮಾತನಾಡಿ, ರಂಗಾಯಣದ ನಿರ್ದೇಶಕರು ಸೂಚಿಸಿದಂತೆ ಸಿಬ್ಬಂದಿಗಳು ಗಿಡಗಳನ್ನು ದತ್ತು ಪಡೆಯುವುದು ಅತ್ಯಂತ ಉತ್ತಮ ಆಲೋಚನೆಯಾಗಿದೆ. ಪ್ರತಿದಿನ ಊಟ ಮಾಡಿದ ನಂತರ ಗಿಡಗಳ ಬಳಿಯೇ ಕೈ ತೊಳೆದುಕೊಂಡರೆ ನೀರು ವ್ಯರ್ಥವಾಗುವುದಿಲ್ಲ ಮತ್ತು ಗಿಡಗಳಿಗೂ ನಿರಂತರ ನೀರು ಸಿಗುತ್ತದೆ. ಪ್ರತಿಯೊಬ್ಬರೂ ತಮ್ಮ ಹುಟ್ಟುಹಬ್ಬದ ಸವಿನೆನಪಿಗೆ ಒಂದೊಂದು ಗಿಡ ನೆಟ್ಟರೆ, ಆ ಗಿಡಗಳು ನಮ್ಮ 60–70 ವರ್ಷಗಳ ಆಯಸ್ಸಿನವರೆಗೂ ನಮಗೆ ಉತ್ತಮ ಪರಿಸರ ನೀಡುತ್ತವೆ ಎಂದು ತಿಳಿಸಿದರು.ರಂಗಾಯಣದ ಆಡಳಿತಾಧಿಕಾರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ರಂಗಾಯಣದ ಕಲಾವಿದರು ಪರಿಸರ ಜಾಗೃತಿ ಮೂಡಿಸುವ ಪರಿಸರ ಗೀತೆಗಳನ್ನು ಹಾಡಿದರು.

ಈ ಸಂದರ್ಬದಲ್ಲಿ ಉಪವಲಯ ಅರಣ್ಯಾಧಿಕಾರಿ ರಮೇಶ ಹಾಳಕೇರಿ, ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ, ರಂಗಾಯಣದ ಕಲಾವಿದರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.



ಯಾದಗಿರಿ:ರಾಜ್ಯದ ನೂತನ ಮುಖ್ಯಮಂತ್ರಿಗಳಾಗಿ ಅಧಿಕಾರ ಸ್ವೀಕರಿಸಿರುವ ಡಿ.ಕೆ ಶಿವಕುಮಾರ್ ರವರನ್ನು ಬೆಂಗಳೂರಿನ ಅವರ ನಿವಾಸದಲ್ಲಿ ಕಾಂಗ್ರೆಸ್ ಹಿರಿಯ ಮುಖಂಡ ಡಾ.ಎಸ್.ಬಿ.ಕಾಮರೆಡ್ಡಿ ಅವರು ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು




ಯಾದಗಿರಿ: ತಾಲೂಕಿನ ಕಿಲ್ಲನಕೇರಾದಲ್ಲಿ ಸುಕ್ಷೇತ್ರ ಭದ್ರಕಾಳಿ ಬನದೇಶ್ವರ ದೇವಸ್ಥಾನದ ಭಕ್ತರು ಬಹಳ ಜನ ಇರುವುದರಿಂದ ಬೇಡಿಕೆಗೆ ಅನುಗುಣವಾಗಿ ಕೆ. ಕೆ. ರ್. ಟಿ. ಸಿ. ವತಿಯಿಂದ ಯಿಂದ ಯಾದಗಿರಿ ಯಿಂದ ಮದ್ವಾರ ಹೋಗುವ ಬಸ ಗಳು ಕಿಲ್ಲನಕೇರಾ ವಾಯ ಮಾಡಲಾಗಿದೆ. ಆದ್ದರಿಂದ ದೇವಸ್ಥಾನಕ್ಕೆ ಹೊರಡುವ ಭಕ್ತಾದಿಗಳು ಹಾಗೂ ಇನ್ನಿತರ ಸೌಲಭ್ಯಕ್ಕಾಗಿ ಮಾಡುವ ಜನಪ್ರತಿನಿಧಿಗಳು ಜನಸಾಮಾನ್ಯರು ವ್ಯಾಪಾರಸ್ಥರು ವಿದ್ಯಾರ್ಥಿಗಳು ಈ ಒಂದು ಸೌಲಭ್ಯವನ್ನು ಪಡೆದುಕೊಳ್ಳಬೇಕು. ಈ ಸಂದರ್ಭದಲ್ಲಿ ಬಸ್ಸಿಗೆ ಪೂಜೆಯನ್ನು ಸಲ್ಲಿಸಿ ಕಿಲ್ಲನಕೆರಾ ಗ್ರಾಮದ ಹಿರಿಯರು ಹರ್ಷ ವ್ಯಕ್ತಪಡಿಸಿದರು.

# ಲಯನ್ಸ್ ಕ್ಲಬ್ ಅಧ್ಯಕ್ಷ ಡಾ. ಸಿದ್ಧರಾಜರೆಡ್ಡಿ ಕಾರ್ಯದರ್ಶಿಯಾಗಿ ಶಿರಗೋಳ ಆಯ್ಕೆ






• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಅಂತರರಾಷ್ಟ್ರೀಯ ಮಟ್ಟದಲ್ಲಿ ಸಮಾಜಮುಖಿ ಸೇವೆಗಳ ಮೂಲಕ ಹೆಸರುವಾಸಿಯಾಗಿರುವ ಲಯನ್ಸ್ ಕ್ಲಬ್‌ನ ಯಾದಗಿರಿ ಘಟಕದ ನೂತನ ಅಧ್ಯಕ್ಷರಾಗಿ ಯುವ ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂಘಟಕ ಡಾ. ಸಿದ್ಧರಾಜರೆಡ್ಡಿ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಕಳೆದ ಹಲವು ವರ್ಷಗಳಿಂದ ಕ್ಲಬ್‌ನ ವಿವಿಧ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸುತ್ತಾ, ಕ್ರಿಯಾಶೀಲ ಸೇವೆಯ ಮೂಲಕ ಮನೆಮಾತಾಗಿರುವ ಡಾ. ಸಿದ್ಧರಾಜರೆಡ್ಡಿ ಅವರ ನೇತೃತ್ವಕ್ಕೆ ಸರ್ವ ಸದಸ್ಯರು ಹರ್ಷದಿಂದ ಸಮ್ಮತಿ ಸೂಚಿಸಿದ್ದಾರೆ. ಅಧ್ಯಕ್ಷರೊಂದಿಗೆ ನೂತನ ಕಾರ್ಯದರ್ಶಿಯಾಗಿ ಯುವ ಉದ್ಯಮಿ ಮಲ್ಲಿಕಾರ್ಜುನ ಶಿರಗೋಳ ಹಾಗೂ ಖಜಾಂಚಿಯಾಗಿ ಸಿದ್ರಾಮರೆಡ್ಡಿ ತಿಪ್ಪರೆಡ್ಡಿ ಅವರು ನೇಮಕಗೊಂಡಿದ್ದಾರೆ. ಬುಧವಾರ ಸಂಜೆ ಕನ್ಸಲ್ಟಿಂಗ್ ಇಂಜಿನಿಯರ್ಸ್ ಅಸೋಸಿಯೇಷನ್ ಕಚೇರಿಯಲ್ಲಿ ನಿರ್ಗಮಿತ ಅಧ್ಯಕ್ಷ ಭೀಮನಗೌಡ ಕ್ಯಾತ್ನಾಳ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನೂತನ ಪದಾಧಿಕಾರಿಗಳ ಆಯ್ಕೆ ನಡೆಯಿತು. ಸಭೆಯಲ್ಲಿ ನಿರ್ಗಮಿತ ಕಾರ್ಯದರ್ಶಿ ಡಾ. ಶಿವಪುತ್ರರೆಡ್ಡಿ ಪಾಟೀಲ, ವೆಂಕಟರೆಡ್ಡಿ ತಂಗಡಗಿ, ಸುರೇಶ ಜಾಕಾ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

"ಸೇವೆಯೇ ನಮ್ಮ ಉಸಿರು" ಎಂಬ ಧ್ಯೇಯದೊಂದಿಗೆ ಮುನ್ನಡೆಯುತ್ತಿರುವ ಡಾ. ಸಿದ್ಧರಾಜರೆಡ್ಡಿ ಅವರ ನೇತೃತ್ವದ ನೂತನ ತಂಡವು, ಲಯನ್ಸ್ ಕ್ಲಬ್‌ನ ಆಶಯಗಳಿಗೆ ತಕ್ಕಂತೆ ಮತ್ತಷ್ಟು ಜನೋಪಯೋಗಿ ಹಾಗೂ ವಿಧಾಯಕ ಕಾರ್ಯಗಳನ್ನು ಹಮ್ಮಿಕೊಂಡು ನೊಂದವರ ಪಾಲಿನ ಆಶಾಕಿರಣವಾಗಲಿ ಎಂದು ನಗರದ ಗಣ್ಯರು, ಹಿತೈಷಿಗಳು ಮನದುಂಬಿ ಶುಭ ಹಾರೈಸಿದ್ದಾರೆ.

# ಕೆಂಭಾವಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಣ್ಣು ಹಂಪಲು ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಮಾಜಿ ಜಿಲ್ಲಾ ಪಂಚಾಯತಿ ಅಧ್ಯಕ್ಷ ರಾಜ ಹನುಮಪ್ಪ ನಾಯಕ ದಣ್ಣಿ ಅವರ ಜನ್ಮದಿನದ ಪ್ರಯುಕ್ತ, ಸಂಘಟನೆ ಜಿಲ್ಲಾಧ್ಯಕ್ಷ ವಿಶ್ವಾರಾಧ್ಯ ದಿಮ್ಮೆ ರವರ ಆದೇಶದೊಂದಿಗೆ ಗುರುರಾಜ ಅಂಗಡಿಯವರ ನೇತೃತ್ವದಲ್ಲಿ ಕೆಂಭಾವಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಕೆಂಭಾವಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಗಿರೀಶ್ ಕುಲಕರ್ಣಿ ಅವರು ಮಾತನಾಡಿ, ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಜನ್ಮದಿನ ಆಚರಿಸಿಕೊಳ್ಳುತ್ತಿರುವುದು ಅಭಿನಂದನೀಯ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆಯ ಕೆಂಭಾವಿ ಹೋಬಳಿ ಕಾರ್ಮಿಕ ಘಟಕದ ಅಧ್ಯಕ್ಷ ಗುರುರಾಜ ಎಸ್. ಅಂಗಡಿ, ಸುರಪುರ ತಾಲೂಕು ಯುವ ಘಟಕದ ಅಧ್ಯಕ್ಷ ಭಾಗೇಶ್ ನಾಯಕ, ವೀರೇಶ ನಾಯ್ಕೊಡಿ, ಪರಮಣ್ಣ, ಹನುಮಂತರಾಯ, ಮೈಬೂಬ್, ದೇವು ಸೇರಿದಂತೆ ನಮ್ಮ ಕರ್ನಾಟಕ ಸೇನೆಯ ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಾರ್ಮಿಕ ಸಚಿವರಾಗಿ ಸಂತೋಷ ಲಾಡ್ ಮುಂದುವರೆಸಲು ಸಾವೂರ ಮನವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕರ್ನಾಟಕ ಸರ್ಕಾರದ ಕಾರ್ಮಿಕ ಸಚಿವರಾಗಿ ಕಾರ್ಯನಿರ್ವಹಿಸುತ್ತಿರುವ ಸಂತೋಷ ಲಾಡ್ ಅವರು ಕಾರ್ಮಿಕರ ಸಮಸ್ಯೆಗಳಿಗೆ ಸ್ಪಂದಿಸುವ, ಅವರ ನೋವು–ನಲಿವಿನಲ್ಲಿ ಸದಾ ಭಾಗಿಯಾಗಿರುವ ಜನನಾಯಕರು. ಕಾರ್ಮಿಕ ವರ್ಗದ ಸಂಕಷ್ಟಗಳಿಗೆ ಮಾನವೀಯ ಸ್ಪಂದನೆ ನೀಡುವ ಮೂಲಕ ಅವರು ರಾಜ್ಯದಾದ್ಯಂತ ಕಾರ್ಮಿಕರ ವಿಶ್ವಾಸಗಳಿಸಿದ್ದಾರೆ.ಕಾರ್ಮಿಕರ ಹಕ್ಕುಗಳ ರಕ್ಷಣೆ, ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ ಹಾಗೂ ಕಾರ್ಮಿಕ ಸ್ನೇಹಿ ಆಡಳಿತ ನೀಡುವಲ್ಲಿ ಶ್ರೀ ಸಂತೋಷ ಲಾಡ್ ಅವರು



ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ನಾಯಕತ್ವದಲ್ಲಿ ಕಾರ್ಮಿಕ ಇಲಾಖೆಯು ಜನಪರವಾಗಿ ಕಾರ್ಯನಿರ್ವಹಿಸುತ್ತಿದ್ದು,ಕಾರ್ಮಿಕರ ಸಮಸ್ಯೆಗಳಿಗೆ ಶೀಘ್ರ ಪರಿಹಾರ ದೊರೆಯುತ್ತಿದೆ. ಆದ್ದರಿಂದ ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಪಕ್ಷದ ಹೈಕಮಾಂಡ್ ಅವರು ಶ್ರೀ ಸಂತೋಷ ಲಾಡ್ ಅವರಿಗೆ ಕಾರ್ಮಿಕ ಖಾತೆಯನ್ನು ಮುಂದುವರಿಸಿ, ರಾಜ್ಯದ ಕಾರ್ಮಿಕರ ಸೇವೆ ಮಾಡಲು ಮತ್ತಷ್ಟು ಅವಕಾಶ ಕಲ್ಪಿಸಬೇಕು ಎಂದು ವಿನಮ್ರವಾಗಿ ಮನವಿ ಮಾಡಿಕೊಳ್ಳುತ್ತೇನೆ ಎಂದು ಕೆಪಿಸಿಸಿ ಪದವೀಧರ ವಿಭಾಗ ಉಪಾಧ್ಯಕ್ಷ ಮರಿಲಿಂಗ ಸಾವೂರ ತಿಳಿಸಿದ್ದಾರೆ.

# ಸಾಮಾಜಿಕ ಪರಿಶೋಧನೆಯಲ್ಲಿ ಗ್ರಾಮಸ್ಥರ ಸಹಭಾಗಿತ್ವ ಅಗತ್ಯ: ಮಲ್ಲಪ್ಪ

• ಮಲ್ಲಮ್ಮ ನುಡಿ ವಾರ್ತೆ ಶಹಾಪುರ

ಮಹಾತ್ಮಗಾಂಧಿ ನರೇಗಾ ಯೋಜನೆ ಸೇರಿ ಸರಕಾರದವಿವಿಧ ಅಭಿವೃದ್ಧಿ ಯೋಜನೆ ಹಾಗೂ ಕಲ್ಯಾಣ ಕಾರ್ಯಕ್ರಮಗಳು ಜನರಿಗೆ ತಲುಪುವ ರೀತಿಯಲ್ಲಿ ಪರಿಶೀಲಿಸಲು ಹಾಗೂ ಪಾರದರ್ಶಕತೆ ಕಾಪಾಡಲು ನಡೆಸುವ ಸಾಮಾಜಿಕ ಪರಿಶೋಧನೆಯಲ್ಲಿ ಗ್ರಾಮಸ್ಥರ ಸಹಭಾಗಿತ್ವ ಅಗತ್ಯವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಇಲಾಖೆಯ ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದ ನಿರ್ದೇಶಕರಾದ ಸಿಕೆ ಮಲ್ಲಪ್ಪ ಅವರು ಹೇಳಿದರು. ಅವರು ಜೂನ್04ರಂದು ಸಾಮಾಜಿಕ ಪರಿಶೋಧನ ಕಾರ್ಯದ ಮೇಲ್ವಿಚಾರಣೆ ಮಾಡಲು ಶಹಾಪುರ ತಾಲೂಕಿನ ಮುಡಬೂಳ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ, ನರೇಗಾ ಯೋಜನೆ, ರಾಜ್ಯ ಹಣಕಾಸು ಆಯೋಗ ಮತ್ತು 15ನೇ ಹಣಕಾಸು ಆಯೋಗದ ಅನುದಾನದಡಿ ಕೈಗೊಂಡ ವಿವಿಧ ಅಭಿವೃದ್ಧಿ ಕಾಮಗಾರಿಗಳ ನಿರ್ವಹಣೆಯ ಕಡತ ಹಾಗೂ ಸೆವನ್ ರಜಿಸ್ಟರ್ ಪರಿಶೀಲಿಸಿ, ಮಾತನಾಡಿದರು. ಗ್ರಾಮ ಪಂಚಾಯಿತಿ ಕಚೇರಿಯಲ್ಲಿ 2024–25 ಮತ್ತು 2025–26ನೇ ಸಾಲಿನಲ್ಲಿ ಪೂರ್ಣಗೊಂಡ ಕಾಮಗಾರಿಗಳ ದಾಖಲೆಗಳನ್ನು ಪರಿಶೀಲಿಸಿ ಪಾರದರ್ಶಕತೆ ಮತ್ತು ಗುಣಮಟ್ಟದ ಬಗ್ಗೆ ಗಮನ ಹರಿಸಿದ ಅವರು ಯೋಜನೆಯ ಅನುಷ್ಠಾನದ ಬಳಿಕ ಸಾಮಾಜಿಕ ಪರಿಶೋಧನೆ ನಡೆಸುವಾಗ ಸಾರ್ವಜನಿಕರಿಗೆ ಯೋಜನೆಯ ಬಗ್ಗೆ ಮಾಹಿತಿ ದೊರೆಯುತ್ತದೆ. ಭ್ರಷ್ಟಾಚಾರ ಮತ್ತು ದುರ್ಬಳಕೆ ತಡೆಗಟ್ಟುತ್ತದೆ. ಕಾಮಗಾರಿ ಗುಣಮಟ್ಟದ ಸುಧಾರಣೆಗೆ




ಸಹಾಯವಾಗುತ್ತದೆ ಅಲ್ಲದೇ ಜನರಲ್ಲಿ ವಿಶ್ವಾಸ ಹೆಚ್ಚುತ್ತದೆ ಎಂದು ತಿಳಿಸಿದರು. ಮಹಾತ್ಮಗಾಂಧಿ ನರೇಗಾದಡಿ ನಿರ್ವಹಿಸಿದ ಕಾಮಗಾರಿಗಳ ಕಡತದಲ್ಲಿನ ಮಸ್ಟರ್ ರೋಲ್, ಅಳತೆ ಪುಸ್ತಕ, ಕಾಮಗಾರಿ ನಾಮಫಲಕ, ಜಿಯೋ ಟ್ಯಾಗ್ ಫೋಟೋಗಳು, ಕೂಲಿ ಪಾವತಿ ವಿವರ, ಕಾಮಗಾರಿಗಳ ಆಡಳಿತಾತ್ಮಕ ಅನುಮೋದನೆ, ತಾಂತ್ರಿಕ ಅನುಮೋದನೆ, ವೆಚ್ಚದ ವಿವರ ಮತ್ತು ಕಾಮಗಾರಿ ಪ್ರಗತಿ ದಾಖಲೆ ಪರಿಶೀಲಿಸಿದರು. ರಾಜ್ಯ ಹಣಕಾಸು ಆಯೋಗದಡಿ ನಿರ್ವಹಿಸಿದ ರಸ್ತೆ, ಚರಂಡಿ ನಿರ್ಮಾಣಕ್ಕೆ ಖರ್ಚಾದ ಅನುದಾನದ ಬಳಕೆ ಹಾಗೂ ಗ್ರಾಮ ಪಂಚಾಯಿತಿ 15ನೇ ಹಣಕಾಸು ಅನುದಾನದಡಿ ನಿರ್ವಹಿಸಿದ ಕುಡಿಯುವ ನೀರು, ನೈರ್ಮಲ್ಯ, ಸಿಸಿ ಕ್ಯಾಮೆರಾ ಅಳವಡಿಕೆ ಕಾಮಗಾರಿಗಳ ದಾಖಲೆ ಪರಿಶೀಲಿಸಿ, ಹಿಂದಿನ ಸಾಮಾಜಿಕ ಪರಿಶೋಧನೆಯಲ್ಲಿ ಎತ್ತಲಾದ ಆಕ್ಷೇಪಣೆ, ವಸೂಲಾತಿಗಳಿಗೆ ನೀಡಿದ ಸ್ಪಷ್ಟನೆ ಮತ್ತು ಕೈಗೊಂಡ ಕ್ರಮದ ಬಗ್ಗೆ ಚರ್ಚಿಸಿದರು. ಪರಿಶೀಲನೆ ಬಳಿಕ ಮಾತನಾಡಿದ ಅವರು ಸಾಮಾಜಿಕ ಪರಿಶೋಧನೆಯ ಮುಖ್ಯ ಉದ್ದೇಶ ಸಾರ್ವಜನಿಕ ಹಣದ ಸರಿಯಾದ ಬಳಕೆಯಾಗಿದೆಯೇ ಎಂಬುದನ್ನು ಖಚಿತಪಡಿಸುವುದು.ಎಲ್ಲಾ ದಾಖಲೆಗಳು ತಂತ್ರಾಂಶದಲ್ಲಿ ನಮೂದಾಗಿ, ಸ್ಥಳದಲ್ಲೂ ಲಭ್ಯವಿರಬೇಕು. ನಕಲಿ ಮಸ್ಟರ್ ರೋಲ್, ಕಳಪೆ ಕಾಮಗಾರಿ ಕಂಡು ಬಂದರೆ ಸಂಬಂಧಪಟ್ಟವರವಿರುದ್ಧಕ್ರಮ ಅನಿವಾರ್ಯ ಎಂದು ತಿಳಿಸಿದರು. ಮುಡಬೂಳ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ನರೇಗಾ, ರಾಜ್ಯ ಹಣಕಾಸು ಅನುದಾನ ಹಾಗೂ 15ನೇ ಹಣಕಾಸು ಅನುದಾನದಲ್ಲಿ ನಿರ್ವಹಿಸಿದ ಈ ಎಲ್ಲಾ ಕಾಮಗಾರಿಗಳ ಗುಣಮಟ್ಟ ಮತ್ತು ಹಣಕಾಸು ನಿರ್ವಹಣೆ ತೃಪ್ತಿಕರವಾಗಿದ್ದು, ಕೆಲವು ಕಡತಗಳಲ್ಲಿ ಅಳತೆ ಪುಸ್ತಕದ ನಮೂದು ಮತ್ತು ಫೋಟೋಗಳ ನಡುವೆ ಸಣ್ಣ ವ್ಯತ್ಯಾಸ ಕಂಡು ಬಂದಿದ್ದು, ಸರಿಪಡಿಸುವಂತೆ ತಾಂತ್ರಿಕ ಸಹಾಯಕ ಮತ್ತು ಪಿಡಿಒ ಅವರಿಗೆ ಸೂಚಿಸಿದರು. ಸಾರ್ವಜನಿಕ ಮಾಹಿತಿ ಫಲಕವನ್ನು ಎಲ್ಲಾ ಕಾಮಗಾರಿ ಸ್ಥಳದಲ್ಲೂ ಕಡ್ಡಾಯವಾಗಿ ಅಳವಡಿಸಬೇಕು ಎಂದು ಹೇಳಿದರು. ವೇಳೆ ಶಹಾಪುರ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಶ್ರೀಮತಿ ಅಕ್ಕನಾಗಮ್ಮ, ಗ್ರಾಮ ಪಂಚಾಯಿತಿ ಪಿಡಿಒ ಅಜೀತಕುಮಾರ, ತಾಂತ್ರಿಕ ಸಂಯೋಜಕ ವೆಂಕಟರಡ್ಡಿ, ಯಾದಗಿರಿ ಜಿಲ್ಲಾ ಪಂಚಾಯಿತಿ ಸಾಮಾಜಿಕ ಪರಿಶೋಧನ ಸಂಯೋಜಕಿ ಸುರೇಖಾ, ತಾಲೂಕ ಸಾಮಾಜಿಕ ಪರಿಶೋಧನ ಸಂಯೋಕ ವೆಂಕಟೇಶ ಕುಲ್ಕರ್ಣಿ, ತಾಂತ್ರಿಕ ಸಹಾಯಕರು, ಸಾಮಾಜಿಕ ಪರಿಶೋಧನಾ ತಂಡದ ಸದಸ್ಯರು, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಗ್ರಾಮಸ್ಥರು ಇದ್ದರು.

# ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಪ್ರೇಮಿ ಪ್ಯಾಟಿ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಸುರಪುರ

ತಾಲ್ಲೂಕಿನ ಪೇಟ ಅಮ್ಮಾಪುರ ಗ್ರಾಮದಲ್ಲಿ ವಿಶ್ವಪರಿಸರ ದಿನಾಚರಣೆಯ ಅಂಗವಾಗಿ ಪರಿಸರ ಸಂರಕ್ಷಣೆಯಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ಅನಕ್ಷರಸ್ಥ ಪರಿಸರ ಪ್ರೇಮಿ ಶ್ರೀ ದೇವೀಂದ್ರಪ್ಪ ಪ್ಯಾಟಿ ಅವರನ್ನು ಸ್ನೇಹಿತ ಬಳಗದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.ಪೇಟ ಅಮ್ಮಾಪುರ ಗ್ರಾಮದಲ್ಲಿ ನಾರಾಯಣಪ್ಪ ದೇವಸ್ಥಾನ, ಹಳೆ ಪಂಚಾಯತ್ ಆವರಣ, ಶ್ರೀ ಕೃಷ್ಣ ದೇವಸ್ಥಾನ, ಮಸೀದಿ ಆವರಣ ಹಾಗೂ ಬಸ್ ನಿಲ್ದಾಣದ ಸಮೀಪವಿರುವ ಮಾಳಿಂಗರಾಯ ಮುತ್ಯಾನ ಪೌಳಿ ಸೇರಿದಂತೆ ಅನೇಕ ಸಾರ್ವಜನಿಕ ಸ್ಥಳಗಳಿವೆ. ಇವುಗಳಲ್ಲಿ ಮಾಳಿಂಗರಾಯ ಮುತ್ಯಾನ ಪೌಳಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮಸ್ಥರು ಹಾಗೂ ಹೊರ ಊರಿನ ಜನರು ಸೇರಿಕೊಳ್ಳುತ್ತಾರೆ. ಆದರೆ ಈ ಸ್ಥಳದಲ್ಲಿ ನೆರಳು ನೀಡುವ ಗಿಡಮರಗಳ



ಕೊರತೆ ಇತ್ತು.ಇದನ್ನು ಗಮನಿಸಿದ ಶ್ರೀ ದೇವೀಂದ್ರಪ್ಪ ಪ್ಯಾಟಿ ಅವರು ಜನರಿಗೆ ನೆರಳು ಒದಗಿಸುವ ಉದ್ದೇಶದಿಂದ ತಮ್ಮ ಸಹಪಾಠಿಗಳಾದ ಹನುಮಂತ ಹದ್ಗಲ, ಹನುಮಂತ ಟಣಕೆದಾರ ಹಾಗೂ ಇತರರ ಸಹಕಾರದೊಂದಿಗೆ ಪೌಳಿಯ ಒಳಗೆ ಮತ್ತು ಹೊರಗೆ ಅನೇಕ ಗಿಡಗಳನ್ನು ನೆಟ್ಟು, ಅವುಗಳಿಗೆ ನೀರುಣಿಸುವುದು, ಗೊಬ್ಬರ ಹಾಕುವುದು ಹಾಗೂ ಅವುಗಳ ಪೋಷಣೆಯ ಕಾರ್ಯವನ್ನು ಹಲವು ವರ್ಷಗಳಿಂದ ನಿರಂತರವಾಗಿ ನಡೆಸಿಕೊಂಡು ಬಂದಿದ್ದಾರೆ. ಅವರ ಶ್ರಮದ ಫಲವಾಗಿ ಇಂದು ಅನೇಕ ಮರಗಳು ಬೆಳೆದು ಜನರಿಗೆ ನೆರಳು ನೀಡುತ್ತಿದ್ದು, ಪ್ರಯಾಣಿಕರು ಹಾಗೂ ಗ್ರಾಮಸ್ಥರಿಗೆ ವಿಶ್ರಾಂತಿಯ ತಾಣವಾಗಿವೆ."ಕಾಡು ಬೆಳೆಸಿ ನಾಡು ಉಳಿಸಿ" ಹಾಗೂ "ಹಸಿರೇ ಉಸಿರು" ಎಂಬ ಸಂದೇಶವನ್ನು ಕಾರ್ಯರೂಪಕ್ಕೆ ತಂದಿರುವ ದೇವೀಂದ್ರಪ್ಪ ಪ್ಯಾಟಿ ಅವರಂತಹ ಪರಿಸರ ಸ್ನೇಹಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಅಗತ್ಯವಾಗಿದೆ. ಇಂದಿನ ಯುವ ಪೀಳಿಗೆಯೂ ಪರಿಸರ ಸಂರಕ್ಷಣೆಯ ಮಹತ್ವವನ್ನು ಅರಿತು ಹೆಚ್ಚಿನ ಗಿಡಮರಗಳನ್ನು ಬೆಳೆಸುವತ್ತ ಗಮನ ಹರಿಸಬೇಕೆಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ

ವ್ಯಕ್ತವಾಯಿತು.ಸನ್ಮಾನ ಕಾರ್ಯಕ್ರಮದಲ್ಲಿ ಪರಮಪೂಜ್ಯ ಹಣಮಂತ ಶರಣರು, ಭೀಮಾಶಂಕರ, ಹಣಮಂತ ಪಸಲಾದಿ, ಸಂಗಯ್ಯ ಗೋಗಿ, ತಮ್ಮಣ್ಣ ಪ್ಯಾಟಿ, ಚನ್ನಪ್ಪ ಹಿರೇಮನಿ, ಚಂದ್ರಶೇಖರ ಕೋಳೂರು, ಮಲ್ಲಿಕಾರ್ಜುನ ಭಜಂತ್ರಿ, ಎಂ.ಡಿ. ಸಲೀಂಸಾಬ್ ಮಕ್ತಪುರ, ಬಸವಣ್ಣಪ್ಪ ಹಂಗರಗಿ, ತಿರುಪತಿ ಟಣಕೆದಾರ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಮಾಜಸೇವೆಯ ಮೂಲಕ ಜನ್ಮದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ. 6: ಹುಟ್ಟುಹಬ್ಬವನ್ನು ಕೇವಲ ಸಂಭ್ರಮಾಚರಣೆಗೆ ಸೀಮಿತಗೊಳಿಸದೆ, ಸಮಾಜಮುಖಿ ಕಾರ್ಯಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸುವ ಪರಂಪರೆಯನ್ನು ಮುಂದುವರಿಸಿಕೊಂಡು ಬಂದಿರುವ ಯುವ ಮುಖಂಡ ಹಾಗೂ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಸದಸ್ಯ ಮೌನೇಶ್ ಶೆಟ್ಟಿಕೇರಾ ಅವರು ತಮ್ಮ 29ನೇ ಜನ್ಮದಿನವನ್ನು ವಿಶಿಷ್ಟವಾಗಿ ಆಚರಿಸಿಕೊಂಡರು.ನಗರದ ಹೊಸ ಬಸ್ ನಿಲ್ದಾಣದ ಸಮೀಪ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಆಟೋ ಚಾಲಕರಿಗೆ ಬಟ್ಟೆಗಳನ್ನು ವಿತರಿಸುವುದರ ಜೊತೆಗೆ ಅನ್ನಸಂತರ್ಪಣೆ ನಡೆಸಿ ಮಾನವೀಯತೆ ಮತ್ತು ಸಾಮಾಜಿಕ ಕಾಳಜಿಯನ್ನು ಮೆರೆದರು. ಸಮಾಜದ ಶ್ರಮಜೀವಿಗಳಾದ ಆಟೋ ಚಾಲಕರನ್ನು ಗೌರವಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾದ ಈ ಕಾರ್ಯಕ್ರಮ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.ಪ್ರತಿ ವರ್ಷವೂ ತಮ್ಮ ಹುಟ್ಟುಹಬ್ಬವನ್ನು ಸಮಾಜಮುಖಿ ಚಟುವಟಿಕೆಗಳ ಮೂಲಕ ಆಚರಿಸುತ್ತಾ ಬಂದಿರುವ ಮೌನೇಶೆಟ್ಟಿ ಅವರ ಈ ಸೇವಾ



ಮನೋಭಾವವನ್ನು ಶ್ಲಾಘಿಸಿದ ಸಮಾಜ ಮುಖಂಡ ಶಿವುಕುಮಾರ ತಳವಾರ ಅವರು, ಯುವಕರು ಇಂತಹ ಸಾರ್ಥಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು ಎಂದು ಅಭಿಪ್ರಾಯಪಟ್ಟರು.ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಪೂಜಾರಿ, ಶಿವಪುತ್ರ ಜವಳಿ, ಭೀಮರಾಯ ಬಡಿಗೆ, ಬಸವರಾಜ್ ಗುಡಿಮನಿ, ಚಂದ್ರಶೇಖರ ಗುತ್ತೇದಾರ್, ರಾಮಣ್ಣ ಸಾದ್ಯಾಪುರ, ಅಲ್ಲಾ ಪಟೇಲ್, ಗುರು ಬಾಣತಿಹಾಳ, ಮಲ್ಲಣ್ಣಗೌಡ ತಿಪ್ಪನಹಳ್ಳಿ, ಈರಣ್ಣ ಶಕಾಪುರ, ಶಾಂತಪ್ಪ ಅಣಿಗೇರ ಹಾಗೂ ನಗರಸಭೆ ಸದಸ್ಯ ಹನುಮಂತ್ರಾಯ, ಮಲ್ಲಿಕಾರ್ಜುನ್ ಅರಬೋಳ ಸೇರಿದಂತೆ ಅನೇಕ ಗಣ್ಯರು, ಮುಖಂಡರು, ಸ್ನೇಹಿತರು ಮತ್ತು ಸಾರ್ವಜನಿಕರು ಭಾಗವಹಿಸಿ ಮೌನೇಶ್ ಶೆಟ್ಟಿಕೇರಾ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ಕೋರಿದರು.ಸಮಾಜದ ವಿವಿಧ ವರ್ಗಗಳ ಜನರೊಂದಿಗೆ ಬೆರೆತು, ಸೇವೆಯ ಮೂಲಕ ಸಂಭ್ರಮವನ್ನು ಹಂಚಿಕೊಳ್ಳುವ ಇಂತಹ ಕಾರ್ಯಕ್ರಮಗಳು ಸಾಮಾಜಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುತ್ತವೆ ಎಂಬ ಅಭಿಪ್ರಾಯ ಕಾರ್ಯಕ್ರಮದಲ್ಲಿ ವ್ಯಕ್ತವಾಯಿತು.

# ವಿಶೇಷ ಚೇತನ ಮಕ್ಕಳಿಗೆ ಸಾಧನ ಸಲಕರಣೆ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ವಿಶೇಷ ಚೇತನ ಮಕ್ಕಳಿಗೆ ಅಲಿಂಕೋ ಸಂಸ್ಥೆ ವತಿಯಿಂದ ಸಾಧನ ಸಲಕರಣೆ ವಿತರಣೆಯನ್ನು ನಗರದ ಬಿ ಆರ್ ಸಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು. ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಈರಪ್ಪ ಕನ್ನೆಳ್ಳಿ, ಕ್ಷೇತ್ರ ಸಮನ್ವಯಾಧಿಕಾರಿಗಳಾದ ಜಗದೀಶ್ ಸಜ್ಜನ್,ಶಿಕ್ಷಣ ಸಂಯೋಜಕರಾದ ರವೀಂದ್ರ, ದೇವಿಂದ್ರಪ್ಪ ಈಟೆ, ಚಾಂದ್ ಸಾಬ್,ಬಿ ಆರ್ ಟಿ ಪಾಕರಡ್ಡಿ, ಶಿಕ್ಷಕರ ಸಂಘದ ಕಾರ್ಯದರ್ಶಿ ಬಶೀರ್ ಅಹ್ಮದ್,ಸಿಆರ್ ಪಿ ಮಲ್ಲಪ್ಪ ಮ್ಯಾಗೇರಿ,ಬಿಐಇಆರ್ ಟಿ ವಿನೋದ್ ಕುಮಾರ್,ಮಹೆಬೂಬ್,ಮರಿಲಿಂಗಪ್ಪ,ಮಲ್ಲಿಕಾರ್ಜುನ, ಎಪಿಡಿ ಸಂಸ್ಥೆಯ ರಮೇಶ್ ಮಾನೆ ಇದ್ದರು. ಇಲ್ಲಿ ಒಟ್ಟು 69 ಮಕ್ಕಳಿಗೆ ಸಾಧನ ಸಲಕರಣೆ ವಿತರಣೆ ಮಾಡಲಾಯಿತು. ಟ್ರೈಸೈಕಲ್ 6, ವ್ಹೀಲ್ ಚೇರ್ 6, ಕಿಟ್ 39, ಹಿಯರಿಂಗ್ ಮಶೀನ್ 13, ಕ್ರತಕ ಕಾಲು 5 ನೀಡಿದರು.

# ಬೀದಿಬದಿ ವ್ಯಾಪಾರಿಗಳಿಗೆ ಕಿರು ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕುಕನೂರು ಪಟ್ಟಣ ಪಂಚಾಯತ್ ವತಿಯಿಂದ ಪಿಎಂ ಸ್ವನಿಧಿ ಯೋಜನೆಯ ಲೋಕ ಕಲ್ಯಾಣ ಮೇಳದಡಿ ಬೀದಿಬದಿ ವ್ಯಾಪಾರಿಗಳಿಗೆ ಕಿರು ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಹಾತ್ವಕಾಂಕ್ಷಿ ಯೋಜನೆಯಾದ ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮನಿರ್ಭರ್ ನಿಧಿ ಯೋಜನೆಯಡಿಯಲ್ಲಿ ನಗರದ ಬೀದಿಬದಿ ವ್ಯಾಪಾರಿಗಳಿಗೆ ಕಿರು ಸಾಲ ಸೌಲಭ್ಯ ಹಾಗೂ ಸಾಮಾಜಿಕ ಭದ್ರತೆಗಳ ಯೋಜನೆಗಳನ್ನು ಕಲ್ಪಿಸುವುದಕ್ಕಾಗಿ ನಗರ ಮಟ್ಟದಲ್ಲಿ ಬ್ಯಾಂಕ್‌ಗಳ ಸಂಯೋಗದೊಂದಿಗೆ ಲೋಕ ಕಲ್ಯಾಣ ಮೇಳಗಳನ್ನು ಜೂನ್ 1 ರಿಂದ ಜೂ. 30ರ ವರೆಗೆ ಒಂದು ತಿಂಗಳ ಕಾಲ ಆಯೋಜಿಸುವಂತೆ ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಮಂತ್ರಾಲಯ, ಭಾರತ ಸರ್ಕಾರ ನವದೆಹಲಿ ಮತ್ತು ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ ಅಭಿಯಾನ ಬೆಂಗಳೂರು ರವರು ಸೂಚಿಸಿರುತ್ತಾರೆ.ಅದರಂತೆ ಜೂ. 1 ರಿಂದ 30ರ ವರೆಗೆ ಕುಕನೂರು ಪಟ್ಟಣದ ಬೀದಿಬದಿ ವ್ಯಾಪಾರಿಗಳು ಕುಕನೂರು ಪಟ್ಟಣ ಪಂಚಾಯತ್ ಕಾರ್ಯಾಲಯಕ್ಕೆ ಭೇಟಿ ನೀಡಿ, ಪಿ.ಎಮ್ ಸ್ವನಿಧಿ ಯೋಜನೆಯಡಿ ರೂ. 15,000 ಗಳು, ರೂ. 25,000 ಗಳು ಮತ್ತು ರೂ. 50,000 ಗಳ ಕಿರು ಸಾಲ ಸೌಲಭ್ಯಕ್ಕಾಗಿ ಅರ್ಜಿಯನ್ನು ಸಲ್ಲಿಸಲು ನಗರ ಸ್ಥಳೀಯ ಸಂಸ್ಥೆಯ ಡೇ ನಲ್ಮ್ ವಿಭಾಗವನ್ನು ಸಂಪಕಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಕುಕನೂರು ಪ.ಪಂ ಡೇ–ನಲ್ಮ್ ವಿಭಾಗದ ಸಿಬ್ಬಂದಿಗಳನ್ನು ಕಛೇರಿ ಅವಧಿಯಲ್ಲಿ ಸಂಪರ್ಕಿಸುವಂತೆ ಕುಕನೂರು ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಗೆ ಬೀಜ ಗೊಬ್ಬರ ಕೊರತೆಯಾಗದಂತೆ ನಿಗಾವಹಿಸಿ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

: ರೈತರು ಬಿತ್ತನೆ ಕಾರ್ಯದಲ್ಲಿ ತೊಡಗಿದ್ದಾರೆ ಅವರಿಗೆ ಸರಿಯಾಗಿ ಬೀಜ ಹಾಗು ರಸಗೊಬ್ಬರ ವಿತರಣೆಯಾಗಬೇಕು,ರೈತರಿಗೆ ಬಿತ್ತನೆ ಕಾರ್ಯದಲ್ಲಿ ತೊಂದರೆಯಾಗದಂತೆ ನಿಗಾವಹಿಸಬೇಕು ಎಂದು ತಾಲೂಕು ಪಂಚಾಯತಿ ಆಡಳಿತಾಧಿಕಾರಿ ಟಿ ಕೃಷ್ಣಪ್ಪ ಅವರು ಜೂ.5 ರಂದು ತಾಲೂಕು ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಅದ್ಯಕ್ಷತೆವಹಿಸಿ ಮಾತನಾಡಿದ ಅವರು ವಿವಿಧ ಇಲಾಖೆಗಳಿಂದ ಬಂದ ಪ್ರಗತಿವರದಿಗಳ ಬಗ್ಗೆ ಮಾತನಾಡುತ್ತಾ ಬರಿ ಕಾಟಚಾರಕ್ಕೆ ಮಾತ್ರ ವರದಿಯನ್ನು ಕೊಡಬೇಡಿ ಉತ್ತಮ ಪ್ರಗತಿಯಾಗಬೇಕು ಎಂದು ಸಲಹೆ ನೀಡಿದರು. ಈ ವೇಳೆ ತೋಟಗಾರಿಕೆ ಇಲಾಖೆ, ಕೃಷಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಶಿಶು ಅಭಿವೃದ್ಧಿ ಇಲಾಖೆ, ಅರಣ್ಯ ಇಲಾಖೆ, ಪಶು ಸಂಗೋಪನೆ ಇಲಾಖೆ ಸೇರಿದಂತೆ ಇತರ ಇಲಾಖೆಯ ಅಧಿಕಾರಿಗಳು ಪಗ್ರತಿ ವರದಿಗಳನ್ನು ಸಲ್ಲಿಸಿ ಮಾತನಾಡಿದರು.

# ಸಲೀಂ ಅಹ್ಮದ್ ಅವರಿಗೆ ಸಚಿವ ಸ್ಥಾನ ಕೊಡಿ



• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಜನನಾಯಕರದ ಕಾಂಗ್ರೆಸ್ ಪಕ್ಷದ ಮೊಟ್ಟ ಮೊದಲನೇದಾಗಿ ಕರ್ನಾಟಕರಾಜ್ಯಮುಖ್ಯಮಂತ್ರಿಗಳಾದ ಕೆಪಿಸಿಸಿ ಅಧ್ಯಕ್ಷರಾಗಿ ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತವನ್ನು ತಂದಿರ್ತಕಂತ ಡಿಕೆ ಶಿವಕುಮಾರ್ ಇವರಿಗೆ ಶಾಮೀದ್ ಮನಿಯರ್ ಅವರು ಮುಸ್ಲಿಂ ಸಮಾಜದವರಿಂದ ಸ್ವಾಗತ ಕೋರಿದರು.

ಬಳಿಕ ಶಾಮೀದ್ ಮನಿಯರ್ ಮಾತನಾಡಿ,..

ಉತ್ತರ ಕರ್ನಾಟಕದ ಪ್ರಭಾವಿ ಹಾಗೂ ಜನನಾಯಕ

ಸಲೀಂ ಅಹ್ಮದ್ ರವರಿಗೆ ಸಚಿವ ಸ್ಥಾನ ಪಕ್ಷದ ಸಂಘಟನೆಗಾಗಿ, ಅಲ್ಪಸಂಖ್ಯಾತರ ಧ್ವನಿಯಾಗಿ, ಸಮಾಜದ ಅಭಿವೃದ್ಧಿಗಾಗಿ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಸಲೀಂ ಅಹ್ಮದ್ ರವರ ಸೇವೆಯನ್ನು ಪರಿಗಣಿಸಿ ಅವರಿಗೆ ಸಚಿವ ಸ್ಥಾನ ನೀಡುವಂತೆ ನಮ್ಮ ಪಕ್ಷದ ಉನ್ನತ ನಾಯಕರಿಗೆ ಗಂಗಾವತಿ ಸಮಸ್ತ ಮುಸ್ಲಿಂ ಬಂಧುಗಳ ಪರವಾಗಿ ಬಲವಾದ ಒತ್ತಾಯ ಮಾಡಲು.ನಮ್ಮ ನಾಯಕ ನಮ್ಮ ಹೆಮ್ಮೆ ನಮ್ಮ ಒತ್ತಾಯ ಘೋಷಣೆಯ ಜೊತೆಗೆ ಸಲೀಂ ಅಹ್ಮದ್ ರವರಿಗೆ ಸಚಿವ ಸ್ಥಾನ ದೊರಕಲಿಎಂದರು ಗಂಗಾವತಿ ಸಮಸ್ತ ಮುಸ್ಲಿಂ ಸಮಾಜ ಬಾಂಧವರು ಘೋಷಣೆಯಲ್ಲಿ ಪಾಲ್ಗೊಂಡು ಡಿಕೆ ಶಿವಕುಮಾರ್ ಸಂಪುಟದಲ್ಲಿ ನಮ್ಮ ಮುಸ್ಲಿಂ ಸಮಾಜದ ಉತ್ತರ ಕರ್ನಾಟಕದಲ್ಲಿ ಹಾವೇರಿಯಿಂದ ಬೀದರ್ವರೆಗೂ ಮುಸ್ಲಿಂ ಸಮಾಜದವರು ಇದುವರೆಗೂ ಸಚಿವ ಸ್ಥಾನಕ್ಕೆ ಆಗಿರುವುದಿಲ್ಲ ಕಾರಣ ತಾವುಗಳು ಸಲೀಂ ಅಹಮ್ಮದ್ ಅವರು ಕಾಂಗ್ರೆಸ್ ಪಕ್ಷದಲ್ಲಿ ಸತತ 40 ವರ್ಷಗಳಿಂದ ಸಾಮಾನ್ಯ ಕಾರ್ಯಕರ್ತರಾಗಿ ಹಗಲು ಇರುಳು ಪಕ್ಷಕ್ಕಾಗಿ ದುಡಿದಿರುತ್ತಾರೆ ಅವರಿಗೆ ಸಂಪುಟದಲ್ಲಿ ತಕ್ಷಣವೇ ಸಚಿವ ಸ್ಥಾನ ನೀಡಬೇಕೆಂದು ಗಂಗಾವತಿಯ ಶಾಮೀದ್ ಮನಿಯರ್ ಹಾಗೂ ಸಮಸ್ತ ಮುಸ್ಲಿಂ ಸಮಾಜದವರು ಒತ್ತಾಯಿಸಿ ಹಾಗೂ ಹೈಕಮಾಂಡ್ ಅವರು ಪರಿಗಣನಿಗೆ ತೆಗೆದುಕೊಳ್ಳಬೇಕು ಹಾವೇರಿಯಿಂದ ಬೀದರ್ವರೆಗೂ 9 ಕ್ಕಿಂತ ಹೆಚ್ಚು ಶಾಸಕರು ಹೊಂದಿರ್ತಕಂತ ಉತ್ತರ ಕರ್ನಾಟಕದ ಭಾಗದಲ್ಲಿ ಸಲೀಂ ಅಹಮದ್ ಅವರಿಗೆ ನೀಡಬೇಕೆಂದು ಗಂಗಾವತಿಯಲ್ಲಿ ಎಲ್ಲಾ ಸಮಾಜದವರು ಯುವಕರು ಸೇರಿ ಹೈಕಮಾಂಡ್ ಅವರಿಗೆ ಶಾಮೀದ್ ಮನಿಯಾರ್ ಆಸಿಫ್ ಮಲ್ಲೇಶಿ ದೇವರಮನೆ ಸೋಮನಾಥ್ ಭಂಡಾರಿ ಆಝುಮ್ ಮಹೆಬೂಬ್ ಸೋಯಬ್ ಒತ್ತಾಯಿಸಿದ್ದಾರೆ.

# ಸಸಿ ನೆಡುವ ಮೂಲಕ ಪರಿಸರ ದಿನಾಚರಣೆ




• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಪರಿಸರ ದಿನಾಚರಣೆಯ ಅಂಗವಾಗಿ ಇಂದು ಜೂನ್–5 ಶನಿವಾರ ಪಂಪಾನಗರ ಸರ್ಕಲ್ ನಲ್ಲಿ ನಮ್ಮ ಸಪ್ತಸ್ವರ ಸಾಂಸ್ಕೃತಿಕ ಕಲಾ ಸಂಘದ ವತಿಯಿಂದ ಸಸಿ ನೆಡುವ ಕಾರ್ಯಕ್ರಮವನ್ನು ಸಂಘದ ಅಧ್ಯಕ್ಷರಾದ ಆರ್. ಕಣ್ಣನ್, ಉಪಾಧ್ಯಕ್ಷರಾದ ತಟ್ಟಿ ಶ್ಯಾಮಣ್ಣ, ಪ್ರಧಾನ ಕಾರ್ಯದರ್ಶಿಗಳಾದ ವಿರೇಶ ಹಿರೇಮಠ ರವರುಗಳ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಸಂಘದ ಅಧ್ಯಕ್ಷರಾದ ಆರ್. ಕಣ್ಣನ್ ಅವರು ಸಸಿ ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ನಾಡನ್ನು ಉಳಿಸಿ, ಕಾಡನ್ನು ಬೆಳೆಸಿ ಹಾಗೂ ಸಾವಿರಾರು ಗಿಡಗಳನ್ನು ನೆಡುವ ಕಾರ್ಯಕ್ರಮವನ್ನು ನಮ್ಮ ಸಂಘದಿಂದ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ನೀರನ್ನು ಮಿತವಾಗಿ ಬಳಸಿ, ಪ್ಲಾಸ್ಟಿಕ್ ನ್ನು ತ್ಯಜಿಸಿ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷರಾದ ಮಲ್ಲಿಕಾರ್ಜುನ ತಟ್ಟಿ, ಖಜಾಂಚಿಯಾದ ವಿರೇಶಪ್ಪ, ಸದಸ್ಯರುಗಳಾದ ಮೌನೇಶ, ಹಾಜಿ ಅಲಿ, ರುಕ್ಮುದ್ದೀನ್, ಪ್ರವೀಣಕುಮಾರ, ಕುರುಗೋಡು ವೆಂಕಟೇಶ್, ಮಾಜಿ ನಗರಸಭೆ ಸದಸ್ಯರಾದ ಹುಸೇನಪೀರ, ಸತ್ಯನಾರಾಯಣ, ವಿರುಪಾಕ್ಷಿ, ಸತ್ಯನಾರಾಯಣ, ವೀರೇಶ್ ಪಪ್ಪಿ, ರಾಮಕೃಷ್ಣ ಸಿ.ಡಿ., ಅಂಬಣ್ಣ, ಮಹಿಳಾ ಸದಸ್ಯರಾದ ವಿಜಯಕ್ಷ್ಮೀ, ಅನನ್ಯ, ಶಮೀನಾ, ಗಾಯಕರಾದ ಸಾವಿತ್ರಿ, ಭಾಗ್ಯಲಕ್ಷ್ಮೀ ಗುಲ್ಬರ್ಗ, ಪರಶುರಾಮ, ಹನುಮಂತಪ್ಪ, ಹನುಮೇಶ ಶಂಬಣ್ಣ ಇನ್ನೂ ಅನೇಕರು ಭಾಗವಹಿಸಿದ್ದರು.

# ಕರ್ನಾಟಕದ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ತಾಲೂಕು ಅದ್ಯಕ್ಷರ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ಕರ್ನಾಟಕಕಾರ್ಯನಿರತಪತ್ರಕರ್ತರಧ್ವನಿಸಂಘನೆಯ ಯಲಬುರ್ಗಾ ತಾಲೂಕು ಅದ್ಯಕ್ಷರನ್ನಾಗಿ ಶಿವಮೂರ್ತಿ ಇಟಗಿ ಇವರನ್ನು ಜಿಲ್ಲಾ ಸಮಿತಿಯವರ ಸಮ್ಮುಖದಲ್ಲಿ ಆಯ್ಕೆಮಾಡಲಾಗಿತು. ಈವೇಳೆಜಿಲ್ಲಾ ಅದ್ಯಕ್ಷ ಸುನೀಲ್ ಕುಮಾರಮಠದ, ಪ್ರದಾನ ಕಾರ್ಯದರ್ಶಿಮುತ್ತು ದೊಡ್ಡಮನಿ,ಸಹಕಾರ್ಯದರ್ಶಿವೀರಯ್ಯವ್ಹಿ.ಹಿರೇಮಠ, ಜಿಲ್ಲಾಸಮಿತಿಯವರಾದ ಮಹೇಶ ಕಲ್ಮಠ, ಸಲಿಂ ಅಮರಾವತಿ ಹಾಗು ಯಲಬುರ್ಗಾ ತಾಲೂಕು ಕಾ.ನಿ.ಪ ಧ್ವನಿ ಸಂಘಟನೆಯ ಸದಸ್ಯರು ಭಾಗವಹಿಸಿದ್ದರು.

# ಡಿ.ಕೆ ಶಿ. ಸಿಎಂ ಆಗಬೇಕೆಂಬ ಸಂಕಲ್ಪ ಈಡೇರಿದೆ : ವೆಂಕಟೇಶ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

'ಡಿ.ಕೆ ಶಿವಕುಮಾರ್ ರವರು ಯಾವುದೇ ಅಡಚಣೆಯಿಲ್ಲದೇ ಯಶಸ್ವಿಯಾಗಿ ರಾಜ್ಯದ ಮುಖ್ಯಮಂತ್ರಿ ಪಟ್ಟಕ್ಕೇರಬೇಕೆಂದು ಮೊದಲಿಗೆ ಪೂಜೆ ಮಾಡಿಸಿ ಸಂಕಲ್ಪ ಮಾಡಿದ್ದ ಡಿ.ಪಿ ಬಿಲ್ಡರ್ಸ್ ಅಂಡ್ ಡೆವೆಲಪರ್ಸ್, ಡಿ.ಪಿ ಪ್ರೈವೇಟ್ ಲಿಮಿಟೆಡ್ ಮತ್ತು ಮಲೆ ಮಹದೇಶ್ವರ ಎಂಟರ್ ಪ್ರೈಸಸ್ ನ ಮಾಲೀಕರು ಹಾಗೂ ಡಿ.ಪಿ ಕರುಣಾ ಆಸರೆ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರು ಹಾಗೂ ಸಮಾಜ ಸೇವಕರಾದ ಡಿ.ಪಿ ವೆಂಕಟೇಶ್ ರವರ ಪೂಜೆಯ ಶಕ್ತಿ ಫಲಿಸಿದ್ದು ಅವರ ಬಹುದಿನಗಳ ಆಸೆ ನೆರವೇರಿದ್ದು ಅವರಲ್ಲಿ ಸಂತೋಷ ಮನೆ ಮಾಡಿದೆ. ಡಿ.ಕೆ ಶಿವಕುಮಾರ್ ರವರು ಮುಖ್ಯಮಂತ್ರಿ ಪಟ್ಟಕ್ಕೇರಬೇಕೆಂದು ಮೊದಲು ಪೂಜೆ ಮಾಡಿಸಿದ್ದು ಡಿ.ಪಿ ವೆಂಕಟೇಶ್ ರವರು ಎಂಬುದು ವಿಶೇಷ. ನಂತರದ ದಿನಗಳಲ್ಲಿ ಇವರನ್ನು ನೋಡಿ ಉಳಿದ ಕಾರ್ಯಕರ್ತರು, ಅಭಿಮಾನಿಗಳು ಪೂಜೆ ಸಲ್ಲಿಸಿದ್ದರು.ಕಳೆದ ವರ್ಷ ಡಿ.ಪಿ ವೆಂಕಟೇಶ್ ರವರು ಮಲೆ ಮಹದೇಶ್ವರ ಬೆಟ್ಟದಲ್ಲಿ ಮೊದಲನೇ ಕಾರ್ತಿಕದಿಂದ ಹಿಡಿದು ಕೊನೇ ಕಾರ್ತಿಕ ಮಾಸದವರೆಗೂ ನಾಲ್ಕು ಕಾರ್ತಿಕ ಮಾಸ ಹಾಗೂ ನಾಲ್ಕು ರುದ್ರಾಭಿಷೇಕ ಮಾಡಿಸುವ ಮೂಲಕ ವಿಶೇಷ ಪೂಜೆ ಸಲ್ಲಿಸಿ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಆಗಬೇಕೆಂದು ವಿಶೇಷ ಪೂಜೆ ಸಲ್ಲಿಸಿದ್ದರು. ಡಿ.ಪಿ ವೆಂಕಟೇಶ್ ರವರ ನೇತೃತ್ವದಲ್ಲಿ ನಡೆದ ಈ ಪೂಜೆಯಲ್ಲಿ ಮಲೆ ಮಹದೇಶ್ವರ ಸ್ವಾಮಿ ದೇವಸ್ಥಾನದ ಎಲ್ಲಾ ಅರ್ಚಕರು ವಿಶೇಷ ಪೂಜೆ ಮಾಡುವ ಮೂಲಕ ಡಿಕೆ ಶಿವಕುಮಾರ್ ಮುಖ್ಯಮಂತ್ರಿ ಆಗಬೇಕು ಎಂದು ಸಂಕಲ್ಪ ಮಾಡಿದ್ದರು. ಹಾಗೆಯೇ ಡಿಕೆಶಿ ಸಿಎಂ ಆಗಬೇಕೆಂದು ದೇವರಿಗೆ ಪಾರ್ಥನೆ ಮಾಡಿ ಈಡುಗಾಯಿ ಒಡೆದು ದೇವರಿಗೆ ಪ್ರಾರ್ಥನೆ ಮಾಡಿದ್ದರು. ಇದೇ ವೇಳೆ ದೇವಸ್ಥಾನದ ಅರ್ಚಕರಿಗೆ ವಸ್ತ್ರ ದಾನ ಮಾಡುವ ಡಿಕೆ ಶಿವಕುಮಾರ್ ರವರು ಮುಖ್ಯಮಂತ್ರಿ ಪಟ್ಟಕ್ಕೇರಬೇಕು ಎಂದು ಅಂ–ದೇ ಧೃಢ ಸಂಕಲ್ಪ ಮಾಡಿದ್ದರು. ಸತತ 21 ದಿನಗಳ ಕಾಲ ಮಲೆ ಮಹದೇಶ್ವರ ಸ್ವಾಮಿ ಸನ್ನಿಧಿಯಲ್ಲಿಯೇ



ಇದ್ದುಕೊಂಡು ಕಠಿಣ ವ್ರತದ ಜೊತೆಗೆ ರುದ್ರಾಭಿಷೇಕ ಮಾಡಿಸುವ ಮೂಲಕ ಡಿಕೆ ಶಿವಕುಮಾರ್ ರವರು ಶತಾಯ ಗತಾಯ ಮುಖ್ಯಮಂತ್ರಿಯಾಗಲೇಬೇಕೆಂದು ಪಣ ತೊಟ್ಟಿದ್ದರು. ಮುಂದಿನ ದಿನಗಳಲ್ಲಿ ಅವರು ಮುಖ್ಯಮಂತ್ರಿ ಸ್ಥಾನದೊಂದಿಗೆ ಮಲೆಮಹದೇಶ್ವರ ದೇವಸ್ಥಾನಕ್ಕೆ ಭೇಟಿ ಮಾಡುವ ಅವಕಾಶವನ್ನು ಮಾದಪ್ಪ ಕರುಣಿಸಲೆಂದು ಡಿ ಪಿ ವೆಂಕಟೇಶ್ ರವರು ದೇವರಲ್ಲಿ ಹರಕೆ ಮಾಡಿಕೊಂಡಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಪಿ ಬಿಲ್ಡರ್ಸ್ ಅಂಡ್ ಡೆವೆಲಪರ್ಸ್ ಮಾಲೀಕರು ಹಾಗೂ ಸಮಾಜ ಸೇವಕರಾದ ಡಿ.ಪಿ ವೆಂಕಟೇಶ್, 'ಸಂಕಷ್ಟಗಳನ್ನೇ ಮೆಟ್ಟಿಲುಗಳನ್ನಾಗಿ ಮಾಡಿಕೊಂಡು ಬೆಳೆದ ಕರ್ನಾಟಕದ ಧೀರ ನಾಯಕ, ಮಾನ್ಯ ನೂತನ ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ ಹೃದಯಪೂರ್ವಕ ಅಭಿನಂದನೆಗಳು. ಮಲೆ ಮಹದೇಶ್ವರ ಬೇಡಿದ್ದನ್ನು ಕರುಣಿಸುತ್ತಾನೆ ಎಂಬ ನಂಬಿಕೆ ನಮಗಿತ್ತು. ಈಗ ಆ ಸಂಕಲ್ಪ ಈಡೇರಿದೆ. ಮುಂದಿನ ದಿನಗಳಲ್ಲಿ ಡಿ ಕೆ ಶಿವಕುಮಾರ್ ರವರ ಮುಖ್ಯಮಂತ್ರಿ ಸ್ಥಾನಕ್ಕೆ ಯಾವುದೇ ವಿಘ್ನ ಬಾರದಂತೆ ದೇವರಿಗೆ ಹರಸಿಕೊಂಡಿದ್ದೇವೆ. ಅವರ ಅವಧಿಯಲ್ಲಿ ಕರ್ನಾಟಕ ರಾಜ್ಯವು ಇಡೀ ದೇಶದಲ್ಲಿಯೇ ಹೆಚ್ಚು ಅಭಿವೃದ್ಧಿ ಹೊಂದಿದ ರಾಜ್ಯವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ. ಅವರ ಶ್ರಮಕ್ಕೆ ತಕ್ಕ ಫಲ ದೊರೆತಿದ್ದು ನಮಗೆ ಅತೀವ ಸಂತೋಷವಾಗಿದೆ, ಎಂದು ತಿಳಿಸಿದರು.

'ಕನಕಪುರದ ಬಂಡೆ' ಎಂದೇ ಕರೆಯಲ್ಪಡುವ ಇವರು ಇತರರ ಜೀವನದಲ್ಲಿ ಯಶಸ್ಸು ಸಾಧಿಸಲು, ಉನ್ನತ ಸ್ಥಾನಕ್ಕೇರಲು ತಾವೇ ಮೆಟ್ಟಿಲಾಗಿ ನಿಂತವರು. ತಮ್ಮ ಸ್ವಾರ್ಥವನ್ನು ಬದಿಗಿಟ್ಟು ಬೇರೆಯವರ ಬೆಳವಣಿಗೆಗೆ ಶ್ರಮಿಸಿದ ಡಿ.ಕೆ ಶಿವಕುಮಾರ್ ರವರು ಇಂದು ಶಿಲೆಯಾಗಿದ್ದಾರೆ. ಡಿ.ಕೆ. ಶಿವಕುಮಾರ್ ರವರ ದೃಢ ನಾಯಕತ್ವ, ಜನಪರ ಕಾಳಜಿ ಮತ್ತು ಅಭಿವೃದ್ಧಿಯ ದೂರದೃಷ್ಟಿ ರಾಜ್ಯವನ್ನು ಪ್ರಗತಿಯ ಪಥದಲ್ಲಿ ಮುನ್ನಡೆಸಲಿ, ಬ್ರ್ಯಾಂಡ್ ಬೆಂಗಳೂರು ನಿರ್ಮಾಣದ ಅವರ ಕನಸು ನನಸಾಗಲಿ. ರೈತರ, ಬಡವರ ಮತ್ತು ಯುವಕರ ಧ್ವನಿಯಾಗಿ ಅವರು ಕೆಲಸ ಮಾಡುತ್ತಾರೆಂಬ ನಂಬಿಕೆ ನಮಗಿದೆ', ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಹಿರಿತನ, ಅನುಭವಕ್ಕೆ ತಕ್ಕ ಸ್ಥಾನಮಾನ ಸಿಗದಿದ್ದರೆ ರಾಜ್ಯಾದ್ಯಂತ ಹೋರಾಟದ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆಚಿಕ್ಕಬಳ್ಳಾಪುರ

ಹಿರಿಯ ರಾಜಕಾರಣಿ ಹಾಗೂ ಮಾಜಿ ಕೇಂದ್ರಸಚಿವ ಕೆ.ಹೆಚ್.ಮುನಿಯಪ್ಪ ಅವರಿಗೆ ಹಿರಿತನ ಮತ್ತು ಪಕ್ಷನಿಷ್ಠೆಯನ್ನು ಪರಿಗಣಿಸಿ ಉಪಮುಖ್ಯಮಂತ್ರಿ ಸ್ಥಾನ ಹಾಗೂ ಸಮಾಜ ಕಲ್ಯಾಣ ಇಲಾಖೆಯಂತಹ ಪ್ರಮುಖ ಖಾತೆ ನೀಡಬೇಕು ಎಂದು ಮಾದಾರ ಮಹಾಸಭಾ ಆಗ್ರಹಿಸಿದೆ.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಹಾಸಭಾದ ಜಿಲ್ಲಾಧ್ಯಕ್ಷ ಪಟ್ರೇನಹಳ್ಳಿ ಕೃಷ್ಣ, ನೂತನ ಸಚಿವ ಸಂಪುಟದಲ್ಲಿ ಕೆ.ಹೆಚ್.ಮುನಿಯಪ್ಪ ಅವರಿಗೆ ಉತ್ತಮ ಖಾತೆ ದೊರೆಯಲಿದೆ ಎಂಬ ನಿರೀ–ಕ್ಷೆ ಇತ್ತು.ಈ ಕುರಿತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೂ ಮನವಿ ಮಾಡಲಾಗಿತ್ತು.ಆದರೆ 45 ವರ್ಷಗಳ ರಾಜಕೀಯ ಅನುಭವ ಹೊಂದಿರುವ ನಾಯಕರಿಗೆ ತಕ್ಕ ಸ್ಥಾನಮಾನ ನೀಡದಿರುವುದು ಬೇಸರದ ಸಂಗತಿ ಎಂದು ಹೇಳಿದರು.

ಮಾದಿಗ ಸಮುದಾಯ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದೆ ಸಮುದಾಯದ ನಾಯಕರನ್ನು ನಿರಂತರವಾಗಿ ಕಡೆಗಣಿಸಲಾಗುತ್ತಿದೆ ಎಂಬ ಭಾವನೆ ಮೂಡಿದೆ.ಮಾದಿಗ ಸಮುದಾಯದ ನಾಯಕರಿಗೆ ಅಬಕಾರಿ ಅಥವಾ ಆಹಾರ ಖಾತೆಗಳನ್ನು ಮಾತ್ರ ನೀಡುವ ಪರಿಪಾತ ಯಾಕೆ ಎಂಬ ಪ್ರಶ್ನೆ ಉದ್ಭವಿಸಿದೆ ಎಂದು



ಅವರು ಹೇಳಿದರು.ನೂತನ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಹೈಕಮಾಂಡ್ ಕೆ.ಹೆಚ್. ಮುನಿಯಪ್ಪ ಅವರಿಗೆ ಸಮಾಜ ಕಲ್ಯಾಣ ಅಥವಾ ಉನ್ನತ ಖಾತೆ ನೀಡಬಹುದು ಎಂಬ ನಿರೀಕ್ಷೆ ಇತ್ತು.ಆದರೆ ಮತ್ತೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯನ್ನೇ ನೀಡಿರುವುದು ಸಮುದಾಯದ ಶಕ್ತಿಯನ್ನು ಕಡೆಗಣಿಸಿದಂತಾಗಿದೆ ಎಂದು ಹೇಳಿದರು. ಕೆ.ಹೆಚ್.ಮುನಿಯಪ್ಪ ಅವರು ತಮ್ಮ ಅನುಭವಕ್ಕೆ ತಕ್ಕ ಸ್ಥಾನಮಾನ ಸಿಗದಿದ್ದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಜನರ ನಡುವೆ ಬರಬೇಕು.ಸಮುದಾಯ ಅವರ ಬೆನ್ನಿಗೆ ನಿಲ್ಲಲಿದೆ ಎಂದು ಹೇಳಿದರು.

ದಲಿತ ಮುಖಂಡ ಬಾಲಕುಂಟಹಳ್ಳಿ ಗಂಗಾಧರಪ್ಪ ಮಾತನಾಡಿ,ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮೇಲೆ ವಿಶ್ವಾಸವಿದೆ. ಆದರೆ ಮುಂಬರುವ ಚುನಾವಣೆಗಳಲ್ಲಿ ಸಮುದಾಯ ಕಾಂಗ್ರೆಸ್ ಪರವಾಗಿ ಕೆಲಸ ಮಾಡಬೇಕಾದರೆ ಕೆ.ಹೆಚ್.ಮುನಿಯಪ್ಪ ಅವರಿಗೆ ಉತ್ತಮ ಖಾತೆ ನೀಡಬೇಕು ಎಂದು ಒತ್ತಾಯಿಸಿದರು.ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಚಿಕ್ಕಕಾಡಿಗೇನಹಳ್ಳಿ ಕೃಷ್ಣಮೂರ್ತಿ ಮಾತನಾಡಿ,ಮುತ್ಸದ್ದಿ ರಾಜಕಾರಣಿಯಾಗಿರುವ ಕೆ.ಹೆಚ್. ಮುನಿಯಪ್ಪ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು.ಆಹಾರ ಖಾತೆ ನೀಡಿರುವುದು ಸರಿಯಲ್ಲ.ಅವರ ಅನುಭವ ಮತ್ತು ಹಿರಿತನಕ್ಕೆ ತಕ್ಕ ಸ್ಥಾನಮಾನ ನೀಡಬೇಕು.ಉನ್ನತ ಖಾತೆಗಳನ್ನು ಇತರರಿಗೆ ನೀಡಿ,ಮಾದಿಗ ಸಮುದಾಯದ ಹಿರಿಯ ನಾಯಕರಿಗೆ ಆಹಾರ ಖಾತೆ ನೀಡಿರುವುದು ಎಷ್ಟರ ಮಟ್ಟಿಗೆ ನ್ಯಾಯ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈ ವಿಚಾರದಲ್ಲಿ ವಿಶೇಷ ಗಮನ ಹರಿಸಿ ಕೆ.ಹೆಚ್. ಮುನಿಯಪ್ಪ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು. ಅದು ಸಾಧ್ಯವಾಗದಿದ್ದರೆ ಕನಿಷ್ಠ ಸಮಾಜ ಕಲ್ಯಾಣ ಇಲಾಖೆಯಂತಹ ಪ್ರಮುಖ ಖಾತೆಯನ್ನು ನೀಡಬೇಕು.ಇಲ್ಲವಾದಲ್ಲಿ ಮಾದಾರ ಮಹಾಸಭಾ ರಾಜ್ಯಾದ್ಯಂತ ಹೋರಾಟ ಆರಂಭಿಸಲಿದೆ ಎಂದು ಅವರು ಎಚ್ಚರಿಸಿದರು.ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಉಪಾಧ್ಯಕ್ಷ ಮುನಿಯಪ್ಪ, ಮುರಳಿವೆ ೞಹನ್,ತಿರುಮಲ್ಲಪ್ಪ,ಅ.ನಾ.ಮೂರ್ತಿ, ದೇವರಾಜ್,ವೆಂಕಟೇಶ್,ಶ್ರೀನಿವಾಸ್,ರಾಮಪ್ಪ, ನರಸಿಂಹಯ್ಯ,ನಾಗರಾಜ್,ಪ್ರಕಾಶ್,ಪ್ರಸಾದ್, ಮುನಿಕೃಷ್ಣಪ್ಪ,ಎಪಿಎಸ್ ಆನಂದ್,ಏರ್ಪೋರ್ಟ್ ಮುನಿರಾಜು,ಎಸ್‌ಟಿಡಿ ವೆಂಕಟೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನರೇಗಾ ಕಾಮಗಾರಿ ಸ್ಥಳದಲ್ಲಿ ರೋಜಗಾರ ದಿನ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ತಾಲೂಕಿನಮಂಡಲಗೇರಿಗ್ರಾಮಪಂಚಾಯತಿ ವ್ಯಾಪ್ತಿಯ ಭಟಪ್ಪನಹಳ್ಳಿ ಗ್ರಾಮದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿಯೋಜನೆಯ ಕಾಮಗಾರಿ ಸ್ಥಳದಲ್ಲಿ ರೋಜಗಾರ ದಿನ ಆಚರಿಸಲಾಯಿತು. ಕಾಮಗಾರಿ ಸ್ಥಳದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಸುರೇಶ್ ಕಾವಳೆ ಮಾತನಾಡಿ ನರೇಗಾ ಯೋಜನೆಯ ಕಾಮಾರಿಗಳಲ್ಲಿ ಹಾಜರಾತಿ ಯಶಸ್ವಿಯಾಗಲು ಇ ಕೆವೈಸಿ ಅವಶ್ಯ ಅದಕ್ಕಾಗಿ ಎಲ್ಲರೂ ಇ ಕೆವೈಸಿ ಮಾಡಬೇಕು, ಅಳತೆ ಪ್ರಕಾರ ಕೆಲಸ ನಿರ್ವಹಿಸಬೇಕುಎಂದರು,ನಂತರ ತಾಲೂಕ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ ಮಾತನಾಡಿ ಕೂಲಿಕಾರರು ತಮ್ಮ ಆರೋಗ್ಯದ ಕಡೆ ಹೆಚ್ಚು ಗಮನ ಹರಿಸಬೇಕು ಬಿಸಿಲು ಬಹಳಷ್ಟು ಇರುವುದರಿಂದ ಬೆಳಗ್ಗೆ ಬೇಗನೇ ಕೆಲಸಕ್ಕೆ ಬರಬೇಕು, ತಲೆಗೆ ಟೋಪಿ ಅಥವಾ



ವಸ್ತ್ರಗಳನ್ನು ಹಾಕಿರಬೇಕು, ಕೂಲಿಕಾರರು ತಮ್ಮ ಕುಟುಂಬದ ಸುರಕ್ಷತೆಗಾಗಿ ತಾವು ಪ್ರತಿಯೊಬ್ಬರು PMSBY, PMJJBY ಜೀವ ವಿಮೆ ಮಾಡಿಸಿಕೊಳ್ಳಬೇಕು, ಅವಶ್ಯಕತೆ ಇರುವವರು ಅಟಲ್ ಪೆನ್ಸನ್, ಕಒಖಜಒಆಜ ಪ್ರಧಾನಮಂತ್ರಿ ಶ್ರಮ ಯೋಗಿ ಮಾನ್ ಧನ್ ಯೋಜನೆ ಪೆನ್ಸನ್ ಸ್ಕೀಮ್ ಗಳಲ್ಲಿ ನೊಂದಣಿ ಮಾಡಿಕೊಳ್ಳಬೇಕು ಎಂದರು. ಕೂಲಿಕಾರರು ಕನಿಷ್ಟ ಅಳತೆಯ ಕೆಲಸ ನಿರ್ವಹಿಸಿದರೆ ರೂ. 370 ಸಿಗಲಿದ್ದು ನರೇಗಾ ಯೋಜನೆಯಡಿ ಕೂಲಿಕಾರರು ಕೆಲಸ ಮಾಡಬೇಕು, ಕೂಲಿ ಹಣ ನೇರವಾಗಿ PFMS ಮೂಲಕ ಅವರ ಖಾತೆಗೆ ಜಮೆ ಆಗುವುದರಿಂದ ಕೂಲಿಕಾರರು ತಮ್ಮ ಖಾತೆಯನ್ನು ಸಕ್ರೀಯ ವಾಗಿ ಇಡುವುದು NPCI ಲಿಂಕ್ ಮಾಡಬೇಕು, ಇ–KYC ಮಾಡಿರಬೇಕು ಎಂದರು.ಸ್ಥಳದಲ್ಲಿ ಗ್ರಾಮ ಪಂಚಾಯತಿ ಕಂಪ್ಯೂಟರ್ ಅಪರೇಟರ್ ಸಂತೋಷಬಂಡಾರಿ, ಕಾಯಕ ಬಂಧುಗಳು, ಭಟಪ್ಪನ ಹಳ್ಳಿ ಕೂಲಿಕಾರರು ಹಾಜರಿದ್ದರು.

# ಶೈಕ್ಷಣಿಕ ಪರಿಕರ ವಿದ್ಯಾರ್ಥಿಗಳಿಗೆ ನೆರವು : ನಾಗರಾಜ

• ಮಲ್ಲಮ್ಮ ನುಡಿ ವಾರ್ತೆಮುದಗಲ್

ಶೈಕ್ಷಣಿಕ ಪರಿಕರಗಳ ನೆರವಿನಿಂದ ವಿದ್ಯಾರ್ಥಿಗಳಲ್ಲಿ ಓದಿನ ಬಗ್ಗೆ ಆಸಕ್ತಿ ಹೆಚ್ಚಿಸುವುದರ ಜೊತೆಗೆ ಅವರ ಭವಿಷ್ಯ ರೂಪಿಸಿಕೊಳ್ಳಲು ಪ್ರೇರಣೆ ನೀಡುತ್ತದೆ ಎಂದು ಬೆಂಗಳೂರು ರೋಹನ್ ಕೇರ್ ಫೌಂಡೇಶನ್ ಸ್ಥಾಪಕ ನಾಗರಾಜ ಶನಿವಾರ ಹೇಳಿದರು.



ಪಟ್ಟಣ ಸಮೀಪದ ಜನತಾಪುರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೆಂಗಳೂರಿನ ರೋಹನ್ ಕೇರ್ ಫೌಂಡೇಶನ್ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತ ಸ್ಕೂಲ್ ಕಿಟ್ ವಿತರಣಾ ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗುವವರೊಂದಿಗೆ ಚಾಲನೆ ನೀಡಿ ಮಾತನಾಡಿದ ಅವರು ಮಕ್ಕಳ ಶಿಕ್ಷಣಕ್ಕೆ ಅಗತ್ಯವಾದ ಸೌಲಭ್ಯಗಳನ್ನು ಒದಗಿಸುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ನಿಮ್ಮನ್ನೆಲ್ಲ ನೋಡಿದರೆ ನಮ್ಮ ಬಾಲ್ಯದ ನೆನಪಾಗುತ್ತದೆ. ಜೀವನದಲ್ಲಿ ಎಲ್ಲರೂ ಕಷ್ಟ ಓದಿ ಮುಂದೆ ಬರಬೇಕು. ನೀವು ದೇಶದ ಉತ್ತಮ ಪ್ರಜೆಯಾಗಿ ದೇಶಕ್ಕೆ ನಿಮ್ಮದೇ ಆದ ಕೊಡುಗೆ ನೀಡಬೇಕು. ಮಕ್ಕಳು ಸಮಾಜದ ಅಮೂಲ್ಯ ಆಸ್ತಿ. ನಮ್ಮ ಕುಲಕಸುಬನ್ನು ಕೀಳರಿಮೆಯಿಂದ ನೋಡದೆ, ಅದನ್ನು ಹೆಮ್ಮೆಯಿಂದ ಉಳಿಸಿ ಬೆಳೆಸುವ ಕೆಲಸ ಯುವಪೀಳಿಗೆಯಿಂದ ಆಗಬೇಕಿದೆ. ಶಿಕ್ಷಣದ ಮಹತ್ವ ಅರಿತು ಜೀವನದಲ್ಲಿ ಮುನ್ನಡೆಯಬೇಕು ಎಂದು ಸಂತಸದಿಂದ ಔದಾರ್ಯ ಮೆರೆದರು.ಫೌಂಡೇಶನ್ ನಿರ್ದೇಶಕ ಮಂಜುನಾಥ ಮಾತನಾಡಿ ಸರಕಾರಿ ಶಾಲೆಗಳು ಉಳಿದು ಬೆಳೆಯ ಬೇಕೆಂಬುದು ಸಂಸ್ಥೆಯ ಮೂಲ ಉದ್ದೇಶವಾಗಿದೆ. ಸಂಸ್ಥೆಯಿಂದ ಅನೇಕ ಕೊಡುಗೆ ನೀಡುವದರ ಜೊತೆಗೆ ಸ್ಕೂಲ್ ಕಿಟ್ ಕೊಡುಗೆ ನೀಡುವುದು ಒಂದು ಭಾಗವಾಗಿದೆ ಎಂದು ತಿಳಿಸಿದರು.ಪ್ರಾಸ್ತವಿಕ ನುಡಿ ಶಾಲಾ ಪ್ರಭಾರ ಮುಖ್ಯಗುರುಗಳು ಮೌನೇಶ ಎಂ. ಮಾತನಾಡಿ ಈ ಹಿಂದಿನ ವರ್ಷದಲ್ಲಿ ನಮ್ಮ ಶಾಲೆ ಸೇರಿ 3 ಶಾಲೆಗಳಿಗೆ ಈ ಸ್ಕೂಲ್ ಕಿಟ್ ಗಳನ್ನು ವಿತರಿಸಿದ್ದರು, ಈ ಶೈಕ್ಷಣಿಕ ವರ್ಷದಲ್ಲಿ ನಮ್ಮ ತಾಲೂಕಿನ 10 ಶಾಲೆಯ ಮಕ್ಕಳಿಗೆ ಸ್ಕೂಲ್ ಕಿಟ್ಗಳನ್ನು ಕೊಡುಗೆ ನೀಡಿರುವ ರೋಹನ್ ಕೇರ್ ಫೌಂಡೇಶನ್ ಅವರಿಗೆ ಅಭಿನಂದನೆ ಸಲ್ಲಿಸಿದರು. ಇಲ್ಲಿಯವರೆಗೆ ಫೌಂಡೇಶನ್ ನೀಡಿರುವ ಶೈಕ್ಷಣಿಕ ಕೊಡುಗೆಗಳನ್ನು ಸಮಾರಂಭದಲ್ಲಿ ಪರಿಚಯಿಸಿದರು. ಕಾರ್ಯಕ್ರಮ ನಿರೂಪಣೆ ವಂದನಾರ್ಪಣೆ ಶಿಕ್ಷಕ ಜಗದೀಶ ವಿಶ್ವಕರ್ಮ ನೆರವೇರಿಸಿದರು. ವಿಷ್ಣುಕುಮಾರ ಕಾರ್ಯಕ್ರಮದಲ್ಲಿ ಹಾಡಿನ ಮೂಲಕ ಮನರಂಜಿಸಿದರು.ಕಾರ್ಯಕ್ರಮದಲ್ಲಿ ಮುಖ್ಯಶಿಕ್ಷಕಿ ಸುಜಾತ, ಶಿಕ್ಷಕರು ಸೂಗುರೇಶ, ಸಂಗಯ್ಯ ಮಾತನಾಡಿದರು.ಫೌಂಡೇಶನ್ ಸದಸ್ಯರಾದ ಮಹೇಶ, ಶೇಖರ ಸೇರಿದಂತೆ ಬನ್ನಿಗೋಳ ಸಮೂಹ ಸಂಪನ್ಮೂಲ ವ್ಯಕ್ತಿ ಮಂಜುನಾಥ ಹೂಗಾರ, ಮಹೇಶ್, ಹುಸೇನ್, ಅಶೋಕ ಬಿರಾದಾರ, ಆದಂಭಾಷಾ, ಸಹಶಿಕ್ಷಕ ರವಿಕುಮಾರ ಹಾಗೂ ವಿದ್ಯಾರ್ಥಿಗಳು ಇದ್ದರು.

# ಮಾಧ್ಯಮ ರತ್ನ ಸಿರಿ ಪ್ರಶಸ್ತಿಗೆ ಪುಂಡಲೀಕ ಮುರಾಳ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ



ಖಾಸತೇಶ್ವರ ಮಠದ ಶ್ರೀ ವಿರಕೇಶ್ವರ ಭರತನಾಟ್ಯ ತರಬೇತಿ ಸಂಸ್ಥೆಯ ಏಳನೇ ವಾರ್ಷಿಕೋತ್ಸವದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಸಾಧಕರಿಗೆ ನೀಡಲಾಗುವ ಪ್ರತಿಷ್ಠಿತ "ಮಾಧ್ಯಮ ರತ್ನ ಸಿರಿ" ರಾಜ್ಯಮಟ್ಟದ ಪ್ರಶಸ್ತಿಗೆ ಧರ್ಮಯುದ್ಧ ಪತ್ರಿಕೆಯ ಸಂಪಾದಕರು ಹಾಗೂ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷರಾದ ಶ್ರೀ ಪುಂಡಲೀಕ ಮುರಾಳ ಅವರು ಆಯ್ಕೆಯಾಗಿದ್ದಾರೆ.ಮಾಧ್ಯಮ ಕ್ಷೇತ್ರದಲ್ಲಿ ಸಮಾಜಮುಖಿ ಸೇವೆ, ಜನಪರ ಸಮಸ್ಯೆಗಳನ್ನು ಬೆಳಕಿಗೆ ತರುವ ಕಾರ್ಯ ಹಾಗೂ ಯುವಜನರ ಸಂಘಟನೆಯಲ್ಲಿ ಸಲ್ಲಿಸಿರುವ ವಿಶೇಷ ಕೊಡುಗೆಯನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.ಪ್ರಶಸ್ತಿ ಪ್ರದಾನ ಸಮಾರಂಭವು ಜೂನ್ 7 ರಂದು ಖಾಸತೇಶ್ವರ ಮಠದ ಶ್ರೀ ವಿರಕೇಶ್ವರ ಭರತನಾಟ್ಯ ತರಬೇತಿ ಸಂಸ್ಥೆಯ ಏಳನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ನಡೆಯಲಿದೆ.ಪುಂಡಲೀಕ ಮುರಾಳ ಅವರ ಆಯ್ಕೆಯನ್ನು ಸ್ವಾಗತಿಸಿರುವ ಜನನಿ ಸೇವಾ ಟ್ರಸ್ಟ್ ಹಂಪಾಪಟ್ಟಣ ಅಧ್ಯಕ್ಷ ಎ. ಕೇಶವಮೂರ್ತಿ ಅವರು ಅಭಿನಂದನೆ ಸಲ್ಲಿಸಿ, ಮಾಧ್ಯಮ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಅವರು ಸಲ್ಲಿಸುತ್ತಿರುವ ಸೇವೆ ಇನ್ನಷ್ಟು ವಿಸ್ತಾರವಾಗಲಿ ಎಂದು ಶುಭ ಹಾರೈಸಿದ್ದಾರೆ.

# ತಿಪ್ಪಣ್ಣ ಕಮಕನೂರ ಜನ್ಮದಿನ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಹಾಗೂ ವಿಧಾನ ಪರಿಷತ್ ಚುನಾವಣೆಯ ಅಭ್ಯರ್ಥಿ ತಿಪ್ಪಣ್ಣಪ್ಪ ಕಮಕನೂರ ಅವರ ಜನ್ಮದಿನದ ಅಂಗವಾಗಿ ಗುರುಮಠಕಲ್ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರೋಗಿಗಳಿಗೆ ಹಣ್ಣು–ಹಂಪಲು ವಿತರಿಸಲಾಯಿತು.ಗುರುಮಠಕಲ್ ಓಬಿಸಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡರಾದ ವಿಜಯಕುಮಾರ್ ನೀರೇಟಿ ಅಭಿಮಾನಿ ಬಳಗದ ವತಿಯಿಂದ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ ಹಣ್ಣುಗಳನ್ನು ಹಂಚಿ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ಅಭಿಮಾನಿ ಬಳಗದ ಸದಸ್ಯರು, ತಿಪ್ಪಣ್ಣ ಕಮಕನೂರ ಅವರು ಸಮಾಜಮುಖಿ ಕಾರ್ಯಗಳ ಮೂಲಕ ಜನರ ಸೇವೆ ಮಾಡುತ್ತಿರುವ ಹಿರಿಯ ನಾಯಕರಾಗಿದ್ದು, ಅವರ ಜನ್ಮದಿನದ ಅಂಗವಾಗಿ ಸೇವಾ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಯುವ ನಾಯಕ ಲಿಂಗಪ್ಪ ತಾಂಡುರಕರ್ ಸೇರಿದಂತೆ ವಿಜಯ ಕುಮಾರ್ ನೀರೆಟಿ ಅಭಿಮಾನಿ ಬಳಗದ ಸದಸ್ಯರಾದ ಆಯಜ್ ಅಲಿ, ಸಿದ್ದಪ್ಪ ಮದ್ದೂರ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ರಾಚಣ್ಣ ಗೌಡ ಮುದ್ನಾಳ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಪರಿಸರ ಸಂರಕ್ಷಣ ಮಾಡುವುದು ಮಾನವನ ಮೊದಲ ಕರ್ತವ್ಯವಾಗಿದೆ, ಮಾನವ ರಕ್ಷಣಾ ಹಾಗೂ ವನ್ಯ ಜೀವಿಗಳ ರಕ್ಷಣೆ ನಮ್ಮೆಲ್ಲರ ಮೂಲಭೂತ ಕರ್ತವ್ಯ ಆಗಿದೆ ಎಂದು ಬಿಜೆಪಿಯ ಹಿರಿಯ ಮುಖಂಡರಾದ ರಾಚಣ್ಣ ಗೌಡ ಮುದ್ನಾಳ ರವರು ಹೇಳಿದರು. ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ನಡೆದ ವಿಶ್ವ ಪರಿಸರ ದಿನಾಚರಣೆ ಹಾಗೂ ಬಿಜೆಪಿ ಯುವ ಮುಖಂಡ ಹಣಮಂತ ವಲ್ಯಾಪುರ ರವರ ಹುಟ್ಟುಹಬ್ಬದ ಕಾರ್ಯಕ್ರಮವನ್ನು ಸಸಿ ನೆಡುವ ಮೂಲಕ ಆಚರಿಸಿ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿ ಮಾತನಾಡಿದರು . ಸಂದರ್ಭದಲ್ಲಿ ಭೋವಿ ಸಮಾಜದ ಜಿಲ್ಲಾ ಅಧ್ಯಕ್ಷರಾದ ನಾಗಪ್ಪ ಬೆನಕಲ್, ವಾರ್ಡಿನ ದ.ಸ.ಸ. ಜಿಲ್ಲಾ ಸಂಚಾಲಕರು ಮರೆಪ್ಪ ಚಟ್ಟರ್ಕರ್, ಮಲ್ಲಿಕಾರ್ಜುನ್ ಕುರಕುಂಬಳ, ಮರೆಪ್ಪ ವರ್ಕನಳ್ಳಿ, ಪರಶುರಾಮ್ ಒಡೆಯರ್, ಮತ್ತು ಎಪಿಎಂಸಿ ಅಧ್ಯಕ್ಷರಾದ ಶರಣಗೌಡ ಕಾಳೇಬೆಳಗುಂದಿ, ಬಿಜೆಪಿಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಪ್ರಭಾವತಿ ಕಲಾಲ್, ಬಿಜೆಪಿಯ ಯುವ ಮೋರ್ಚಾದ ಅಧ್ಯಕ್ಷ ಶ್ರೀಧರ್ ಸಾಹುಕಾರ, ಪ್ರಥಮ ದರ್ಜೆ ಗುತ್ತಿಗೆದಾರ ಶಾಂತಗೌಡ ಪಗಲಾಪುರ, ಶಿವಕುಮಾರ್ ಯಾದವ ಪಗಲಾಪುರ, ಬಸವರಾಜ್ ಮುದ್ನಾಳ್, ರಮೇಶ್ ಟೋಕಪುರ,ಬಾಲಪ್ಪ ಮಂಜಲ್ಕರ್, ಹಣಮಂತ ಎತ್ತರ್,ತಿಮ್ಮಯ್ಯ ರಾಯಚೂರಕರ್,ಹುಸೇನಪ್ಪವಲ್ಯಾಪುರ್,ಹನುಮಂತ ದ್ಯಾರಂಗಲ್, ಈಶಪ್ಪ, ಎಂ.ಶ್ರೀಕಾಂತ್ ಸುಂಗಲಕರ್, ದೇವರಾಜ್ ಮಸ್ಕನಳ್ಳಿ , ಸಿದ್ದು ತಳಕ್, ಅಂಜಪ್ಪ ಮಂಜಲ್ಕರ್ ಮುಂತಾದವರು ಇದ್ದರು.

# ವಿವಿಧ ವಾರ್ಡ್ ಗಳಲ್ಲಿ ಜನ ಸ್ಪಂದನ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ6, : ಬೀದರ ಮಹಾನಗರ ಪಾಲಿಕೆಯ ವಾರ್ಡ್ 9, 15, 16 & 35 ವಾರ್ಡಗಳಲ್ಲಿ 2026ರ ಜೂನ್ 8, 9 ರಂದು ಬೆಳಿಗ್ಗೆ 10 ಗಂಟೆಗೆ ಜನ ಸ್ಪಂದನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಬೀದರ ಮಹಾನಗರ ಪಾಲಿಕೆ ಆಯುಕ್ತರು ಅವರು ತಿಳಿಸಿದ್ದಾರೆ.ಬೀದರ ವಾರ್ಡ್ ನಂ.9 ರಲ್ಲಿ 2026ರ ಜೂನ್ 8 ರಂದು ಬೆಳಿಗ್ಗೆ 10 ಗಂಟೆಗೆ ಮುಲ್ತಾನ್ ಪಾಶ ದರ್ಗಾದಲ್ಲಿ ಜನ ಸ್ಪಂದನ ಕಾರ್ಯಕ್ರಮ ನಡೆಯಲಿದೆ.ವಾರ್ಡ್ ನಂ. 35 ರಲ್ಲಿ 2026ರ ಜೂನ್ 8 ರಂದು ಮಧ್ಯಾಹ್ನ 1.30 ಗಂಟೆಗೆ ಮಂಗಲ್ ಪೇಟ್ ಚರ್ಚ್ ನಡೆಯಲಿದೆ. ವಾರ್ಡ್ ನಂ. 15, 16 ರಲ್ಲಿ 2026ರ ಜೂನ್ 9 ರಂದು ಬೆಳಿಗ್ಗೆ 10 ಗಂಟೆಗೆ ಪ್ರತಾಪ್ ನಗರ ಛಲವಾದಿ ಭವನದಲ್ಲಿ ನಡೆಯಲಿದೆ.

# ಒತ್ತಡರಹಿತ ಪರೀಕ್ಷೆಗೆ ಯೋಜಿತ ಅಧ್ಯಯನ ಅಗತ್ಯ: ವಿಶ್ವನಾಥ ಮರತೂರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಹತ್ತನೇ ತರಗತಿ ವಿದ್ಯಾರ್ಥಿಗಳು ಪರೀಕ್ಷಾ ಸಮಯದಲ್ಲಿ ಒತ್ತಡಕ್ಕೆ ಒಳಗಾಗುವುದನ್ನು ತಪ್ಪಿಸಲು ಶೈಕ್ಷಣಿಕ ವರ್ಷದ ಆರಂಭದಿಂದಲೇ ಯೋಜಿತವಾಗಿ ಅಧ್ಯಯನ ನಡೆಸಬೇಕು ಎಂದು ಖ್ಯಾತ ಶಿಕ್ಷಣ ತಜ್ಞ ಕೆ.ಎಂ. ವಿಶ್ವನಾಥ ಮರತೂರ ಸಲಹೆ ನೀಡಿದರು. ನಗರದ ಜ್ಞಾನಧಾರೆ ಕೋಚಿಂಗ್ ಕೇಂದ್ರದ ಬೇಸಿಗೆ ಶಿಬಿರದಲ್ಲಿ ಹತ್ತನೇ ತರಗತಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಸಮಯ ನಿರ್ವಹಣೆ, ಓದುವ ಕೌಶಲ್ಯ, ಹೆಚ್ಚಿನ ಅಂಕಗಳಿಸುವ ತಂತ್ರಗಳು ಹಾಗೂ ಪರೀಕ್ಷಾ ಯೋಜನೆ ಕುರಿತು ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಚಟುವಟಿಕೆಗಳ ಮೂಲಕ ಮಾರ್ಗದರ್ಶನ ನೀಡಿದರು. ಶಿಕ್ಷಣ ಪ್ರೇಮಿ ಅನಂತಪ್ಪ ಬೋಯಿನ್ ಮಾತನಾಡಿ, ವಿದ್ಯಾರ್ಥಿಗಳು ದೊರೆಯುತ್ತಿರುವ ಶೈಕ್ಷಣಿಕ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಶ್ರದ್ಧೆಯಿಂದ ಅಧ್ಯಯನ ನಡೆಸಬೇಕು ಎಂದು ಕರೆ ನೀಡಿದರು. ಸಂಸ್ಥೆಯ ಪ್ರತಿನಿಧಿ ಭೀಮಾಶಂಕರ ಯದ್ಲಾಪೂರ ಮಾತನಾಡಿ, ಜಿಲ್ಲೆಯ ಶೈಕ್ಷಣಿಕ ಸಾಧನೆಯನ್ನು ಮತ್ತಷ್ಟು ಹೆಚ್ಚಿಸಲು ಜ್ಞಾನಧಾರೆ ವಿದ್ಯಾಕೇಂದ್ರವು ವಿದ್ಯಾರ್ಥಿಗಳಿಗೆ ಅಗತ್ಯ ಸಹಕಾರ ನೀಡಲಿದೆ ಎಂದು ತಿಳಿಸಿದರು. ಕಾರ್ಯಾಗಾರದಲ್ಲಿ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಶಿಕ್ಷಕರಾದ ಅಶೋಕಕುಮಾರ, ಮಲ್ಲಿಕಾರ್ಜುನ, ಅರವಿಂದ, ವಿರೇಶ, ಮಹಿಬೂಬ್ ಅಲಿ, ಸಾಬಣ್ಣ ಹಾಗೂ ರೂಪ ಉಪಸ್ಥಿತರಿದ್ದರು.

# ಆತ್ಮನಿರ್ಭರ ಭಾರತ ಮಿಷನ್ ಅಡಿಯಲ್ಲಿ ರೈತರಿಗೆ ದ್ವಿದಳ ಬಿತ್ತನೆ ಬೀಜ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 06 : ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಆತ್ಮನಿರ್ಭರ ಭಾರತ ದ್ವಿದಳ ಧಾನ್ಯಗಳ ಮಿಷನ್ ಅಡಿಯಲ್ಲಿ ತಾಲ್ಲೂಕಿನ ಅರ್ಹ ರೈತರಿಗೆ ಉಚಿತ ದ್ವಿದಳ ಧಾನ್ಯಗಳ ಬೀಜದ ಕಿಟ್‌ಗಳನ್ನು ರಾಯಚೂರಿನ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದಲ್ಲಿ ಶನಿವಾರ ವಿತರಿಸಲಾಯಿತು. ಕಾರ್ಯಕ್ರಮಕ್ಕೆ ರಾಯಚೂರಿನ ಉಪ ಕೃಷಿ ನಿರ್ದೇಶಕರಾದ ನಯೀಮ್ ಹುಸೇನ್ ಅವರು ಚಾಲನೆ ನೀಡಿ ಮಾತನಾಡಿದ ಅವರು, ದೇಶದಲ್ಲಿ ದ್ವಿದಳ ಧಾನ್ಯಗಳ ಉತ್ಪಾದನೆ ಹೆಚ್ಚಿಸಿ ರೈತರ ಆದಾಯವನ್ನು ವೃದ್ಧಿಸುವುದು ಸದರಿ ಯೋಜನೆಯ ಉದ್ದೇಶವಾಗಿದೆ. ದ್ವಿದಳ ಧಾನ್ಯ ಮಣ್ಣಿನ ಫಲವತ್ತತೆ ಹೆಚ್ಚಿಸುವುದರ ಜೊತೆಗೆ ಜನರ ಪೌಷ್ಟಿಕಾಂಶ ಭದ್ರತೆಯಲ್ಲಿಯೂ ಪ್ರಮುಖ ಪಾತ್ರ ವಹಿಸಲಿದೆ. ಕಾರಣ ರೈತರು ಸರ್ಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಕೃಷಿಯನ್ನು ಲಾಭದಾಯಕ ಉದ್ಯಮವಾಗಿ ಪರಿವರ್ತಿಸುವಂತೆ ಮನವಿ ಮಾಡಿಕೊಂಡರು.ಈ ವೇಳೆ ರಾಯಚೂರು ತಾಲೂಕು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ದೀಪಾ ಎಲ್., ಅವರು ಮಾತನಾಡಿ, ದ್ವಿದಳ ಧಾನ್ಯಗಳ ಬೇಡಿಕೆ ಹೆಚ್ಚುತ್ತಿದ್ದು, ರೈತರು ಸುಧಾರಿತ ತಳಿಗಳ ಅಳವಡಿಕೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಅವರು ಹೇಳಿದರು.ಅಧಿಕ ಇಳುವರಿ ನೀಡುವ,ಹವಾಮಾನವೈಪರೀತ್ಯಗಳನ್ನು ಸಹಿಸಬಲ್ಲ, ಕೀಟ ಹಾಗೂ ರೋಗ ನಿರೋಧಕ ಗುಣಗಳನ್ನು ಹೊಂದಿರುವ ಪ್ರಮಾಣಿತ ಬೀಜಗಳನ್ನು ರೈತರಿಗೆ ಉಚಿತವಾಗಿ ವಿತರಿಸಲಾಗುತ್ತಿದೆ. ಮುಂಗಾರು ಹಂಗಾಮಿನ ಬಿತ್ತನೆಗೆ ಪೂರಕವಾಗಿ ಬಿತ್ತನೆ ಬೀಜಗಳನ್ನು ಹಾಗೂ ರಸಗೊಬ್ಬರಗಳನ್ನಯ ಅಗತ್ಯವಿರುವಷ್ಟು ದಾಸ್ತಾನು ಮಾಡಿಕೊಳ್ಳಲಾಗಿದೆ. ಕೆ.ಕಿಸಾನ್ ತಂತ್ರಾಂಶದ ಮೂಲಕ ಫ್ರೂಟ್ಸ್ ಎಫ್‌ಐಡಿ ಆಧಾರಿತವಾಗಿ ಯೂರಿಯಾ ರಸಗೊಬ್ಬರ ವಿತರಣೆ ಕಡ್ಡಾಯಗೊಳಿಸಲಾಗಿದೆ. ಯೂರಿಯಾ–ಕ್ಕೆ ಪರ್ಯಾಯವಾಗಿ ಸಂಯುಕ್ತ ಗೊಬ್ಬರಗಳ ಬಳಕೆ ಮಾಡುವ ಕುರಿತು ರೈತರಿಗೆ ಜಾಗೃತಿಯನ್ನು ಮೂಡಿಸಲಾಯಿತು.ಇದೇ ಸಂದರ್ಭದಲ್ಲಿ ರೈತ ಸಂಘದ ಅಧ್ಯಕ್ಷ ಲಕ್ಷ್ಮಣ ಗೌಡ ಕಡಗಮದೊಡ್ಡಿ ಸೇರಿದಂತೆ ರೈತ ಉತ್ಪಾದಕ ಸಂಸ್ಥೆಯ ಪ್ರತಿನಿಧಿಗಳು, ಪ್ರಗತಿ ಪರ ರೈತರು ಕಾರ್ಯಕ್ರಮದಲ್ಲಿ ಇದ್ದರು.

# ಪ್ರತಿ ಮಗುವಿಗೂ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ: ಉಪ ಆಯುಕ್ತ ಶರಣಪ್ಪ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 06 :ಜಿಲ್ಲೆಯಲ್ಲಿ ಜೂನ್ 28ರಂದು ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದಡಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಶಿಸ್ತುಬದ್ಧವಾಗಿ ನಡೆಸಬೇಕು ಎಂದು ಮಹಾನಗರ ಪಾಲಿಕೆ ಕಂದಾಯ ವಿಭಾಗದ ಉಪ ಆಯುಕ್ತ ಶರಣಪ್ಪ ಅವರು ಹೇಳಿದರು.

ಜೂನ್ 06ರ ಶನಿವಾರ ದಂದು ನಗರದ ಮಹಾನಗರ ಪಾಲಿಕೆಯ ಕಚೇರಿಯ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೆ ಪೋಲಿಯೋ ಮುಕ್ತ ಭಾರತದ ವಿಜಯವನ್ನು ಮುಂದುವರೆಸಲು ರಾಯಚೂರು ನಗರದ ಸೇರಿದಂತೆ ತಾಲೂಕಿನಾದ್ಯಂತ ಜೂನ್ 28ರ ಭಾನುವಾರ ಪೋಲಿಯೋ ಲಸಿಕೆ ಹಾಕಿಸಲು ಇಂದಿನಿಂದಲೇ ವ್ಯಾಪಕ ಪ್ರಚಾರ ಮಾಡೋಣವೆಂದರು.

ನಗರ ಪ್ರದೇಶದಲ್ಲಿ 37,983 ಮಕ್ಕಳಿಗೆ ಲಸಿಕೆ ಹಾಕಲು ಜನನೀಬಿಡ ಪ್ರದೇಶವಾದ ಸಂತೆ ಮಾರುಕಟ್ಟೆ, ರೈಲು ನಿಲ್ದಾಣ, ಬಸ್ ನಿಲ್ದಾಣ ಮುಂತಾದವುಗಳಲ್ಲಿ ಲಸಿಕೆ ಹಾಕಲು 9 ಟ್ರಾನ್ಸಿಟ್ ತಂಡಗಳು, 01 ಸಂಚಾರಿ ತಂಡ ಹಾಗೂ ಮನೆ ಬೇಟಿಗಾಗಿ 146 ತಂಡಗಳು ಕಾರ್ಯನಿರ್ವಹಿಸುತ್ತಿರುವದಕ್ಕೆ ಬೆಂಬಲವಾಗಿ ನಗರದಲ್ಲಿ ಪ್ರಚಾರಕ್ಕಾಗಿ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಜಿಂಗಲ್ಸ್ ಹಾಗೂ ಬ್ಯಾನರ್, ಫ್ಲೆಕ್ಸ್ ಅಳವಡಿಕೆ, ತಂಡದ ಸದಸ್ಯರಿಗೆ ಅಹಾರ ಪೊಟ್ಟಣ ವಿತರಣೆ ಕೈಗೊಳ್ಳಲಾಗುವುದು. ಅಲ್ಲದೆ ಮಹಾನಗರ ಪಾಲಿಕೆಯಡಿ ಆಯುಕ್ತರ ಮಾರ್ಗದರ್ಶನದಲ್ಲಿ ಎಲ್ಲ ಸಹಕಾರ ನೀಡಲಾಗುವುದು ಎಂದರು.

ಈ ವೇಳೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ 76,502 ಮಕ್ಕಳಿಗೆ ಲಸಿಕೆ ಹಾಕಲು ಜನನೀಬಿಡ ಪ್ರದೇಶವಾದ ಸಂತೆ ಮಾರುಕಟ್ಟೆ, ಬಸ್ ನಿಲ್ದಾಣ ಮುಂತಾದವುಗಳಲ್ಲಿ ಲಸಿಕೆ ಹಾಕಲು 16 ಟ್ರಾನ್ಸಿಟ್ ತಂಡಗಳು ಹಾಗೂ ವಲಸೆ ಪ್ರದೇಶ, ಕಟ್ಟಡ ಕಾಮಗಾರಿ, ಇಟ್ಟಿಗೆ ಬಟ್ಟಿ, ಕಬ್ಬು ಕಡೆಯುವ ಜಾಗೆ, ಕುರಿಹಟ್ಟಿ, ಕೊಳಚೆ ಪ್ರದೇಶ, ತೋಟದ ಮನೆ, ಮುಂತಾದ ಸ್ಥಳಗಳಲ್ಲಿರುವ ಲಸಿಕೆ ಹಾಕಲು 03 ಸಂಚಾರಿ ತಂಡ ಹಾಗೂ ಮನೆ ಬೇಟಿಗಾಗಿ 316 ತಂಡಗಳು ಕಾರ್ಯ ನಿರ್ವಹಿಸುತ್ತಿದ್ದು, ಬೆಂಬಲವಾಗಿ ಗ್ರಾಮೀಣ ಪ್ರದೇಶದಲ್ಲಿ ಪ್ರಚಾರಕ್ಕಾಗಿ ಗ್ರಾಮ ಪಂಚಾಯತಗಳ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಜಿಂಗಲ್ಸ್ ಅಂಗನವಾಡಿ ಪೂರ್ವ ಪ್ರಾಥಮಿಕ ಹಂತದ ಎಲ್ಲ ನರ್ಸರಿ, ಕಿಡರ್ ಗಾರ್ಟನ್, ಬೆಬಿ ಸಿಟ್ಟಿಂಗ್‌ನಲ್ಲಿಯ ಮಕ್ಕಳಿಗೆ ಎರಡು ದಿನ ಮೊದಲು ಲಸಿಕೆ ಹಾಕಲು ಸಿದ್ದತೆ ಕೈಗೊಳ್ಳಲು ನಿರ್ದೇಶನ ನೀಡಲಾಯಿತು.

ಶಾಲೆ,ಅಂಗನವಾಡಿಗಳಲ್ಲಿ ಬೂತ್ ಇರುವ ಸ್ಥಳಗಳಲ್ಲಿ ಮೊದಲೆ ಸ್ವಚ್ಚಗೊಳಿಸಿಡಲು ಸಂಭಂದಿಸಿದವರು ಕ್ರಮವಹಿಸಲು ಹಾಗೂ ಶಾಲಾ ಮಕ್ಕಳ ಜಾಥಾ ಹಮ್ಮಿಕೊಳ್ಳಲು ತಹಶೀಲ್ದಾರರು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಹಾಗೂ ಪಾಲಿಕೆಯ ಅರೋಗ್ಯ ಅಧಿಕಾರಿ ಡಾ ಮಹಮ್ಮದ್ ಶಾಕೀರ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ಚಂದ್ರಶೇಖರಯ್ಯಸ್ವಾಮಿ, ತಾಲೂಕಾ ಆರೋಗ್ಯಾಧಿಕಾರಿ ಡಾ.ಅಮೃತ ಹುಕ್ಕೇರಿ, ಪರಿಸರ ಅಭಿಯಂತರರು ಜಯಪಾಲರೆಡ್ಡಿ, ಆಯುಷ್ ಇಲಾಖೆಯ ಡಾ.ಪೂಜಾ, ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಶಿಕ್ಷಣ ಇಲಾಖೆಯ ಟಿಪಿಓ ಭಾಸ್ಕರ್ ಕುಮಾರ್, ಡಿವೈಹೆಚ್‌ಇಓ ಬಸಯ್ಯ, ಐಸಿಡಿಎಸ್‌ನ ಚನ್ನಮ್ಮ, ಆರ್‌ಟಿಓ ಕಚೇರಿಯ ಅರ್ಜುನ ಚೌವ್ಹಾಣ್, ಬಿಸಿಎಮ್ ಇಲಾಖೆಯ ಈರಣ್ಣ ಪತ್ತಾರ, ಹಿರಿಯ ಹೆಚ್‌ಐಓ ಸುರೇಶ, ಬಿಹೆಚ್‌ಇಓ ಸರೋಜಾ ಕೆ, ಹಿರಿಯ ಪಿಹೆಚ್‌ಸಿಓ ಈರಮ್ಮ, ಪಾಲಿಕೆ ನೈರ್ಮಲ್ಯ ನಿರೀಕ್ಷಕರಾದ ತಿಕ್ಕಾರೆಡ್ಡಿ, ರಾಮಚಂದ್ರ, ಆಕಾಶ ಪಾಟೀಲ್, ಬಿಪಿಎಮ್ ವರಲಕ್ಷ್ಮಿ, ನಂದಿನಿ ಕಾಲೇಜಿನ ಎಸ್ ರೇಹಾನ್, ಎಮ್‌ಟಿಎಸ್ ಸಂಧ್ಯಾ, ಹಾಗೂ ಆರ್‌ಸಿಹೆಚ್ ವಿಭಾಗದ ರವಿ, ನರೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೋಟ್ಯಂತರ ರೂ. ಮೌಲ್ಯದ ಆಸ್ತಿ ಸರ್ಕಾರದ ಸುಪರ್ದಿಗೆ ಮೆಸೋನಿಕ್ ಹಾಲ್ ಜಮೀನು ಜಿಲ್ಲಾಡಳಿತ ವಶಕ್ಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ ಪೋಲಾ ಹೋಟೆಲ್ ಎದುರಿನ ಮೆಸೋನಿಕ್ ಹಾಲ್‌ಗೆ ಸೇರಿದ ಕೋಟ್ಯಂತರ ರೂಪಾಯಿ ಮೌಲ್ಯದ ಜಮೀನನ್ನು ಜಿಲ್ಲಾಡಳಿತ ವಶಕ್ಕೆ ಪಡೆದುಕೊಂಡಿದೆ.

ಈ ಜಾಗದ ಕುರಿತು ಹಲವು ವರ್ಷಗಳಿಂದ ಆಡಳಿತಾತ್ಮಕ ಮತ್ತು ಕಾನೂನು ಪ್ರಕ್ರಿಯೆಗಳು ನಡೆಯುತ್ತಿದ್ದವು. ಸಂಬಂಧಪಟ್ಟ ದಾಖಲೆಗಳು ಹಾಗೂ ಆದೇಶಗಳ ಆಧಾರದ ಮೇಲೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಜಾಗವನ್ನು ಸರ್ಕಾರದ ಸುಪರ್ದಿಗೆ ತೆಗೆದುಕೊಂಡರು.

ಜಿಲ್ಲಾಡಳಿತದ ಅಧಿಕಾರಿಗಳು, ಕಂದಾಯ ಇಲಾಖೆ ಸಿಬ್ಬಂದಿ ಹಾಗೂ ಪೊಲೀಸ್ ಭದ್ರತೆಯೊಂದಿಗೆ ಕಾರ್ಯಾಚರಣೆ ನಡೆಸಲಾಯಿತು. ಜಾಗವನ್ನು ವಶಕ್ಕೆ ಪಡೆದ ಬಳಿಕ ಸರ್ಕಾರದ ಸ್ವತ್ತಾಗಿದೆ ಎಂಬ ಫಲಕವನ್ನು ಅಳವಡಿಸಲಾಗಿದೆ.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಮಾತನಾಡಿ, ಬಳ್ಳಾ–ರಿಯ ಟಿ.ಎಸ್ ಸಂಖ್ಯೆ 102 ರಲ್ಲಿರುವ ಒಟ್ಟು 4 ಎಕರೆ 44 ಸೆಂಟ್ಸ್ ವಿಸ್ತೀರ್ಣದ ಜಾಗವನ್ನು ಜಿಲ್ಲಾಧಿಕಾರಿಗಳ ಆದೇಶದನ್ವಯ ಇಂದು ಕಂದಾಯ ಇಲಾಖೆ ಅಧಿಕಾರಿಗಳು ಸರ್ಕಾರದ ಸುಪರ್ದಿಗೆ ಪಡೆದಿದ್ದಾರೆ.

ಈ ಜಮೀನು 1884 ರಿಂದಲೂ ಮೆಸೋನಿಕ್ ಹಾಲ್' ಹೆಸರಿನಲ್ಲಿ ಖಾಸಗಿಯವರ ಬಳಕೆಯಲ್ಲಿ ಇತ್ತು. ಆದರೆ, ಈ ಆಸ್ತಿಗೆ ಸಂಬಂಧಿಸಿದಂತೆ ನಿಯಮಾನುಸಾರ ಯಾವುದೇ ರೀತಿಯ ಸದುಪಯೋಗ ಅಥವಾ ಅಗತ್ಯ ನವೀಕರಣಗಳು ಆಗಿರಲಿಲ್ಲ. ಈ ಹಿನ್ನೆಲೆಯಲ್ಲಿ ಜಾಗವನ್ನು ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಇದನ್ನು ಸರ್ಕಾರದ ವಶಕ್ಕೆ ಪಡೆಯುವಂತೆ ಕಂದಾಯ ಇಲಾಖೆಗೆ ಮಹತ್ವದ ಆದೇಶ ಹೊರಡಿಸಿದ್ದರು.

ಜಿಲ್ಲಾಧಿಕಾರಿಗಳ ಖಡಕ್ ಆದೇಶದ ಬೆನ್ನಲ್ಲೇ ಅಧಿಕಾರಿಗಳ ತಂಡ, ಶನಿವಾರ ಸ್ಥಳಕ್ಕೆ ಭೇಟಿ ನೀಡಿ ಕಾನೂನಾತ್ಮಕವಾಗಿ ಜಮೀನನ್ನು ಸರ್ಕಾರದ ವಶಕ್ಕೆ ಪಡೆದುಕೊಂಡಿದೆ ಎಂದು ಮಾಹಿತಿ ನೀಡಿದರು.

ಕಾರ್ಯಾಚರಣೆಯಲ್ಲಿ ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಡಿಡಿಎಲ್‌ಆರ್ ಪ್ರಮೋದ್, ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ, ಕಂದಾಯ ನಿರೀಕ್ಷಕರು, ಮಹಾನಗರಪಾಲಿಕೆ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಇತರರು ಹಾಜರಿದ್ದರು.

# ಜ್ಯೋತಿ ಸೂರ್ಯಕಾಂತ್ ಅಲ್ಮಾಜೆಗೆ ಹಿರೇಮಠದಲ್ಲಿ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಭಾಲ್ಕಿಯ ಹಿರೇಮಠ ಸಂಸ್ಥಾನದಲ್ಲಿ ಜ್ಯೋತಿ ಸೂರ್ಯಕಾಂತ್ ಅಲ್ಮಾಜೆ ಅವರನ್ನು ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ಸನ್ಮಾನಿಸಿ ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪೂಜ್ಯರು, ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದು ಹೆಸರು ಗಳಿಸುತ್ತಿರುವ ಮಹಿಳೆಯರು ಇತರರಿಗೆ ಮಾದರಿಯಾಗಿದ್ದು, ಅವರ ಸೇವೆ ಮತ್ತು ಸಾಧನೆಗಳು ಸಮಾಜಕ್ಕೆ ಪ್ರೇರಣೆಯಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ಶಿವಬಸವ ಸ್ವಾಮೀಜಿ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿವೃತ್ತ ಅಧ್ಯಕ್ಷ ಶಶಿಧರ ಕೋಸಂಬೆ, ಸಾಹಿತಿ ರಾಜು ಜುಬರೆ, ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕಾಶಿನಾಥ ಭೂರೆ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಸನ್ಮಾನ ಸ್ವೀಕರಿಸಿದ ಜ್ಯೋತಿ ಸೂರ್ಯಕಾಂತ್ ಅಲ್ಮಾಜೆ ಅವರು ಹಿರೇಮಠ ಸಂಸ್ಥಾನದ ಗೌರವಕ್ಕೆ ಕೃತಜ್ಞತೆ ಸಲ್ಲಿಸಿ, ಸಮಾಜಮುಖಿ ಕಾರ್ಯಗಳಲ್ಲಿ ಇನ್ನಷ್ಟು ತೊಡಗಿಸಿಕೊಳ್ಳುವ ಸಂಕಲ್ಪ ವ್ಯಕ್ತಪಡಿಸಿದರು. ಕಾರ್ಯಕ್ರಮವು ಆತ್ಮೀಯ ಹಾಗೂ ಗೌರವಪೂರ್ಣ ವಾತಾವರಣದಲ್ಲಿ ನೆರವೇರಿತು.

# ವಸತಿ ರಹಿತರ ಆಶ್ರಯ ಕೇಂದ್ರದಲ್ಲಿ ವಿಶ್ವ ಪರಿಸರ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲಾಡಳಿತ, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾ ಕೌಶಲ್ಯ ಮಿಷನ್, ನಗರಸಭೆ ಕೊಪ್ಪಳ, ಪಟ್ಟಣ ಪಂಚಾಯತ್ ಭಾಗ್ಯನಗರ ಮತ್ತು ಡಾ. ಬಿ.ಆರ್.ಅಂಬೇಡ್ಕರ್ ಶಿಕ್ಷಣ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ–ನಲ್ಮ್) ಯೋಜನೆಯ ನಗರ ವಸತಿ ರಹಿತರ ಆಶ್ರಯ ಕೇಂದ್ರದ ಆವರಣದಲ್ಲಿ ಶನಿವಾರ (ಜೂ. 6ರಂದು) ಸಸಿ ನೆಡುವ ಮೂಲಕ 2026ರ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

ಈ ಕಾರ್ಯಕ್ರಮಕ್ಕೆ ಕೊಪ್ಪಳ ನಗರಸಭೆಯ ಪ್ರಭಾರಿ ಪೌರಾಯುಕ್ತರು ಆಗಿರುವ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಎಂ. ಗುಂಡೂರು ಅವರು ಚಾಲನೆ ನೀಡಿದರು. ಬಳಿಕ ಮಾತನಾಡಿ, ನಗರದ ಎಲ್ಲಾ ನಾಗರಿಕರು ಪ್ರತಿಯೊಬ್ಬರು ಅವರವರ ಕುಟುಂಬದ ಸವಿನೆನಪಿಗಾಗಿ ಒಂದೊಂದು ಸಸಿಗಳನ್ನು ನೆಟ್ಟು, ಅವುಗಳನ್ನು ತಮ್ಮ ಕುಟುಂಬದ ಸದಸ್ಯರ ತರ ಜೋಪಾನ ಮಾಡಿ ಹೆಮ್ಮರವಾಗಿ ಬೆಳಸಬೇಕು. ಈ ನಿಟ್ಟಿನಲ್ಲಿ ಕೊಪ್ಪಳ ನಗರವನ್ನು ಹಸಿರು ನಗರವನ್ನಾಗಿಸುವಂತೆ ಮಾಡಲು ಎಲ್ಲರೂ ಕೈಜೋಡಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಭಾಗ್ಯನಗರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಸುರೇಶ್ ಬಬ್ಲಾದಿ, ಕೊಪ್ಪಳ ನಗರಸಭೆ ಸಹಾಯಕ ಕಾರ್ಯಪಾಲಕ ಅಭಿಯಂತರರದ ಹೆಚ್.ಎ.ಬಂಡಿವಡ್ಡರ್, ಸಹಾಯಕ ನಿರ್ದೇಶಕರಾದ ಮಂಜುನಾಥ ಬೆಲ್ಲದ, ಜಿಲ್ಲಾ ಕೌಶಲ್ಯ ಮಿಷನ್ ಅಭಿಯಾನ ವ್ಯವಸ್ಥಾಪಕರಾದ ಅಹ್ಮದ್ ಹುಸೇನ್, ಸಿಬ್ಬಂದಿ ವಿಶ್ವನಾಥ ಬಿ., ಹಿರಿಯ ಆರೋಗ್ಯ ನಿರೀಕ್ಷಕರಾದ ಜಯಶೀಲಾ ಮತ್ತು ರಾಜೇಶ್ವರಿ, ಡಾ ಬಿ.ಆರ್.ಅಂಬೇಡ್ಕರ್ ಶಿಕ್ಷಣ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆಯ ಮುಖ್ಯಸ್ಥರಾದ ಗೀರಿಶ್ ಸೇರಿದಂತೆ ಕೊಪ್ಪಳ ನಗರಸಭೆ ಸಿಬ್ಬಂದಿಗಳು, ವಸತಿ ರಹಿತರ ಆಶ್ರಯ ಕೇಂದ್ರದಲ್ಲಿ ಆಶ್ರಯ ಪಡೆದ ಶಿಬಿರಾರ್ಥಿಗಳು, ಕೇಂದ್ರದ ಸಿಬ್ಬಂದಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯಾದ್ಯಂತ ಅಕ್ಟೋಬರ 1, 2026ನ್ನು ಅರ್ಹತಾ ದಿನಾಂಕವನ್ನಾಧರಿಸಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನಲೆಯಲ್ಲಿ ಜೂನ್ 30 ರಿಂದ ಜುಲೈ 29 ವರೆಗೆ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 7 ಮತಕ್ಷೇತ್ರ ಒಳಗೊಂಡಂತೆ ಒಟ್ಟು 1785 ಮತಗಟ್ಟೆಗಳು ಇದ್ದು, ಪ್ರತಿ ಮತಗಟ್ಟೆಗೆ ಓರ್ವ ಮತಗಟ್ಟೆ ಅಧಿಕಾರಿ ಹಾಗೂ ಪ್ರತಿ 10 ರಿಂದ 12 ಮತಗಟ್ಟೆ ಮಟ್ಟದ ಅಧಿಕಾರಿಗಳ ಮೇಲೆ ಓರ್ವ ಸುಪರವೈಜರನ್ನು ನೇಮಕ ಮಾಡಲಾಗಿದೆ. ಮುಧೋಳ ಮತಕ್ಷೇತ್ರದಲ್ಲಿ 212 ಮತಗಟ್ಟೆಗಳು, ತೇರದಾಳ 236, ಜಮಖಂಡಿ 232, ಬೀಳಗಿ 265, ಬಾದಾಮಿ 260, ಬಾಗಲಕೋಟೆ 319 ಹಾಗೂ ಹುನಗುಂದ ಮತಕ್ಷೇತ್ರದಲ್ಲಿ 261 ಮತಗಟ್ಟೆಗಳಿವೆ ಎಂದು ತಿಳಿಸಿದರು.

ಜೂನ್ 4, 2026ರ ಅಂತ್ಯಕ್ಕೆ 803389 ಮಹಿಳೆಯರು, 832639 ಹಾಗೂ 100 ಇತರೆ ಸೇರಿ ಒಟ್ಟು 16,36,128 ಮತದಾರರಿದ್ದಾರೆ. ಜಿಲ್ಲೆಯ 7 ಮತಕ್ಷೇತ್ರಗಳ ಮ್ಯಾಪಿಂಗ್ ಕಾರ್ಯ ಶೇ.97.07 ರಷ್ಟು ನಡೆದಿದ್ದು, ಮುಧೋಳ ಮತಕ್ಷೇತ್ರದಲ್ಲಿ 98.29 ರಷ್ಟು ಮ್ಯಾಪಿಂಗ್ ಕಾರ್ಯ ನಡೆದರೆ, ತೇರದಾಳದಲ್ಲಿ ಶೇ.95.31, ಜಮಖಂಡಿ ಶೇ.99.32, ಬೀಳಗಿ ಶೇ.98.53, ಬಾದಾಮಿ ಶೇ.97.35, ಬಾಗಲಕೋಟೆ ಶೇ.92.20 ಹಾಗೂ ಹುನಗುಂದ ಕ್ಷೇತ್ರದಲ್ಲಿ ಶೇ.99.03 ರಷ್ಟು ಮ್ಯಾಪಿಂಗ್ ಮಾಡಲಾಗಿದೆ. ಈ ಕಾರ್ಯದಲ್ಲಿ ವಿವಿಧ ರಾಜಕೀಯ ಪಕ್ಷಗಳ ಬೂತ ಮಟ್ಟದ ಏಜೆಂಟರು ಪರಿಷ್ಕರಣಾ ಪ್ರಕ್ರಿಯೆಯಲ್ಲಿ ಭಾಗವಹಿಸಲಿದ್ದು, ಮನೆ ಮನೆ ಭೇಟಿ ಸಮಯದಲ್ಲಿ ಸಾರ್ವಜನಿಕರು ಸಹಕರಿಸುವಂತೆ ಜಿಲ್ಲಾಧಿಕಾರಿಗಳು ವಿನಂತಿಸಿದರು.

ಪರಿಷ್ಕರಣೆಗೆ ಸಂಬಂಧಿಸಿದಂತೆ ನಮೂನೆಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ ಚುನಾವಣಾ ಅಧಿಕಾರಿಗಳ ವೆಬ್‌ಸೈಟ್ http://bagalkot.nic.in, ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್ http://ceo.karnataka.gov.in, ಭಾರತ ಚುನಾವಣಾ ಆಯೋಗದ ವೆಬ್‌ಸೈಟ್ http://eci.gov.inಗೆ ಭೇಟಿ ನೀಡಿ ಪಡೆಯಬಹುದಾಗಿದೆ. ಈ ಬಗ್ಗೆ ಮಾಹಿತಿ ಬೇಕಾದಲ್ಲಿ ಸಹಾಯವಾಣಿ ಸಂಖ್ಯೆ 1950ಗೆ ಕರೆ ಮಾಡಬಹುದಾಗಿದೆ ಎಂದು ಅವರು ತಿಳಿಸಿದರು.

ಬಾಗಲಕೋಟೆ ಜಿಲ್ಲೆಯ ಮತದಾರರಿಗೆ ಅನುಕೂಲವಾಗುವಂತೆ ಪ್ರತಿ ಗ್ರಾ.ಪಂ, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ವಾರ್ಡಗಳಲ್ಲಿ ಓಟರ್ ಪೇಸಿಲಿಟೇಶನ್ ಸೆಂಟರ ಹಾಗೂ ಪ್ರತಿ ಮತಗಟ್ಟೆಯಲ್ಲಿ ಬಿಎಲ್‌ಓ ಪೇಸಿಲಿಟೇಶನ್ ಸೆಂಟರ ಪ್ರಾರಂಭಿಸಲು ಕ್ರಮಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಉಪಸ್ಥಿತರಿದ್ದರು.

**ಮುಧೋಳ ಮತಕ್ಷೇತ್ರದ ಮತದಾರರ ನೋಂದಣಾಧಿಕಾರಿ ವಿರುಪಾಕ್ಷ ಬಣಗಾರ (9880166825), ಸಹಾಯಕ ಮತದಾರರ ನೋಂದಣಾಧಿಕಾರಿ ಚಿಕ್ಕಪ್ಪ ನಾಯಕ (8861387349), ತೇರದಾಳ ಕ್ಷೇತ್ರದಲ್ಲಿ ಗಂಗಾಧರ ಮಾಳಗಿ (9741695388), ಗಿರೀಶ ಸವದಿ (7090995555), ಜಮಖಂಡಿ ಕ್ಷೇತ್ರದಲ್ಲಿ ಶ್ವೇತಾ ಬೀಡಿಕರ (9535425369), ಅನೀಲ ಬಡಿಗೇರ (8904669613), ಬೀಳಗಿ ಕ್ಷೇತ್ರದಲ್ಲಿ ವಿರೂಪಾಕ್ಷಿ ಬನಗಾರ (9880166825), ವಿನೋದ ಹತ್ತಳ್ಳಿ (ಬೀಳಗಿ–9901332717), ವಾಸುದೇವ ಸ್ವಾಮಿ (ಬಾಗಲಕೋಟೆ–9980067196), ಎಸ್.ಎಫ್.ಬೊಮ್ಮಣ್ಣವರ (ಬಾದಾಮಿ–9449817560), ಬಾದಾಮಿ ಕ್ಷೇತ್ರಕ್ಕೆ ಅರುಣ ಕುಲಕರ್ಣಿ (9880488881), ಎಸ್.ಎಫ್.ಬೊಮ್ಮಣ್ಣವರ (9449817560), ಬಾಗಲಕೋಟೆ ಕ್ಷೇತ್ರಕ್ಕೆ ಸಂತೋಷ ಜಗಲಾಸರ (6364400262), ವಾಸುದೇವಸ್ವಾಮಿ (ಬಾಗಲಕೋಟೆ–9980067196), ಪ್ರದೀಪಕುಮಾರ ಹಿರೇಮಠ (ಹುನಗುಂದ–8073688515), ಹುನಗುಂದ ಕ್ಷೇತ್ರಕ್ಕೆ ಪ್ರದೀಪಕುಮಾರ ಹಿರೇಮಠ (ಹುನಗುಂದ–8073688515), ಅಮರೇಶ ಪಮ್ಮಾರ (ಇಲಕಲ್ಲ–9597197182).**

# ಕ್ರಿಕೆಟ್ ಟೂರ್ನಮೆಂಟ್: ಬೆಳಗಾವಿಯ ಭರತೇಶ ತಂಡ ಚಾಂಪಿಯನ್

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ನಗರದ ಬಿ.ವ್ಹಿ.ವ್ಹಿ.ಎಸ್. ಹೋಮಿಯೋಪಥಿಕ್ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಅಂತರ ಹೋಮಿಯೋಪಥಿಕ್ ಕಾಲೇಜುಗಳ ಡಾ.ಹಾನಿಮನ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯಲ್ಲಿ ಬೆಳಗಾವಿಯ ಭರತೇಶ ಹೋಮಿಯೋಪಥಿಕ್ ಕಾಲೇಜು ತಂಡ ಚಾಂಪಿಯನ್ ಪಟ್ಟ ಪಡೆಯಿತು.

ಅತ್ಯಂತ ತುರುಸಿನಿಂದ ಕೂಡಿದ್ದ ಅಂತಿಮ ಪಂದ್ಯದಲ್ಲಿ ಬೆಳಗಾವಿಯ ಶಿವಬಸವ ಜ್ಯೋತಿ ಹೋಮಿಯೋಪಥಿಕ್ ವೈದ್ಯಕೀಯ ಮಹಾವಿದ್ಯಾಲಯದ ತಂಡವನ್ನು ಮಣಿಸಿದ ಬೆಳಗಾವಿಯ ಭರತೇಶ ಹೋಮಿಯೋಪಥಿಕ್ ವೈದ್ಯಕೀಯ ಮಹಾವಿದ್ಯಾಲಯದ ತಂಡ ಟ್ರೋಫಿಯನ್ನು ತನ್ನದಾಗಿಸಿಕೊಂಡಿತು.




ಚಾಂಪಿಯನ್ ಭರತೇಶ ಹೋಮಿಯೋಪಥಿಕ ವೈದ್ಯಕೀಯ ಮಹಾವಿದ್ಯಾಲಯ ತಂಡಕ್ಕೆ ಉಜ್ಜೀವನ ಫೈನಾನ್ಸ್ ಕಾರ್ಪೋರೇಶನ್ ಹಿರಿಯ ಮ್ಯಾನೇಜರ್ ತಿಮ್ಮಣ್ಣ ಮೀರಕರ 25 ಸಾವಿರ ರೂ.ಗಳ ನಗದು ಬಹುಮಾನ ನೀಡಿದರು.

ರನ್ನರ ಆಫ್ ಟ್ರೋಫಿ ಪಡೆದ ಬೆಳಗಾವಿಯ ಶಿವಬಸವ ಜ್ಯೋತಿ ಹೋಮಿಯೋಪಥಿಕ ವೈದ್ಯಕೀಯ ಮಹಾವಿದ್ಯಾಲಯ ತಂಡಕ್ಕೆ ಪ್ರಾಚಾರ್ಯ ಡಾ. ಅರುಣ ಹೂಲಿ 15 ಸಾವಿರ ರೂ.ಗಳ ಬಹುಮಾನ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬವಿವಿ ಸಂಘದ ಆಟೋಮೋಬೈಲ್ ವಿಭಾಗದ ಅಶೋಕ ಕರಡಿ, ಕ್ರೀಡೆಗಳು ಇಚ್ಛಾಶಕ್ತಿ, ಏಕಾಗ್ರತೆ ಹಾಗೂ ಸ್ಪರ್ಧಾ ಮನೋಭಾವ ಬೆಳೆಸುತ್ತವೆ ಎಂದರು.

ಟೂರ್ನಾಮೆಂಟ ಯಶಸ್ವಿಗೆ ಸಹಾಯ ಸಹಕಾರ ನೀಡಿದ ಶರಣಪ್ಪ ಅಮರಣ್ಣವರ, ಗಂಗಾಬಾಯಿ ಅಮರಣ್ಣವರ ದಂಪತಿಗಳನ್ನು, ಸಂಪತ್ತ ದಾರಕ, ಪಂಕಜ ಕಾಸುಂಡೆ ಹಾಗೂ ಕೋಟೆನಾಡು ಸಾಮಾಜಿಕ ಮಾಧ್ಯಮದ ಪ್ರಜ್ವಲ ಸಣ್ಣಕ್ಕಿ, ರಾಯಲ್ ಬಾಗಲಕೋಟೆಯ ಸಾಮಾಜಿಕ ಮಾಧ್ಯಮದ ಪ್ರಜ್ವಲ ಇಳಿಗೇರ ಅವರನ್ನು ಸನ್ಮಾನಿಸಲಾಯಿತು.

ಕ್ರೀಡಾ ಸಂಯೋಜಕರುಗಳಾದ ಡಾ.ಮಂಜುನಾಥ ಪಾಟೀಲ, ಡಾ.ಪ್ರದೀಪ, ಡಾ.ದೀಪಕ, ಡಾ.ಲಕ್ಷ್ಮಿ. ಡಾ.ವಿನೋದ, ಡಾ.ಸಾಯಿಕೃಷ್ಣ, ಡಾ.ಹಾಜಿ ತಾಂಬೋಲಿ, ಪ್ರಾಧ್ಯಾಪಕರುಗಳಾದ ಡಾ.ವಿಜಯಲಕ್ಷ್ಮಿ ಪಾಟೀಲ, ಡಾ.ತೃಪ್ತಿ ಶಿಂಧೆ, ಡಾ.ರವಿ.ಕೋಟೆಣ್ಣವರ, ಡಾ.ಸುಧೀರ ಬೆಟಗೇರಿ, ಡಾ. ಫಾತಿಮಾ ಬಾಲಸಿಂಗ್, ಡಾ.ರುದ್ರೇಶ ಕೊಪ್ಪಳ, ಡಾ.ಅಮರೇಶ ಬಳಗಾನೂರ, ಡಾ.ಆಖಿಲಾ ಹುಲ್ಲೂರ ಉಪಸ್ಥಿತರಿದ್ದರು.

# ಆರೋಗ್ಯಕರ ಸಮಾಜಕ್ಕಾಗಿ ಪರಿಸರ ರಕ್ಷಿಸಿ: ಬಸವರಾಜ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಗಿಡ, ಮರ ಕಡಿದು ಹಾಕುತ್ತಿರುವುದರಿಂದ ಹೆಚ್ಚು ಉಷ್ಣತೆಯ ಪರಿಸರವುಂಟಾಗಿದ್ದು, ಇದು ಮನುಕುಲ ಹಾಗೂ ಪ್ರಾಣಿ, ಪಕ್ಷಿಗಳ ಜೀವನಕ್ಕೆ ಕುತ್ತು ತಂದಿದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿ ಬಸವರಾಜ ಅಂಗಡಿ ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಾಗಲಕೊಟೆ , ಪಟ್ಟಣ ಪಂಚಾಯತ ಶಿರೂರ, ಆರೋಗ್ಯ ಇಲಾಖೆ ಶಿರೂರ ಹಾಗೂ ಸರ್ಕಾರಿ ಹಿರಿಯ ಗಂಡು ಮತ್ತು ಹೆಣ್ಣು ಮಕ್ಕಳ ಶಾಲೆ ಶಿರೂರ ಇವರ ಸಹಯೊಗದಲ್ಲಿ ಸ್ಥಳೀಯ ಶಾಲಾ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಗಿಡ ನೆಡುವುದರ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಮನುಕುಲದ ಉಳಿವು ಹಾಗೂ ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಪರಿಸರ ರಕ್ಷಣೆಯ ಜವಾಬ್ದಾರಿ ನಿಭಾಯಿಸಿ ಗಿಡ, ಮರಗಳನ್ನು ನೆಟ್ಟು ಪೋಷಿಸಿ, ಬೆಳೆಸಬೇಕು. ತಂದೆ–ತಾಯಿ ಹೆಸರಿನಲ್ಲಿ ಗಿಡ ನೆಟ್ಟು ಕರ್ತವ್ಯ ಪಾಲಿಸಬೇಕು. ಇದಕ್ಕಾಗಿ ಪ್ರತಿಜ್ಞೆ ಮಾಡಬೇಕು ಎಂದು ಬಸವರಾಜ ಅಂಗಡಿ ಹೇಳಿದರು. ಪಟ್ಟಣ ಪಂಚಾಯತ ವ್ಯವಸ್ಥಾಪಕ ಯು.ಜಿ.ವರದಪ್ಪನವರ ಮಾತನಾಡಿ, ಪರಿಸರವನ್ನು ನಾವು ಕಾಪಾಡಿದರೆ ಅದು ನಮ್ಮನ್ನು ರಕ್ಷಣೆ ಮಾಡುತ್ತದೆ. ಆ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಗಿಡ ನೆಟ್ಟು ಬೆಳೆಸಲು ಮುಂದಾಗಬೇಕಿದೆ ಎಂದರು.

ರೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ಎಫ್ .ಮಾಯಾಚಾರಿ, ಪ್ಲಾಸ್ಟಿಕ್ ವಸ್ತುಗಳನ್ನು ಬಳಕೆ ಮಾಡಿ ಪರಿಸರ ಹಾಳು ಮಾಡಬಾರದು ಎಂದು ಹೇಳಿ, ಪರಿಸರ ಕಾಳಜಿ ಪ್ರತಿಯೊಬ್ಬರ ಆದ್ಯ ಕರ್ತವ್ಯ ಎನ್ನುವುದನ್ನು ಅರಿತುಕೊಳ್ಳಬೇಕಿದೆ ಎಂದರು.

ಎಸ್ ಡಿಎಂಸಿ ಅಧ್ಯಕ್ಷೆ ಜ್ಯೋತಿ ಅಧ್ಯಕ್ಷತೆ ವಹಿಸಿದ್ದರು. ವಿದ್ಯಾರ್ಥಿನಿ ಗಂಗಮ್ಮ ಪರಿಸರದ ಮಹತ್ವ ಕುರಿತು ಮಾತನಾಡಿ, ಪರಿಸರ ರಕ್ಷಣೆ–ಯ ವಿಷಯದಲ್ಲಿ ನಾಗರಿಕರು ನಿರ್ವಹಿಸಬೇಕಾದ ಕರ್ತವ್ಯದ ಬಗ್ಗೆ ತಿಳಿಸಿಕೊಟ್ಟರು.

ಮುಖ್ಯೋಪಾಧ್ಯಾಯಿನಿ ಎಂ.ಬಿ.ತಾವರಗೇರಿ ಉಪಸ್ಥಿತರಿದ್ದರು. ಧರ್ಮಸ್ಥಳ ಯೋಜನೆಯ ಮೇಲ್ವಿಚಾರಕಿ ಸವಿತಾ ಕಾರ್ಯಕ್ರಮ ಸ್ವಾಗತಿಸಿ, ಕಾರ್ಯಕ್ರಮ ನಿರ್ವಹಿಸಿದರು. ಶಾಲಾ ಶಿಕ್ಷಕರು, ಒಕ್ಕೂಟದ ಅಧ್ಯಕ್ಷರು, ಸದಸ್ಯರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅಗತ್ಯ ಬೀಜ, ರಸಗೊಬ್ಬರ ಲಭ್ಯತೆಗೆ ಕ್ರಮ: ಡಿಸಿ ಸಂಗಪ್ಪ

## ಜಿಲ್ಲೆಯಲ್ಲಿ 85 ಸಾವಿರ ಹೆಕ್ಟೇರ್ ಬಿತ್ತನೆ | ಮಳೆ ಕೊರತೆಯಾದಲ್ಲಿ ಪರ್ಯಾಯ ಬೆಳೆಗೆ ಸಲಹೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳು ಸಮರ್ಪಕವಾಗಿ ಲಭ್ಯವಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶುಕ್ರವಾರ ಸಂಜೆ ಜರುಗಿದ ಮುಂಗಾರು ಹಂಗಾಮಿನ ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಜನವರಿಯಿಂದ ಜೂನ್ ವರೆಗೆ ವಾಡಿಕೆಯಂತೆ 93.8 ಎಂಎಂ ಮಳೆ ಆಗಬೇಕಿತ್ತು. ಆದರೆ 101 ಎಂ.ಎಂ ಮಳೆ ಆಗಿರುತ್ತದೆ. ಬಾದಾಮಿ, ಮುಧೋಳ, ರಬಕವಿ–ಬನಹಟ್ಟಿ ತಾಲೂಕಿನಲ್ಲಿ ಹೆಚ್ಚಿಗೆ ಮಳೆಯಾಗಿದೆ. ಈಗಾಗಲೇ ಜಿಲ್ಲೆಯಲ್ಲಿ 85 ಸಾವಿರ ಹೆಕ್ಟೆರ್‌ನಷ್ಟು ಕಬ್ಬು ಹಾಗೂ ಇತರೆ ಬೆಳೆಗಳ ಬಿತ್ತನೆ ಆಗಿರುತ್ತದೆ. ಇನ್ನು ಬಿತ್ತನೆ ಮಾಡದ ರೈತರು ಸಮರ್ಕವಾಗಿ ಮಳೆ ಆಗುವವರೆಗೆ ಬಿತ್ತನೆ ಕಾರ್ಯ ಮಾಡಬಾರದೆಂದು

ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆ ಇರುವುದಿಲ್ಲ. ಅಗತ್ಯ ದಾಸ್ತಾನು ಲಭ್ಯವಿರುತ್ತದೆ. ವಿವಿಧ ಬಿತ್ತನೆ ಬೀಜಗಳಿಗೆ 7128 ಕ್ವಿಂಟಲ್ ಬೇಡಿಕೆ ಇದ್ದು, ಈ ಪೈಕಿ 3580 ಕ್ವಿಂಟಲ್ ಬಿತ್ತನೆ ಬೀಜ ಸರಬರಾಜು ಆಗಿದೆ. 1319 ಕ್ವಿಂಟಲ್‌ನಷ್ಟು ವಿತರಣೆ ಮಾಡಲಾಗಿದೆ. 2261 ಕ್ವಿಂಟಲ್‌ನಷ್ಟು ಇದೆ. ವಿವಿಧ ರಸಗೊಬ್ಬರ ಸೇರಿ ಒಟ್ಟು 55711 ಮೆ.ಟನ್ ಬೇಡಿಕೆ ಪೈಕಿ 26463 ಮೆ.ಟನ್ ಹಂಚಿಕೆಯಾಗಿದೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು ಆರ್.ಎಸ್.ಕೆಗಳಲ್ಲಿ ರೈತರಿಗೆ ವ್ಯವಸ್ಥಿತವಾಗಿ ವಿತರಣೆಗೆ ಕ್ರಮಕೈಗೊಳ್ಳಬೇಕು. ಯಾವ ಯಾವ ಬೆಳೆಗೆ ಯಾವ ಯಾವ ಗೊಬ್ಬರವನ್ನ ಎಷ್ಟು ಹಾಕಬೇಕು ಎಂಬುದರ ಬಗ್ಗೆ ಮಾಹಿತಿ ಬೋರ್ಡ ಹಾಕಿ ರೈತರಲ್ಲಿ ಜಾಗೃತಿ ಮೂಡಿಸಲು ಮುಂದಾಗಬೇಕು ಎಂದರು.

ಬೀಜ ಮತ್ತು ರಸಗೊಬ್ಬರ ಮಾರಾಟಗಾರರು ನಿಗದಿತ ದರದಲ್ಲಿಯೇ ವಿತರಣೆ ಮಾಡಬೇಕು. ಕೃತಕ ಅಭಾವ ಸೃಷ್ಟಿಸುವುದು, ಹೆಚ್ಚಿನ ದರ ವಸೂಲಿ ಮಾಡುವುದು ಅಥವಾ ಕಳಪೆ ಗುಣಮಟ್ಟದ ಕೃಷಿ ಪರಿಕಗಳನ್ನು ಮಾರಾಟ ಮಾಡುವವರ ವಿರುದ್ಧ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ತಾಲೂಕಾ ಮಟ್ಟದ ಅಧಿಕಾರಿಗಳು ನಿರಂತರವಾಗಿ ಪರಿಶೀಲನೆ ನಡೆಸಿ, ರೈತರಿಗೆ ಅಗತ್ಯ ಮಾಹಿತಿ ಹಾಗೂ ಮಾರ್ಗದರ್ಶನ ನೀಡಬೇಕೆಂದರು. ಮಳೆ ವಿಳಂಬವಾದಲ್ಲಿ ಪರ್ಯಾಯ ಯೋಜನೆಯಲ್ಲಿ ತಿಳಿಸಿದ ಬೇಸಾಯ ಕ್ರಮಗಳನ್ನು ಅನುಸರಿಸಲು ತಿಳಿಸಿದರು. ಅಲ್ಲದೇ ತೋವಿವಿಯ ಸಹ ಸಂಶೋಧನಾ ನಿರ್ದೇಶಕ ಡಾ.ವಸಂತ ಗಾಣಗೇರ ಅವರು ವಿವಿಧ ಬೆಳೆಯ ತಳಿಗಳ ಬಗ್ಗೆ ಮಾಹಿತಿ ನೀಡಿದರು.

ರಸಗೊಬ್ಬರ ಸರಬರಾಜು ಮಾಡುತ್ತಿರುವ ಇಫ್ಕೋ, ಐ.ಪಿ.ಸಿ ಹಾಗೂ ಸಿಐಎಲ್ ಕಂಪನಿಗಳು ರೈಲ್ವೆ ಮೂಲಕ ಬಾಗಲಕೋಟೆಯಲ್ಲಿ ರಸಗೊಬ್ಬರ ಇಳಿಸದೇ ವಿಜಯಪುರದಲ್ಲಿ ಇಳಿಸುತ್ತಿರುವದರಿಂದ ಅಲ್ಲಿಂದ ತಾಲೂಕಾವಾರು ಸರಬರಾಜಿಗೆ ತೊಂದರೆ–ಯಾಗಿದೆ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದಾಗ ಬಾಗಲಕೋಟೆ ಮೂಲಕವೇ ವಿಜಯಪೂರಕ್ಕೆ ಗೂಡ್ಸ್ ರೈಲು ಹೋಗುತ್ತಿರುವದರಿಂದ ಬಾಗಲಕೋಟೆಯಲ್ಲಿ ಗೊಬ್ಬರ ಇಳಿಸಲು ಕ್ರಮಕೈಗೊಳ್ಳಲು ವಿವಿಧ ಕಂಪನಿ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಖೇತ ಬಚಾವೋ ಅಭಿಯಾನದ ಬಗ್ಗೆ ರೈತರಲ್ಲಿ ಅರಿವು ಮೂಡಿಸಲು ತಿಳಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ಹಕಾಟೆ, ರೇಷ್ಮೆ ಇಲಾಖೆಯ ಉಪನಿರ್ದೇಶಕ ಎಸ್.ಎಂ.ಕೋರೆ, ಜಮಖಂಡಿ ವಿಭಾಗದ ಕೃಷಿ ಉಪನಿರ್ದೇಶಕಿ ಮಂಜುಳಾ ಬಸವರೆಡ್ಡಿ, ಮಾರ್ಕೆಟಿಂಗ್ ಫೆಡರೇಷನ್ ಅಧಿಕಾರಿ ಸುಪ್ರಿಯಾ ಸೇರಿದಂತೆ ಆಯಾ ತಾಲೂಕಿ ಕೃಷಿ ಅಧಿಕಾರಿಗಳು ಹಾಗೂ ರಸಗೊಬ್ಬರ ಸರಬರಾಜು ಕಂಪನಿಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಶಾಲಾ ಕಾಲೇಜುಗಳಲ್ಲಿ ಡೊನೇಷನ್ ಹಾವಳಿ ತಪ್ಪಿಸಲು ಮನವಿ



**ಬಸವಕಲ್ಯಾಣ:** ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕ್ ಅಧ್ಯಕ್ಷರಾದ ಸುರೇಶ ಜಮು ಇವರ ನೇತ್ರತ್ವದಲ್ಲಿ ತಾಲೂಕಿನಂತೆ ಖಾಸಗಿ ಶಾಲಾ ಕಾಲೇಜುಗಳಲ್ಲಿ ಡೋನೆಷನ್ ಹಾವಳಿ ತಪ್ಪಿಸಲು ತಹಸೀಲ್ದಾರರ ಮುಖಾಂತರ ಜಿಲ್ಲಾ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷರಾದ ಆಕಾಶ ಮುತ್ತೇ ,ಉಪಾಧ್ಯಕ್ಷರಾದ ಸುನಿಲ, ಕೋರೆ. ದತ್ತಾತ್ರಿ ಧೂರೆ, ಲಕ್ಷ್ಮೀಕಾಂತ ಜಾಂತೆ. ಅಣ್ಣರಾವ್ ಪುರುಷೋತ್ತಮ್ ,ವಿಜಯ್ ಭಾಸ್ಕರ್ ದವಲೆ. ಅಂಕುಶ ದರೆ, ಶಂಕರ ನಾರಾಯಣಪುರ, ಪ್ರಜ್ವಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗೊಬ್ಬರ ನೀಡುವಲ್ಲಿ ತಾರತಮ್ಯ



**ಚಿಟಗುಪ್ಪ:** 2026–27 ನೇ ಸಾಲಿನ ಮುಂಗಾರು ಹಂಗಾಮಿನ ರಸಗೊಬ್ಬರ ವಿತರಣೆಯಲ್ಲಿ ಕೃಷಿ ಅಧಿಕಾರಿಗಳಿಂದ ತಾರತಮ್ಯವಾಗಿದೆ ಎಂದು ಪಿಕೆಪಿಎಸ್ ಅಧ್ಯಕ್ಷ ರಾಚಪ್ಪ ಶೇರಿಕಾರ ತಿಳಿಸಿದ್ದಾರೆ.

ತಾಲೂಕಿನ ಮೀನಕೇರಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಒಂದು ಕೆ.ಜಿ. ರಸಗೊಬ್ಬರವೂ ಕೂಡ ಸರಬರಾಜು ಮಾಡಿಲ್ಲ, ಈಗಾಗಲೇ ರೈತರು ಬಿತ್ತಣಿಕೆ ಪ್ರಾರಂಭ ಮಾಡಿದ್ದಾರೆ. ಗ್ರಾಮದ ರೈತರು ರಸಗೊಬ್ಬರಕ್ಕಾಗಿ ಪರದಾಡುತಿದ್ದಾರೆ. ಕಳೆದ ಹತ್ತು ದಿನಗಳಿಂದ ಸತತವಾಗಿ ಜಂಟಿ ಕೃಷಿ ನಿರ್ದೇಶಕರು ಬೀದರ ಹಾಗೂ ಸಹಾಯಕ ಕೃಷಿ ವಿರ್ದೇಶಕರು ಹುಮನಾಬಾದ ಇವರ ಕಛೇರಿಗಳಿಗೆ ಭೇಟಿ ನೀಡಿ ಹಾಗೂ ದೂರವಾಣಿ ಮುಖಾಂತರ ರಸಗೊಬ್ಬರಕ್ಕಾಗಿ ಮನವಿ ಮಾಡಿದ್ದೇವೆ. ಪ್ರತಿ ಪಿಕೆಪಿಎಸ್' ಗೆ 10 ಟನ್‌ಗಳಷ್ಟು ಗೊಬ್ಬರ ನೀಡುತ್ತೇವೆ ಎಂದು ಭರವಸೆ ನೀಡಿರುತ್ತಾರೆ, ಆದರೆ ಇನ್ನೂ ಕೂಡ ನಮ್ಮ ಪಿಕೆಪಿಎಸ್' ಗೆ ಗೊಬ್ಬರ ಪೂರೈಕೆ ಮಾಡಿಲ್ಲ. ಅಕ್ಕ ಪಕ್ಕದ ಪಿಕೆಪಿಎಸ್ ಗಳಿಗೆ ರಸಗೊಬ್ಬರ ಪೂರೈಕೆ ಮಾಡಿದ್ದಾರೆ. ನಮ್ಮ ಸಂಘಕ್ಕೆ ಪೂರೈಕೆ ಮಾಡದೇ ಕೃಷಿ ಅಧಿಕಾರಿಗಳು ಮೀನಕೇರಾ ಗ್ರಾಮದ ಅನ್ನದಾತರಿಗೆ ಅನ್ಯಾಯ ಮಾಡಿದ್ದಾರೆ. ಇದರ ಬಗ್ಗೆ ಅಧಿಕಾರಿಗಳಿಗೆ ಸ್ಪಷ್ಟನೆ ಕೇಳಿದರೆ ಇನ್ನು ಎರಡು ದಿವಸದಲ್ಲಿ ಕಾಂಪ್ಲೆಕ್ಸ್ ಗೊಬ್ಬರ ಬರುತ್ತಿದೆ, ಬಂದ ಮೇಲೆ ಸರಬರಾಜು ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ಕಾಂಪ್ಲೆಕ್ಸ್ ಗೊಬ್ಬರದ ದರ 2000/– ಗಡಿದಾಟಿದ್ದು ಡಿ.ಎ.ಪಿ. ಗೊಬ್ಬರದ ದರ 1350/– ಇದ್ದು ಇವೆರಡರ ನಡುವೆ 650/–ರೂಪಾಯಿಯಗಳ ಅಂತರವಿದೆ, ರೈತರಿಗೆ ಹೊರೆಯಾಗುತ್ತದೆ ಮತ್ತು ಎರಡು ದಿವಸದಲ್ಲಿ 50% ಬಿತ್ತಣಿಕೆ ಮುಗಿದಿರುತ್ತದೆ ಆವಾಗ ಗೊಬ್ಬರ ಪೂರೈಸಿದರೆ ಏನು ಪ್ರಯೋಜನ ಆದ್ದರಿಂದ ತಕ್ಷಣವೇ ಮೀನಕೇರಾ ಗ್ರಾಮಕ್ಕೆ ಒದಗಿಸಬೇಕಿದ್ದ 10 ಟನ್ ಡಿ.ಎ.ಪಿ. ಗೊಬ್ಬರ ಪೂರೈಕೆ ಮಾಡುವಂತೆ ಕ್ರಮಕೈಗೊಂಡು ಮೀನಕೇರಾ ಗ್ರಾಮದ ರೈತರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಮೀನಕೇರಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ರಾಚಪ್ಪ ಶೇರಿಕಾರ್ ಅವರು ಜಿಲ್ಲಾಧಿಕಾರಿಗಳಿಗೆ ಬರೆದ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

# ಮಕ್ಕಳಲ್ಲಿ ಪರಿಸರ ರಕ್ಷಣೆಯ ಪ್ರಜ್ಞೆ ಬೆಳೆಸಬೇಕು: ರಕರಡ್ಡಿ



**ಬಾಗಲಕೋಟೆ:** ವಿದ್ಯಾರ್ಥಿಗಳು ಪರಿಸರ ಪ್ರಜ್ಞೆಯನ್ನು ಬೆಳೆಸಿಕೊಂಡು ಶಾಲಾ ಆವರಣ, ಸಾರ್ವಜನಿಕ ಸ್ಥಳಗಳಲ್ಲಿ ಸಸಿ ನೆಟ್ಟು ಜೋಪಾನ ಮಾಡಿ ಬೆಳೆಸುವ ಮೂಲಕ ಪರಿಸರ ರಕ್ಷಣೆಯ ಕಾರ್ಯ ಮಾಡಬೇಕು ಎಂದು ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ಎಸ್.ಎಸ್.ರಕರಡ್ಡಿ ಹೇಳಿದರು.

ಶುಕ್ರವಾರ ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಶಾಲಾ ಆವರಣದಲ್ಲಿ ವಿವಿಧ ಸಸಿಗಳನ್ನು ನೆಟ್ಟು ಮಾತನಾಡಿದ ಅವರು, ಮನುಷ್ಯನಿಗೆ ಇಂದು ಒಳ್ಳೆಯ ಆಹಾರ, ಕುಡಿಯು ನೀರಿನ ಜೊತೆ ಉತ್ತಮ ಪರಿಸರದ ಅಗತ್ಯತೆಯೂ ಇದೆ. ಹೀಗಾಗಿ ಪ್ರತಿಯೊಬ್ಬರೂ ಪರಿಸರ ರಕ್ಷಣೆಗೆ ಒತ್ತು ನೀಡಬೇಕಿದೆ ಎಂದರು.

ಶಿಕ್ಷಕ ರವಿ ಕೆಂಚನ್ನವರ ಮಾತನಾಡಿ, ಇಂದಿನ ಮಕ್ಕಳಲ್ಲಿ ಪರಿಸರ ಪ್ರಜ್ಞೆಯನ್ನು ಮೂಡಿಸುವುದು ಅತೀ ಅವಶ್ಯವಾಗಿದೆ. ಪರಿಸರ ಉಳಿದರೆ ನಾವು ಉಳಿಯುತ್ತೇವೆ ಎನ್ನುವ ಸತ್ಯವನ್ನು ಅವರಿಗೆ ತಿಳಿಸಬೇಕಿದೆ. ಗಿಡ, ಮರ ಬೆಳೆಸುವ ಜವಾಬ್ದಾರಿಯ ಜಾಗೃತಿ ಮೂಡಿಸಬೇಕಿದೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಮಾತನಾಡಿ, ಪರಿಸರ ದಿನಾಚರಣೆಯ ದಿನದಂದು ಮಾತ್ರ ಸಸಿ ನೆಟ್ಟು ಬಿಟ್ಟರೆ ಸಾಲದು. ನೆಟ್ಟಿರುವ ಸಸಿಗಳಿಗೆ ನಿತ್ಯ ನೀರುಣಿಸಿ, ಪಾಲನೆ, ಪೋಷಣೆ ಮಾಡಿ ಬೆಳೆಸುವ ಜವಾಬ್ದಾರಿಯನ್ನು ಪ್ರತಿಯೊಬ್ಬರೂ ನಿಭಾಯಿಸಿದಾಗ ಪರಿಸರ ದಿನಾಚರಣೆ ಅರ್ಥಪೂರ್ಣವಾಗುತ್ತದೆ ಎಂದರು. ಶಿಕ್ಷಕಿ ಅಂಜಲಿ ಎಲ್. ಮಕ್ಕಳಿಗೆ ಪರಿಸರ ಕುರಿತಾಗಿ ಪಾಠ ಮಾಡಿದರು. ತೋಟದ ಶಾಲೆಯ ಮುಖ್ಯಗುರು ಎಸ್.ಎನ್. ಅಮಾತಿಗೌಡರ, ಶಿಕ್ಷಕರಾದ ಜಗನ್ನಾಥ ಪತ್ತಾರ, ಎಲ್.ಎ.ಪಾಟೀಲ, ಎ.ಎಸ್.ಮಂತ್ರಿ, ಆರ್.ಎಸ್.ಅಬ್ಬಿಗೇರಿ, ಆಶಾರಾಣಿ ಮೇಟಿ ಇದ್ದರು.

# 2028ಕ್ಕೆ ರಾಜ್ಯದಲ್ಲಿ ಬಿಜೆಪಿ ಸರ್ಕಾರ: ಭಾಂಡಗೆ





• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಅಭಿವೃದ್ಧಿ ಶೂನ್ಯ ಕಾಂಗ್ರೆಸ್ಸ ಸರಕಾರದಿಂದ ಜನ ಬೇಸತ್ತಿದ್ದು, 2028 ಕ್ಕೆ ಮತ್ತೆ ರಾಜ್ಯದಲ್ಲಿ ಬಿಜೆಪಿ ಪಕ್ಷ ಅಧಿಕಾರಕ್ಕೆ ಬಂದು ಸರಕಾರ ನಡೆಸಲಿದೆ ಎಂದು ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಹೇಳಿದರು.

ಅವರು ಭಾರತೀಯ ಜನತಾ ಪಕ್ಷ ಬಾಗಲಕೋಟೆ ಮತಕ್ಷೇತ್ರದಿಂದ ಮುಚಖಂಡಿಯ ಗೌರಿಶಂಕರ ಕಲ್ಯಾಣ ಮಂಟಪದಲ್ಲಿ ಶನಿವಾರ ಹಮ್ಮಿಕೊಂಡ ಪಂಡಿತ ದೀನದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ-2026ರ ಅಂಗವಾಗಿ ಮತಕ್ಷೇತ್ರದ ಗ್ರಾಮೀಣ ಹಾಗೂ ನಗರ ಮಂಡಲಗಳ ಎರಡು ದಿನದ ಪ್ರಶಿಕ್ಷಣ ವರ್ಗಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ದೇಶದ ಸರ್ವಾಂಗಿಣ ಅಭಿವೃದ್ದಿಯೇ ಭಾರತೀಯ ಜನತಾ ಪಕ್ಷದ ಜನ್ಮವಾಗಿದ್ದು, ಪಕ್ಷಕ್ಕಿ ರಾಷ್ಟ್ರಭಕ್ತಿ ಹಾಗೂ "ದೇಶ ಮೊದಲು" ಎಂಬ ಧ್ಯೇಯೋದ್ದೇಶಗಳೊಂದಿಗೆ ಕಾರ್ಯನಿರ್ವಹಿಸುತ್ತಿದೆ, ಕರ್ನಾಟಕದಲ್ಲಿ ಕಾಂಗ್ರೆಸ್ಸ ಸರಕಾರದ ಅಭಿವೃದ್ದ ಶೂನ್ಯ ಆಡಳಿತದಿಂದ ಜನ ಬೇಸತ್ತಿದ್ದಾರೆ, ಮುಂದೆ ಬರುವ 2028ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷ ಜಯಗಳಿಸಲಿದ್ದು ರಾಜ್ಯದಲ್ಲಿ ಸರಕಾರ ರಚಿಸಲಿದೆ ಎಂದರು.

ಕಾರ್ಯಕ್ರಮದಲ್ಲಿ ಪಿ. ಎಚ್. ಪೂಜಾರ ಹಾಗೂ ಹನಮಂತ ನಿರಾಣಿ ಮಾತನಾಡಿ, ಮುಂಬರುವ ವಿಧಾನ ಸಭಾ ಚುನಾವಣೆಯಲ್ಲಿ ಬಾಗಲಕೋಟೆ ಜಿಲ್ಲೆಯ ಎಲ್ಲ ಕ್ಷೇತ್ರಗಳಲ್ಲೂ ಬಿಜೆಪಿ ಗೆಲ್ಲಲಿದೆ, ಕಾರ್ಯಕರ್ತರು ಪಕ್ಷದ ತತ್ವಗಳನ್ನು, ಬಿಜೆಪಿ ಸರಕಾರದ ಸಾಧನೆಗಳನ್ನು ಜನರಿಗೆ ತಲುಪಿಸುವಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು

ಮಾಜಿ ಶಾಸಕ ಡಾ. ವೀರಣ್ಣ ಚರಂತಿಮಠ ಅವರು ಮಾತನಾಡಿ ಪಕ್ಷದ ಸೈದ್ಧಾಂತಿ-ಕ ಮೌಲ್ಯಗಳು, ಸಂಘಟನಾ ಚಾತುರ್ಯ ಹಾಗೂ ರಾಷ್ಟ್ರೀಯ ಚಿಂತನೆಗಳನ್ನು ತಳಮಟ್ಟದ ಕಾರ್ಯಕರ್ತರಿಗೆ ಮನವರಿಕೆ ಮಾಡಿಕೊಡುವ ನಿಟ್ಟಿನಲ್ಲಿ ಪ್ರಶಿಕ್ಷಣ ವರ್ಗಗಳು ಅತ್ಯಂತ ಮಹತ್ವದ ಪಾತ್ರವಹಿಸುತ್ತವೆ. ಏಕಾತ್ಮ ಮಾನವತಾವಾದದ ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಪಕ್ಷವನ್ನು ಮತ್ತಷ್ಟು ಬಲಿಷ್ಠವಾಗಿ ಸಂಘಟಿಸಲು ಈ ತರಬೇತಿಯು ಪ್ರೇರಣೆಯಾಗಲಿದೆ ಎಂದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ ಅವರು ಪ್ರಸ್ತಾವಿಕವಾಗಿ ಮಾತನಾಡಿದರು,

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿ.ಟಿ. ಉಪಾಧ್ಯ, ರಾಜು ಮುದೇನೂರ, ರಾಜು ರೇವಣಕರ್. ಎಸ್ಸಿಮೋರ್ಚಾ ಜಿಲ್ಲಾಧ್ಯಕ್ಷ ಮುತ್ತಣ್ಣ ಬೇಣ್ಣೂರ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಭಾಗಿರಥಿ ಪಾಟೀಲ, ಲಕ್ಷ್ಮೀ ನಾರಾಯಣ ಕಾಸಟ್, ಸತ್ಯನಾರಾಯಣ ಹೆಮಾದ್ರಿ, ನಗರ ಮಂಡಲ ಅದ್ಯಕ್ಷ ಬಸವರಾಜ ಹುನಗುಂದ, ಗ್ರಾಮೀಣ ಮಂಡಲ ಅಧ್ಯಕ್ಷ ಸುರೇಶ ಕೋಣ್ಣೂರ, ಪ್ರಶಿಕ್ಷಣ ವರ್ಗದ ಸಂಚಾಲಕರಾದ ಶಂಕರ ಹುನೂರ, ಮಲ್ಲೇಶ ವಿಜಾಪುರ,ಕಲ್ಲಪ್ಪ ಭಗವತಿ, ಸೇರಿದಂತೆ ಗ್ರಾಮೀಣ ಹಾಗೂ ನಗರ ಮಂಡಲದ ಬಿಜೆಪಿ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಹೆಲ್ಮೆಟ್ ಧರಿಸದ ವಾಹನ ಸವಾರರಿಂದ ದಂಡ ವಸೂಲಿ



**ವಿಜಯನಗರ(ಹೊಸಪೇಟೆ):** ಜಿಲ್ಲೆಯಾದ್ಯಂತ ಜೂನ್ 2ರಿಂದ ಹೆಲ್ಮೆಟ್ ಧಾರಣೆ ಕಡ್ಡಾಯ ನಿಯಮ ಜಾರಿಯಾಗಿದೆ, ಹೆಲ್ಮೆಟ್ ಧರಿಸದ ಬೈಕ್ ಸವಾರರಿಗೆ ಗುರುವಾರ ಹೊಸಪೇಟೆ ಬಸ್ ಸ್ಟಾಂಡ್ ನಿಲ್ದಾಣ ಪಕ್ಕದಲ್ಲಿ ಬೆಳಗ್ಗೆಯೇ ರಸ್ತೆಗಿಳಿದಿದ್ದ ಟ್ರಾಫಿಕ್ ಪೊಲೀಸರು, ಹೆಲ್ಮೆಟ್ ಧರಿಸದ ದ್ವಿಚಕ್ರ ವಾಹನ ಸವಾರರು ಪೊಲೀಸರು 500 ದಂಡ ವಿಧಿಸಿದರು.

ASI ಶ್ರೀಧರ್ ಮಾತನಾಡಿ ಕೋರ್ಟ್ ಆದೇಶ ಹಾಗೂ ಜಿಲ್ಲಾ ಪೊಲೀಸ್ ಇಲಾಖೆ ಆದೇಶದಂತೆ ಠಾಣೆ ವ್ಯಾಪ್ತಿಯಲ್ಲಿ ಹೆಲ್ಮೆಟ್ ಧಾರಣೆ ಕುರಿತು ಈಗಾಗಲೇ ಸಾಕಷ್ಟು ಜಾಗೃತಿ ಜಾಥಾ,ಅಭಿಯಾನ,ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗಿದೆ. ಆದರೂ ಹೆಲ್ಮೆಟ್ ಧರಿಸದ ಸವಾರರಿಗೆ ದಂಡ ವಿಧಿಸುತ್ತಿರುವುದಾಗಿ ತಿಳಿಸಿದರು. ಈ ವೇಳೆ ASI ಶ್ರೀಧರ್ ಪ್ರಭು ರೆಡ್ಡಿ ಸಿಬ್ಬಂದಿಗಳು ಇದ್ದರು.

## ವಿಶ್ವ ಪರಿಸರ ದಿನ ಆಚರಣೆ



**ಬಾಗಲಕೋಟೆ:** ಭಾರತೀಯ ಜನತಾ ಪಾರ್ಟಿ ಹಾಗೂ ನಗರಸಭೆ ವತಿಯಿಂದ ವಿಧಾನ ಪರಿಷತ್ ಶಾಸಕರಾದ ಪಿ.ಎಚ್.ಪೂಜಾರ ಅವರ ನೇತೃತ್ವದಲ್ಲಿ ವಿಶ್ವ ಪರಿಸರ ದಿನ ಆಚರಿಸಲಾಯಿತು. ನಗರದ ಹಳೇ ಪ್ರವಾಸಿ ಮಂದಿರದ ಆವರಣದಲ್ಲಿ ಸ್ವಚ್ಛತೆ ಮಾಡಿ ಸಸಿ ನೆಟ್ಟು ನೀರು ಹಾಕುವ ಮೂಲಕ ವಿಶ್ವ ಪರಿಸರ ದಿನವನ್ನು ಆಚರಣೆ ಮಾಡಿದರು.

ಕಾರ್ಯಕ್ರಮದಲ್ಲಿ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ,ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ತಾಯಿ ಹೆಸರಿನಲ್ಲಿ ಒಂದು ಸಸಿ ನೆಟ್ಟು ಪೋಷಿಸಲು ಕರೆ ನೀಡಿರುವುದು ಆ ಹಿನ್ನೆಲೆಯಲ್ಲಿ ನಮ್ಮ ಸುತ್ತಮುತ್ತಲಿನ ವಾತಾವರಣ ಹಸಿರಿಕರಣ ಮಾಡಿದಾಗ ಮಾತ್ರ ಸಮೃದ್ದ ನಾಡು ಕಟ್ಟಲು ಸಾಧ್ಯವಾಗುತ್ತದೆ ಎಂದರು. ವಿಪ ಶಾಸಕ ಪಿ.ಎಚ್.ಪೂಜಾರ ಮಾತನಾಡಿ, ಜಾಗತಿಕ ತಾಪಮಾನದಿಂದ ಇಡೀ ವಿಶ್ವವೇ ನಲಗುತ್ತಿದೆ ಆದ್ದರಿಂದ ಕಾಡುಗಳನ್ನು ಬೆಳಸಬೇಕು ಮತ್ತು ಉಳಿಸಬೇಕಾಗಿದೆ. ಪರಿಸರ ಉಳಿಸಿದರೆ ದೇಶ ಉಳಿದಿತ್ತು. ಪರಿಸರ ನಾಶವಾಗಬಾರದು ಅದನ್ನು ಉಳಿಸುವ ನಿಟ್ಟಿನಲ್ಲಿ ನಾವೆಲ್ಲರೂ ಸ್ವಯಂ ಪ್ರೇರಣೆಯಿಂದ ಕೆಲಸ ಮಾಡಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಗರಸಭಾ ಮಾಜಿ ಅಧ್ಯಕ್ಷೆ ಶ್ರೀಮತಿ ಸವಿತಾ ಲೆಂಕೆನ್ನವರ, ಶಿವು ಹಣಮಕನ್ನವರ, ನಿವೃತ ಪ್ರಾಧ್ಯಾಪಕರಾದ ಮಹಾಂತೇಶ ಸಂಗಮ, ಮದಕಟ್ಟಿ, ವಾರ್ಡ್ ಅಧ್ಯಕ್ಷರಾದ ಯಚ್ಚರೇಶ್ ಮಾಯಾಚಾರಿ, ರಾಜು ಶಿಂತ್ರೆ, ದತ್ತು ಶಹಾಪುರ, ಡಾ. ಶೇಖರ ಮಾನೆ, ಶಂಭುಗೌಡ ಪಾಟೀಲ್, ಚಂದ್ರಕಾಂತ ಕೇಸನೂರ, ರಾಜು ಚಿತ್ತವಾಡಗಿ, ಯಲ್ಲಪ್ಪ ಅಂಬಿಗೇರ, ಕುಮಾರ್ ಗಿರಿಜಾ, ಅಪ್ಪಣ್ಣ ಲೆಂಕೆನ್ನವರ, ಮಲ್ಲಿಕಾರ್ಜುನ್ ಸುರಪುರ, ಶ್ರೀಮತಿ ಶಾಂತಾಬಾಯಿ ಗೋಣಿ, ಶೈಲು ಅಂಗಡಿ, ರಾಜು ಗೌಳಿ, ರಾಜು ಶ್ರೀರಾಮ, ನಗರಸಭೆ ಅಧಿಕಾರಿಗಳಾದ ಸತೀಶ ಖಜಿಡೋಣಿ, ಹಾಗೂ ಖಾಜಿ ಇನ್ನುಳಿದ ಅಧಿಕಾರಿಗಳು ಸಿಬ್ಬಂದಿ ವರ್ಗದವರು, ಮತ್ತು ಭಾರತೀಯ ಜನತಾ ಪಾರ್ಟಿ ಕಾರ್ಯಕರ್ತರು ಭಾಗವಹಿಸಿದ್ದರು.

## ಉತ್ತಮ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಪ್ರಭುರೆಡ್ಡಿ ನಲ್ ಬಲ್



**ಹುಮನಾಬಾದ್:** ಪ್ರಭುರೆಡ್ಡಿ ಅವರು ತಮ್ಮ ಶಿಕ್ಷಣ ಸೇವಾ ಅವಧಿಯಲ್ಲಿ ಕಲ್ಲೂರ ಗ್ರಾಮದಲ್ಲಿ ಉತ್ತಮ ಶಿಕ್ಷಕರಾಗಿ ವಿಶಿಷ್ಟ ಸೇವೆ ಸಲ್ಲಿಸಿದ್ದಾರೆ. ಅನೇಕ ವರ್ಷಗಳ ಕಾಲ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಮಾರ್ಗದರ್ಶನ ನೀಡಿದ ಅವರು, ಶಿಸ್ತುಬದ್ಧ ಬೋಧನೆ ಹಾಗೂ ವಿದ್ಯಾರ್ಥಿ ಸ್ನೇಹಿ ಮನೋಭಾವದಿಂದ ಶಾಲಾ ಸಮುದಾಯದಲ್ಲಿ ವಿಶೇಷ ಗುರುತನ್ನು ಪಡೆದಿದ್ದಾರೆ. ಶನಿವಾರ ಹುಮನಾಬಾದ್ ನಗರದ ಟೀಚರ್ ಕಾಲೂನಿಯ ಹತ್ತಿರ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ ವಯೂ ನಿವ್ರತ್ತಿ ಕಾರ್ಯಕ್ರಮ ನಡೆಯಿತು. ತಮ್ಮ ಸೇವಾ ಅವಧಿಯಲ್ಲಿ ಪ್ರಭುರೆಡ್ಡಿ ಅವರು ಅನೇಕ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದು, ಸಹೋದ್ಯೋಗಿಗಳು ಹಾಗೂ ಪೋಷಕರಿಂದ ಮೆಚ್ಚುಗೆ ಪಡೆದಿದ್ದಾರೆ. ಪಾಠದ ಜೊತೆಗೆ ವಿದ್ಯಾರ್ಥಿಗಳ ನೈತಿಕ ಮೌಲ್ಯಗಳ ಬೆಳವಣಿಗೆಗೂ ಅವರು ಹೆಚ್ಚಿನ ಒತ್ತು ನೀಡಿದ್ದರು. ಸೇವಾ ನಿವೃತ್ತಿ ಅಥವಾ ಗೌರವ ವಿದಾಯ ಸಂದರ್ಭದಲ್ಲಿ ಶಾಲಾ ಆಡಳಿತ ಮಂಡಳಿ ಹಾಗೂ ಸಹೋದ್ಯೋಗಿಗಳು ಅವರನ್ನು ಸನ್ಮಾನಿಸಿ, ಅವರ ಸೇವೆಯನ್ನು ಸ್ಮರಿಸಿದರು. ಕಾರ್ಯಕ್ರಮದಲ್ಲಿ ಅವರ ಶ್ರಮ ಹಾಗೂ ಕೊಡುಗೆಯನ್ನು ಪ್ರಶಂಸಿಸಿ ಶುಭಾಶಯಗಳನ್ನು ಸಲ್ಲಿಸಲಾಯಿತು. ಪ್ರಭುರೆಡ್ಡಿ ಅವರ ಮುಂದಿನ ಜೀವನ ಸುಖ, ಶಾಂತಿ ಹಾಗೂ ಆರೋಗ್ಯದಿಂದ ಕೂಡಿರಲಿ ಎಂದು ಎಲ್ಲರೂ ಹಾರೈಸಿದರು.

ಗೌರಮ್ಮ ಪ್ರಚಾರ್ಯರು,ರವಿಂದ್ರರೆಡ್ಡಿ. ಜಿಲ್ಲಾಧ್ಯಕ್ಷರು ಶಿಕ್ಷಕರ ಸಂಘ, ಡಾ.ಎಮ.ಎಸ್. ಬಾಸಗೂಡಿ. ಡಾ.ಎಮ.ಎಸ್. ಬಾಸಗೂಡಿ.,ಶ್ರೀಮತಿ ಲಕ್ಷ್ಮೀ, ಶಿಲಾ ಶಿಕ್ಷಕಿ, ಮಂಜುನಾಥ್, ರಾಜಕುಮಾರ ಹುಡಗೀಕರ, ನಾಗರಾಜ ರಘೋಜಿ, ಶ್ರೀನಿವಾಸರೆಡ್ಡಿ, ಆನಂತ ಶಿವನಾಯಕ, ಉಪಸ್ಥಿತರಿದ್ದರು.

## ಡಾ. ಸಚಿನ್ ಪಾಟೀಲ್‌ಗೆ ಪ್ರೈಡ್ ಆಫ್ ಕರ್ನಾಟಕ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಕರ್ನಾಟಕ ಮಿಡಿಯಾ ಕ್ಲಬ್‌ವತಿಯಿಂದ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಯುವ ವೈದ್ಯರಾದ ಡಾ. ಸಚಿನ್ ಪಾಟೀಲ್ ಅವರಿಗೆ ಪ್ರೈಡ್ ಆಪ್ ಕರ್ನಾಟಕ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಎಂಬಿಬಿಎಸ್ ಮುಗಿಸಿ ಇಂಟರ್ನಲ್ ಮೆಡಿಸಿನ್‌ನಲ್ಲಿ ಎಂಡಿ ವ್ಯಾಸಂಗ ಪೂರ್ಣಗೊಳಿಸಿದ ನಂತರ ವಿಜಯಶ್ರೀ ಆಸ್ಪತ್ರೆ ಪ್ರಾರಂಭಿಸಿ ಸೇವೆ ಸಲ್ಲಿಸುತ್ತಿದ್ದುದ್ದಲ್ಲದೇ, ಅನೇಕ ಹಳ್ಳಿಗಳಲ್ಲಿ ಉಚಿತ ವೈದ್ಯಕೀಯ ಶಿಬಿರ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಜನರಿಗೆ ಆರೋಗ್ಯದ ಬಗ್ಗೆ ಅರಿವು ಮೂಡಿಸಿ ವೈದ್ಯಕೀಯ ವೃತ್ತಿಯಲ್ಲಿ ತಮ್ಮದೇ ಛಾಪು ಮೂಡಿಸಿ ಅತೀವ ಸೇವೆ ಸಲ್ಲಿಸಿದ ಡಾ. ಸಚ್ಚಿನ್ ಪಾಟೀಲ್ ಅವರಿಗೆ ಪೂಜ್ಯಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ, ಪರಮ ಪೂಜ್ಯ ಸಿದ್ದರಾಯ ಸ್ವಾಮೀಜಿಯ ನೇತೃತ್ವದಲ್ಲಿ ಮತ್ತು ಕರ್ನಾಟಕ ಮೀಡಿಯಾ ಕ್ಲಬ್‌ನ ಅಧ್ಯಕ್ಷರಾದ ರಮೇಶ್ ಎಸ್‌ಜಿ ಹಾಗೂ ನಟ ಚೇತನ ಅವರ ಸಮ್ಮುಖದಲ್ಲಿ ವೈದ್ಯಕೀಯ ಸೇವೆ ಪರಿಗಣಿಸಿ ಡಾ. ಸಚ್ಚಿನ್ ಪಾಟೀಲ್ ಅವರಿಗೆ ಪ್ರೈಡ್ ಆಫ್ ಕರ್ನಾಟಕ ಪ್ರಶಸ್ತಿ ನೀಡಿ ಸತ್ಕರಿಸಿ ಆಶಿರ್ವದಿಸಲಾಯಿತು.

ಈ ಸಂಧರ್ಭದಲ್ಲಿ ಬೆಂಗಳೂರು ವಿಶ್ವವಿದ್ಯಾಲಯದ ಪ್ರಾಚಾರ್ಯರರು, ವಿದ್ಯಾರ್ಥಿಗಳು ಸೇರಿದಂತೆ ಗಣ್ಯರು, ಪ್ರಮುಖರು ಉಪಸ್ಥಿತರಿದ್ದರು.

## ಮುನಿಯಪ್ಪನವರಿಗೆ ಪ್ರಬಲ ಸಚಿವ ಸ್ಥಾನ: ಒತ್ತಾಯ

• **ಮಲ್ಲಮ್ಮ ನುಡಿ ವಾರ್ತೆ ದೇವನಹಳ್ಳಿ**



ಕರ್ನಾಟಕದಲ್ಲಿ ಮಾದಿಗ ಸಮುದಾಯದ ಜನಸಂಖ್ಯೆ ಹೆಚ್ಚಾಗಿದ್ದು ಅದಕ್ಕನುಗುಣವಾಗಿ ಮಂತ್ರಿಸ್ಥಾನ ನೀಡಬೇಕು, ಜನಪ್ರಿಯ ಶಾಸಕರು ಹಾಗೂ ಸಚಿವರಾಗಿರುವ ಪ್ರಬಲವಾದ ಸಚಿವ ಸ್ಥಾನ ನೀಡಬೇಕು ಎಂದು ಮಾದಿಗ ಸಮುದಾಯದ ಒಕ್ಕೂಟದಿಂದ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಒತ್ತಾಯ ಮಾಡುತ್ತೇವೆ ಎಂದು ಬುಳ್ಳಹಳ್ಳಿ ರಾಜಪ್ಪ ತಿಳಿಸಿದರು.

ಪಟ್ಟಣದ ಪರಿವೀಕ್ಷಣ ಮಂದಿರದಲ್ಲಿ ನಡೆದ ಸಭೆಯಲ್ಲಿ ಮಾತನಾಡಿ ಕೆ ಎಚ್ ಮುನಿಯಪ್ಪನವರು ಏಳು ಬಾರಿ ಲೋಕಸಭಾ ಸದಸ್ಯರಾಗಿ, ಎರಡು ಬಾರಿ ಕೇಂದ್ರ ಸಚಿವರಾಗಿ, ಅಪಾರ ಅನುಭವ ಹಾಗೂ ಅವರ ಹಿರಿತನಕ್ಕೆ ಸಚಿವ ಸ್ಥಾನ ನೀಡಬೇಕು, ಗೃಹ ಅಥವಾ ಕಂದಾಯ ಇಲಾಖೆಗಳನ್ನು ನಿರ್ವಹಿಸುವ ಶಕ್ತಿ ಇರುವ ಮುನಿಯಪ್ಪನವರಿಗೆ ಸಮಾಜ ಕಲ್ಯಾಣ ಇಲಾಖೆಯನ್ನಾದರೂ ನೀಡಬೇಕು, ಇಲ್ಲದಿದ್ದರೆ ಕಾಂಗ್ರೆಸ್ ನಲ್ಲಿರುವ ಎಲ್ಲ ಜನಪ್ರತಿನಿಧಿಗಳು ಕಾಂಗ್ರೆಸ್ ತೊರೆದು ಬಿಜೆಪಿಗೆ ಸೇರ್ಪಡೆಯಾಗುತ್ತೇವೆ, ಬರೀ ಬಲಗೈ ಸಮುದಾಯದವರನ್ನೇ ಮುನ್ನೆಲೆಗೆ ತರುತ್ತಿದ್ದು, ಎಡಗೈ ಸಮುದಾಯವನ್ನು ಕಡೆಗಣಿಸುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಎಂದು ತಮ್ಮ ಅಭಿಪ್ರಾಯವನ್ನು ತಿಳಿಸಿದರು. ಕೆಎಚ್ ಮುನಿಯಪ್ಪನವರಿಗೆ ಸ್ವಾಭಿಮಾನವಿದ್ದರೆ ಕೂಡಲೇ ತಮ್ಮ ಸಚಿವ ಸ್ಥಾನವನ್ನು ತ್ಯಜಿಸಿ ಹೊರಬರಲಿ ಪಕ್ಷಭೇದ ಮರೆತು ಎಲ್ಲ ಮಾದಿಗ ಸಮುದಾಯ ಒಂದಾಗಿ ತಮ್ಮ ಹಿಂದೆ ಬರಲಿದೆ, ಸಿದ್ದರಾಮಯ್ಯ ಹಾಗೂ ನೂತನ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಪ್ರಬಲ ಸಚಿವ ಸ್ಥಾನ ನೀಡಲಿ ಇಲ್ಲದಿದ್ದರೆ ರಾಜ್ಯಾದ್ಯಂತ ಮಾದಿಗ ಸಮುದಾಯದಿಂದ ಕಾಂಗ್ರೆಸ್ ವಿರುದ್ಧ ಹೋರಾಟ ನಡೆಸಲಾಗುವುದು ಎಂದರು.

## ರೋಟರಿ ಕ್ಲಬ್ ಸೆಂಟ್ರಲ್ ಆಶ್ರಯದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**




ವಿಶ್ವದಲ್ಲಿಯೇ ಸಮಾಜ ಸೇವೆಯಲ್ಲಿ ಮುಂಚೂಣಿಯಲ್ಲಿರುವ ರೋಟರಿ ಸಂಸ್ಥೆ ಇಂದು ಬಡ ಮಹಿಳೆಯರಿಗೆ ಉಚಿತ ಹೊಲಿಗೆ ಯಂತ್ರ ವಿತರಿಸುವುದು ಅವರ ಆರ್ಥಿಕ ಸ್ವಾವಲಂಬನೆಗೆ ಅಗತ್ಯತೆ ಇದೆ ಎಂದು ನಗರದ ಉಪ ವಿಭಾಗ ಪೋಲಿಸ್ ಅಧೀಕ್ಷಕರಾದ DYSPಜೆ.ಎಸ್.ನ್ಯಾಮಗೌಡರ ರವರು ತಿಳಿಸಿದರು.

ಬಡ ಮಹಿಳೆಯರು ತಮ್ಮ ಜೀವನೋಪಾಯಕ್ಕಾಗಿ ಹೊಲಿಗೆ ಯಂತ್ರದಿಂದ ಆಧಾಯ ವೃದ್ಧಿಸಿ ಕೊಳ್ಳಬೇಕು ಎಂದು ತಿಳಿಸಿದರು. ಇನ್ನು ರೋಟರಿ ಸಂಸ್ಥೆ ಅನೇಕ ಮಕ್ಕಳಿಗೆ ಪ್ರೋತ್ಸಾಹ, ಸಹಕಾರ, ಮಾರ್ಗದರ್ಶನ ಮತ್ತು ಮನೋಸ್ಥೆರ್ಯ ಮೂಡುವ ನಿಟ್ಟಿನಲ್ಲಿ ಎಸ್ ಎಸ್ ಎಲ್ ಸಿ ಮತ್ತು ಪಿ ಯು ಸಿ ವಿಭಾಗದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಿರುವುದು ಮೆಚ್ಚುಗೆ ವಿಷಯವಾಗಿದೆ. ಇನ್ನು ಮುಂದೆ ರೋಟರಿ ಸಂಸ್ಥೆ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಹಲವು ರೀತಿಯಲ್ಲಿ ಸಮುದಾಯ, ಆರೋಗ್ಯ ಇನ್ನಿತರ ಸೇವಾ ಕಾರ್ಯಗಳಲ್ಲಿ ಮುಂದುವರಿಯಲಿ ನಮ್ಮ ಇಲಾಖೆಯ ಬೆಂಬಲ ಇದೆ ಎಂದು ತಿಳಿಸಿದರು.

ರೋಟರಿ ಹಿರಿಯ ಸದಸ್ಯರಾದ ಟಿ.ಆಂಜನೇಯ ರವರು ಪ್ರಾಸ್ತಾವಿಕವಾಗಿ ಮಾತನಾಡಿದರು.


ರೋಟರಿ ಮತ್ತು ಹಿರಿಯ ಸದಸ್ಯರಾದ ವಾಸು ಕೊಳಗದ ರವರು ನಮ್ಮ ರೋಟರಿ ಸಂಸ್ಥೆ ಸದಸ್ಯರ ಸಹಕಾರದಿಂದ ಅನೇಕ ಉಚಿತ ಸೇವಾ ಕಾರ್ಯಗಳನ್ನು ಮಾಡುತ್ತಾ ಬಂದಿದ್ದೇವೆ ಎಂದು ತಿಳಿಸಿದರು. ಅಧ್ಯಕ್ಷ ಸ್ಥಾನ ವಹಿಸಿದ ಜಗದೀಶ ರವರು ರೋಟರಿ ಸಂಸ್ಥೆ ಇದುವರೆಗೆ ಸಾಮಾಜಿಕ ಕಾರ್ಯಗಳನ್ನು ಸದಸ್ಯರ ಸಹಕಾರದಿಂದ ಇದುವರೆಗೆ ನಡೆದಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರೋಟರಿ ಹಿರಿಯ ಸದಸ್ಯರಾದ ಶಿವಕುಮಾರ್ ಕಾರ್ಯಕ್ರಮ ನಿರೂಪಿಸಿ ಸ್ವಾಗತಿಸಿದರು. ಶ್ರೀಧರ ನಾಯಕ ವಂದಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸದಸ್ಯರಾದ ಜೆ.ನಾಗರಾಜ, ಪ್ರಕಾಶ ಛೋಪ್ರಾ,ಉಗಮರಾಜ ಬಂಬ, ಹೆಚ್.ಎಂ.ಮಂಜುನಾದ,ಸುರೇಶ್ ಬಂಬ, ದಿಲೀಪ್ ಮೋತಾ,ಎಂ.ಗುರುರಾಜ,ರಾಮ ಪ್ರಸಾದ ಕೆ,ಡಾ.ಶ್ರೀಕಾಂತ.ಬಿ.ಉಪಸ್ಥಿತರಿದ್ದರು.

## ಪವರ್ ಗ್ರಿಡ್ ಸಬ್ ಸ್ಟೇಷನ್ ನನ್ನ ಕನಸಿನ ಯೋಜನೆ: ಶಾಸಕ

• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**



ತಾಲೂಕಿನ ಚಿಮ್ಮಗಾಂವ ಗ್ರಾಮ ಪಂಚಾಯತ್ ವ್ಯಾಪ್ತಿಯ ಮಾಳೆಗಾಂವ ಗ್ರಾಮದಲ್ಲಿ ನಿರ್ಮಾಣಗೊಳ್ಳುತ್ತಿರುವ ಬೃಹತ್ ಪವರ್ ಗ್ರಿಡ್ ಸಬ್ ಸ್ಟೇಷನ್ ಕಾಮಗಾರಿ ಸ್ಥಳಕ್ಕೆ ಶಾಸಕ ಶ್ರೀ ಪ್ರಭು ಬಿ. ಚವ್ಹಾಣ್ ಅವರು ಇತ್ತೀಚೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ಮಾಳೆಗಾಂವ-ಚಿಮ್ಮೇಗಾಂವನಲ್ಲಿ ನಿರ್ಮಾಣಗೊಳ್ಳುತ್ತಿರುವ ಪವರ್ ಗ್ರಿಡ್ ಸಬ್ ಸ್ಟೇಷನ್ ನನ್ನ ರಾಜಕೀಯ ಜೀವನದ ಅತ್ಯಂತ ಮಹತ್ವಾಕಾಂಕ್ಷೆಯ ಕನಸಿನ ಯೋಜನೆಯಾಗಿದೆ" ಎಂದು ಹರ್ಷ ವ್ಯಕ್ತಪಡಿಸಿದರು.

**2,360 ಕೋಟಿ ರೂ. ವೆಚ್ಚದ ಬೃಹತ್ ಯೋಜನೆ**

ಈ ಯೋಜನೆಗಾಗಿ ತಾವು ಸುದೀರ್ಘ ಕಾಲ ಹೋರಾಟ ನಡೆಸಿರುವುದನ್ನು ಸ್ಮರಿಸಿದ ಶಾಸಕರು, "2010 ರಿಂದಲೇ ಈ ಯೋಜನೆಗಾಗಿ ನಿರಂತರ ಪ್ರಯತ್ನ ಮತ್ತು ಹೋರಾಟ ನಡೆಸಿಕೊಂಡು ಬರಲಾಗಿತ್ತು. ಆದರೆ, 2024 ರಲ್ಲಿ ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿ ಅವರ ವಿಶೇಷ ಮಾನ್ಯತೆ ಮತ್ತು ಆಶೀರ್ವಾದದಿಂದಾಗಿ ಈ ಬೃಹತ್ ಯೋಜನೆ ನಮ್ಮ ಭಾಗಕ್ಕೆ ಮಂಜೂರಾಗಿದೆ. ಸುಮಾರು 2,360 ಕೋಟಿ ರೂಪಾಯಿ ವೆಚ್ಚದ ಈ ಬೃಹತ್ ಯೋಜನೆಯನ್ನು 164 ಎಕರೆ ವಿಸ್ತೀರ್ಣದ ಜಮೀನಿನಲ್ಲಿ ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ನಿರ್ಮಿಸಲಾಗುತ್ತಿದೆ" ಎಂದು ಮಾಹಿತಿ ನೀಡಿದರು.

**ಶೇ. 80ರಷ್ಟು ಕಾಮಗಾರಿ ಪೂರ್ಣ: ಪ್ರಧಾನಿಗಳಿಂದ ಲೋಕಾರ್ಪಣೆ?:** "ಸದ್ಯ ಸಬ್ ಸ್ಟೇಷನ್‌ನ ಶೇ. 80 ರಷ್ಟು ಕಾಮಗಾರಿ ಯಶಸ್ವಿಯಾಗಿ ಪೂರ್ಣಗೊಂಡಿದೆ. ಇನ್ನುಳಿದ ಕೆಲಸಗಳು ಮುಂದಿನ ಎರಡು ಮೂರು ತಿಂಗಳುಗಳಲ್ಲಿ ಸಂಪೂರ್ಣವಾಗಿ ಮುಕ್ತಾಯಗೊಳ್ಳಲಿವೆ. ಈ ಐತಿಹಾಸಿಕ ಯೋಜನೆಯ ಲೋಕಾರ್ಪಣೆ ಕಾರ್ಯಕ್ರಮವನ್ನು ಪ್ರಧಾನಿ ನರೇಂದ್ರ ಮೋದಿ ಅವರೇ ಖುದ್ದಾಗಿ ಆಗಮಿಸಿ ನೆರವೇರಿಸಿಕೊಡಬೇಕೆಂದು ನಾವು ಮನವಿ ಮಾಡಿದ್ದೇವೆ ಎಂದು ಹರ್ಷ ವ್ಯಕ್ತಪಡಿಸಿದರು.

**ಸ್ಥಳೀಯರಿಗೆ ಉದ್ಯೋಗದ ಆಶಾಕಿರಣ; ಮುಂದಿನ ಗುರಿ ಸೋಲಾರ್ ಪಾರ್ಕ್!**

ಈ ಯೋಜನೆಯಿಂದಾಗಿ ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶಗಳಲ್ಲಿ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಶಾಸಕರು ಭರವಸೆ ನೀಡಿದರು. ಅಷ್ಟೇ ಅಲ್ಲದೆ, ಮುಂದಿನ ದಿನಗಳಲ್ಲಿ ಇದೇ ಭಾಗದ ಸುಮಾರು 2,500 ಎಕರೆ ಜಮೀನಿನಲ್ಲಿ ಬೃಹತ್ ಸೋಲಾರ್ ಪಾರ್ಕ್ ನಿರ್ಮಿಸುವ ಮಹತ್ತರ ಯೋಜನೆಯನ್ನೂ ಹೊಂದಲಾಗಿದೆ ಎಂದು ಅವರು ಈ ಸಂದರ್ಭದಲ್ಲಿ ಪ್ರಕಟಿಸಿದರು.

**ಮೂರು ರಾಜ್ಯಗಳಿಗೆ ವಿದ್ಯುತ್ ಸರಬರಾಜು**

ಕಾಮಗಾರಿ ಪರಿಶೀಲನೆ ವೇಳೆ ಉಪಸ್ಥಿತರಿದ್ದ ಪವರ್ ಗ್ರಿಡ್ ಸಂಸ್ಥೆಯ ಜನರಲ್ ಮ್ಯಾನೇಜರ್ ಗಣೇಶ್ ಅವರು ಮಾತನಾಡಿ, "ಈ ಸಬ್ ಸ್ಟೇಷನ್ ಅತ್ಯಂತ ಪ್ರಮುಖ ಕೇಂದ್ರವಾಗಲಿದ್ದು, ಇಲ್ಲಿಂದ ಕರ್ನಾಟಕ, ಮಹಾರಾಷ್ಟ್ರ ಹಾಗೂ ಆಂಧ್ರಪ್ರದೇಶ ಸೇರಿದಂತೆ ಒಟ್ಟು ಮೂರು ರಾಜ್ಯಗಳಿಗೆ ವಿದ್ಯುತ್ ಸರಬರಾಜು ಮಾಡಲಾಗುವುದು. ಇದರಿಂದ ಈ ಭಾಗದಲ್ಲಿ ಕೈಗಾರಿಕಾ ಪ್ರಗತಿ ಹಾಗೂ ಉದ್ಯೋಗಾವಕಾಶಗಳು ಗಣನೀಯವಾಗಿ ಹೆಚ್ಚಾಗಲಿವೆ. ಸ್ಥಳೀಯ ಸಾರ್ವಜನಿಕರು ಮತ್ತು ರೈತರ ಅಭೂತಪೂರ್ವ ಸಹಕಾರದಿಂದಾಗಿ ಇಷ್ಟೊಂದು ದೊಡ್ಡ ಯೋಜನೆ ಸಾಕಾರಗೊಳ್ಳುತ್ತಿದೆ" ಎಂದು ಕೃತಜ್ಞತೆ ಸಲ್ಲಿಸಿದರು.

ಪರಿಶೀಲನೆಯ ಸಂದರ್ಭದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಪವರ್ ಗ್ರಿಡ್ ಅಧಿಕಾರಿಗಳು ಹಾಗೂ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)